VOLUME: 16 | 21 JUNE 2026 | ಭಾನುವಾರ | RS: 2 | PAGE: 06 ISSUE: 131 ಇ-ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

ನಟಿ ಮೃಣಾಲ್ ಠಾಕೂರ್ ಮತ್ತು ನಟ ಧನುಷ್ ಮತ್ತೆ ಸುದ್ದಿಯಲ್ಲಿದ್ದಾರೆ. ಸೆಲೆಬ್ರಿಟಿಗಳಿಬ್ಬರೂ ಹಲವು ತಿಂಗಳಿಂದ ಡೇಟಿಂಗ್‌ನಲ್ಲಿದ್ದಾರೆ ಅನ್ನೋದು ವದಂತಿ ಹರಿದಾಡುತ್ತಲೇ ಇದ್ದವು. ಈ ಜೋಡಿ ಒಟ್ಟೊಟ್ಟಿಗೆ ಹಲವಾರು ವೇದಿಕೆ ಕಾರ್ಯಕ್ರಮದಲ್ಲಿ ಭಾಗಿಯಾದ ವಿಡಿಯೋ ಹಾಗೂ ಫೋಟೋಗಳು ವೈರಲ್ ಆಗಿದ್ದವು. ಅಲ್ಲದೇ ಇಬ್ಬರು ಮುಂದಿನ ಫೆಬ್ರವರಿಯಲ್ಲಿ ಮದುವೆಯಾಗಲಿದ್ದಾರೆ ಅನ್ನೋದು ಮಾತುಗಳು ಕೇಳಿಬಂದಿತ್ತು.



BHARATHA SARATHI
KANNADA DAILY NEWS PAPER

CALL 9740160669

# ಭಾರತ ಸಾರಥಿ

RNI KARKAN2011/44806

prabhavaa.com

ಸದಾ ನಿಮ್ಮೊಂದಿಗೆ ಕನ್ನಡ ದಿನಪತ್ರಿಕೆ



ಸಂಪಾದಕ
ಗಂಡಸಿ ಸದಾನಂದಸ್ವಾಮಿ



**"ಜಿಲ್ಲಾ ಉಸ್ತುವಾರಿ ಸಚಿವರು ಜವಾಬ್ದಾರಿಯ ಜಿಲ್ಲೆಯ ಕ್ಷೇತ್ರಗಳಲ್ಲಿ ವಾರಕ್ಕೆ ಒಮ್ಮೆ ಸ್ಥಳೀಯ ಶಾಸಕರೊಂದಿಗೆ ಈ ಇಲಾಖೆ ಮೂಲಕ ಜನಸ್ಪಂದನ ಸಭೆಗಳನ್ನು ನಡೆಸಬೇಕು. ಆನಂತರ ಅದನ್ನು ಪರಿಶೀಲಿಸುವ ಕೆಲಸ ಮಾಡಲಾಗುವುದು" ಎಂದರು. "31.05.2026 ರ ಒಳಗೆ ಪೂರ್ಣಗೊಂಡಿರುವ ಎಲ್ಲಾ ಕಟ್ಟಡಗಳಿಗೆ ವಿದ್ಯುತ್ ಸಂಪರ್ಕ ಪಡೆಯಲು ವಿನಾಯಿತಿ ನೀಡಲಾಗಿದ್ದು, ಈ ವಿಚಾರವಾಗಿ ಸರ್ಕಾರಿ ಆದೇಶ ಬಂದ ದಿನದಿಂದ 15 ದಿನಗಳ ಕಾಲಾವಕಾಶ ನೀಡಲಾಗುವುದು. ಕಟ್ಟಡ ಮಾಲೀಕರು ಕಟ್ಟಡದ ಜೊತೆಗಿನ ಫೋಟೋ ಹಾಗೂ ಜಿಪಿಎಸ್ ದಾಖಲೆ ಕಡ್ಡಾಯವಾಗಿ ಸಲ್ಲಿಕೆ ಮಾಡಬೇಕು"**

# ಸಾರ್ವಜನಿಕ ಹೋರಾಟಗಳ ಅಹವಾಲುಗಳನ್ನು ಆಲಿಸಲು "ಪ್ರಜಾಸೇವೆ ಇಲಾಖೆ"


ಬೆಂಗಳೂರು: "ಸಾರ್ವಜನಿಕರ ಕುಂದುಕೊರತೆಗಳು, ಸಾರ್ವಜನಿಕ ಹೋರಾಟಗಳ ಅಹವಾಲುಗಳನ್ನು ಆಲಿಸಲು "ಪ್ರಜಾಸೇವೆ ಇಲಾಖೆ" ಯನ್ನು ಹೊಸದಾಗಿ ಪ್ರಾರಂಭ ಮಾಡಲಾಗುತ್ತಿದೆ. ಸಚಿವರಿಗೆ ಇದರ ಪ್ರತ್ಯೇಕ ಜವಾಬ್ದಾರಿವಹಿಸಲಾಗುವುದು" ಎಂದು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ತಿಳಿಸಿದರು.

ಸಚಿವ ಸಂಪುಟ ಸಭೆಯ ನಂತರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, "ಜನರ ಕಷ್ಟ ಭಾವನೆಗಳನ್ನು ಅರಿತು, ಕಾನೂನು ಚೌಕಟ್ಟಿನಲ್ಲಿ ಸ್ಪಂದಿಸುವುದು ನಮ್ಮ ಸರ್ಕಾರದ ಗುರಿ. ಹೀಗಾಗಿ ಈ ಇಲಾಖೆಗೆ ಹಿರಿಯ ಐಎಎಸ್ ಅಧಿಕಾರಿಯನ್ನು ನೇಮಿಸಲಾಗುವುದು. ಅವರು ಎಲ್ಲಾ ಸಮಸ್ಯೆಗಳನ್ನು ಪರಿಶೀಲನೆ ಮಾಡಿ ಮಾಹಿತಿ ನೀಡುವ ಕೆಲಸ ಮಾಡಲಾಗುವುದು. ಈ ಮೂಲಕ ಜನರಿಗೆ ನ್ಯಾಯ ಒದಗಿಸಲು ಸರ್ಕಾರ ಮುಂದಾಗಿದೆ. ನನಗೆ ಹಾಗೂ ಇತರೇ ಸಚಿವರಿಗೆ ನೀಡಿದ ಮನವಿಗಳನ್ನು ಈ ಇಲಾಖೆ ಅಡಿಯಲ್ಲಿ ತರಲು ಆಲೋಚಿಸಲಾಗಿದೆ" ಎಂದರು.

"ಜಿಲ್ಲಾ ಉಸ್ತುವಾರಿ ಸಚಿವರು ಜವಾಬ್ದಾರಿಯ ಜಿಲ್ಲೆಯ ಕ್ಷೇತ್ರಗಳಲ್ಲಿ ವಾರಕ್ಕೆ ಒಮ್ಮೆ ಸ್ಥಳೀಯ ಶಾಸಕರೊಂದಿಗೆ ಈ ಇಲಾಖೆ ಮೂಲಕ ಜನಸ್ಪಂದನ ಸಭೆಗಳನ್ನು ನಡೆಸಬೇಕು. ಆನಂತರ ಅದನ್ನು ಪರಿಶೀಲಿಸುವ ಕೆಲಸ ಮಾಡಲಾಗುವುದು" ಎಂದರು. "31.05.2026 ರ ಒಳಗೆ ಪೂರ್ಣಗೊಂಡಿರುವ ಎಲ್ಲಾ ಕಟ್ಟಡಗಳಿಗೆ ವಿದ್ಯುತ್ ಸಂಪರ್ಕ ಪಡೆಯಲು ವಿನಾಯಿತಿ ನೀಡಲಾಗಿದ್ದು, ಈ ವಿಚಾರವಾಗಿ ಸರ್ಕಾರಿ ಆದೇಶ ಬಂದ ದಿನದಿಂದ 15 ದಿನಗಳ ಕಾಲಾವಕಾಶ ನೀಡಲಾಗುವುದು. ಕಟ್ಟಡ ಮಾಲೀಕರು ಕಟ್ಟಡದ ಜೊತೆಗಿನ ಫೋಟೋ ಹಾಗೂ ಜಿಪಿಎಸ್ ದಾಖಲೆ ಕಡ್ಡಾಯವಾಗಿ ಸಲ್ಲಿಕೆ ಮಾಡಬೇಕು" ಎಂದರು.

"ಗ್ರಾಮೀಣ ಭಾಗದ, ರೇಷ್ಮೆ ಸಾಕಾಣಿಕೆ ಮನೆ, ಕೊಟ್ಟಿಗೆಗಳಿಗೆ ವಿನಾಯಿತಿ ನೀಡಲಾಗಿದೆ. ಹೊಸದಾಗಿ ನಿರ್ಮಾಣ ಮಾಡಿದರೆ ಅವಕಾಶವಿಲ್ಲ. ಇಂಧನ ಸಚಿವರು, ಗ್ರಾಮೀಣಾಭಿವೃದ್ಧಿ, ನಗರಾಭಿವೃದ್ಧಿ ಸಚಿವರ ಬಳಿ ಇದರ ಬಗ್ಗೆ ವಿವರವಾಗಿ ಚರ್ಚಿಸಲಾಗಿದೆ" ಎಂದು ಮಾಹಿತಿ ನೀಡಿದರು.

"ಯಾದಗಿರಿಯ ವೈದ್ಯಕೀಯ ವಿಜ್ಞಾನ ಶಿಕ್ಷಣ ಸಂಸ್ಥೆಗಳ ಆವರಣದಲ್ಲಿ 100 ಕೋಟಿ ರೂ. ವೆಚ್ಚದಲ್ಲಿ ನೂತನ 200 ಹಾಸಿಗೆ ಸಾಮರ್ಥ್ಯದ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ ನಿರ್ಮಾಣಕ್ಕೆ ಅನುಮೋದನೆ ನೀಡಲಾಗಿದೆ. 18 ಕೋಟಿ ರೂ. ವೆಚ್ಚದಲ್ಲಿ ಕಾರವಾರ ವೈದ್ಯಕೀಯ ವಿಜ್ಞಾನ ಶಿಕ್ಷಣ ಸಂಸ್ಥೆಗಳ ಆರು ಸಿವಿಲ್ ಕಾಮಗಾರಿಗಳಿಗೆ ಮತ್ತು ಬೆಂಗಳೂರು ವೈದ್ಯಕೀಯ ಸಂಶೋಧನಾ ಆಸ್ಪತ್ರೆಗೆ ಸುಮಾರು 60 ಕೋಟಿ ವೆಚ್ಚದಲ್ಲಿ ವೈದ್ಯಕೀಯ ಉಪಕರಣಗಳ ಖರೀದಿಗೆ ಆಡಳಿತಾತ್ಮಕ ಅನುಮೋದನೆ" ಎಂದು ಮಾಹಿತಿ ನೀಡಿದರು.



"620 ನೂತನ ಬಸ್‌ಗಳ ಖರೀದಿಗೆ 235 ಕೋಟಿ ರೂ. ವೆಚ್ಚ ಸೇರಿದಂತೆ ಎಲ್ಲಾ ಸಾರಿಗೆ ನಿಗಮಗಳ ಅಡಿಯಲ್ಲಿ 11 ಕಡೆ ಎಲೆಕ್ಟ್ರಿಕ್ ಬಸ್ ಗಳ ಡಿಪೋಗಳನ್ನು ತೆರೆಯಲು 112 ಕೋಟಿ ವೆಚ್ಚ ಮಾಡಲಾಗುವುದು. 30 ಕೋಟಿ ರೂ. ವೆಚ್ಚದಲ್ಲಿ ಸಂಡೂರು ತಾಲ್ಲೂಕು ಕೇಂದ್ರದಲ್ಲಿ ಸುಸಜ್ಜಿತ ಬಸ್ ನಿಲ್ದಾಣ ನಿರ್ಮಾಣ. 620 ಬಸ್ ಗಳ ಪೈಕಿ ಗ್ರಾಮೀಣ ಪ್ರದೇಶಗಳಿಗೆ 400 ಬಸ್ ಗಳು ಹಾಗೂ ವಾಯುವ್ಯ ಸಾರಿಗೆ ನಿಗಮಕ್ಕೆ 220 ಬಸ್‌ಗಳ ಖರೀದಿಗೆ ಅನುಮತಿ ನೀಡಲಾಗಿದೆ" ಎಂದರು.

ಯುಪಿಎಸ್ ಸೇರಿದಂತೆ ಇತರೇ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ತಯಾರಾಗುವ ವಿದ್ಯಾರ್ಥಿಗಳ ಅನುಕೂಲಕ್ಕಾಗಿ ಹಾಗೂ ಒಂದೇ ಸೂರಿನಡಿ ಎಲ್ಲಾ ಅನುಕೂಲ ದೊರೆಯಬೇಕು ಎನ್ನುವ ಕಾರಣಕ್ಕೆ ಕೆಐಡಬ್ಲ್ಯೂಬಿ ವತಿಯಿಂದ ನವ ದೆಹಲಿಯಲ್ಲಿ ಕರ್ನಾಟಕ ಭವನ 4 ಅನ್ನು ನಿರ್ಮಾಣ ಮಾಡಲು 80 ಕೋಟಿಗೆ ಅನುಮೋದನೆ ನೀಡಲಾಗಿದೆ. ಪರಿಶಿಷ್ಟ ಜಾತಿ ಹಾಗೂ ಪಂಗಡ ಹಾಗೂ ಶೇ 50, ಇತರೇ ಸಮುದಾಯದ ವಿದ್ಯಾರ್ಥಿಗಳಿಗೆ ಶೇ 50 ರಷ್ಟು ಮೀಸಲು ಇಡಲಾಗಿದೆ" ಎಂದರು.

"ಸುಪ್ರೀಂ ಕೋರ್ಟ್‌ನಲ್ಲಿರುವ ವ್ಯಾಜ್ಯಗಳ ಇತ್ಯರ್ಥಕ್ಕೆ ದೆಹಲಿಯ ಕಾನೂನು ವಿಭಾಗವನ್ನು ಮತ್ತಷ್ಟು ಸದೃಢಗೊಳಿಸಲು ಪ್ರತ್ಯೇಕ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ರೆಸಿಡೆನ್ಸಿಯಲ್ ಕಮಿಷನರ್ ಕಚೇರಿ ಕಾರ್ಯವೈಖರಿ ನನಗೆ ಸಮಾಧಾನ ತಂದಿಲ್ಲ. ಆದ ಕಾರಣಕ್ಕೆ ಅದನ್ನು ಹೊಸದಾಗಿ ಸಮೀಕರಿಸಲಾಗುತ್ತಿದೆ" ಎಂದರು.

"ಕೇಂದ್ರದ ಯೋಜನೆಗಳನ್ನು ರಾಜ್ಯಕ್ಕೆ ತರುವುದು ಹೇಗೆ? ಯಾವ ಯೋಜನೆಗಳಿಗೆ ಅರ್ಜಿ ಸಲ್ಲಿಸಬೇಕು. ಯಾವ ಯೋಜನೆಗಳು ಇತರೇ ರಾಜ್ಯಗಳಲ್ಲಿದೆ. ತಮಿಳುನಾಡು, ಆಂಧ್ರ ಪ್ರದೇಶ, ಗುಜರಾತ್ ಸೇರಿದಂತೆ ಇತರೇ ರಾಜ್ಯಗಳು ಯಾವ ಯೋಜನೆಗಳನ್ನು ತೆಗೆದುಕೊಂಡು ಹೋಗುತ್ತಿದ್ದಾರೆ ಎಂದು ತಿಳಿಯಲು ಹೊಸ ಅಧಿಕಾರಿಗಳ ತಂಡ ರಚಿಸಿ ನೇಮಕ ಮಾಡಲಾಗುತ್ತಿದೆ" ಎಂದರು.

"ಈಗಾಗಲೇ ದೆಹಲಿಗೆ ತೆರಳಿ ಕರ್ನಾಟಕದ ಅಧಿಕಾರಿಗಳ ಸಭೆ ನಡೆಸಿ ಅವರ ಸಲಹೆ ಪಡೆದಿದ್ದೇನೆ. ನಮ್ಮ ಅಧಿಕಾರಿಗಳು ಹಲವಾರು ಸಲಹೆ ನೀಡಿದ್ದು, ಕರ್ನಾಟಕದ ಏಳಿಗೆಗೆ ಕೆಲಸ ಮಾಡುವುದಾಗಿ ತಿಳಿಸಿದ್ದಾರೆ. ದೆಹಲಿಯಲ್ಲಿರುವ ನಮ್ಮ ಅಧಿಕಾರಿಗಳು ತಂಡಗಳನ್ನು ರಚಿಸಿಕೊಂಡು ಇಲಾಖೆಗೆ ಅನುಗುಣವಾಗಿ ಸಲಹೆ ನೀಡಲು ಮುಂದ ಬಂದಿದ್ದಾರೆ. ಇವರ ಜೊತೆಗೆ ಹಿರಿಯ ಐಎಎಸ್, ಐಪಿಎಸ್ ಅಧಿಕಾರಿಗಳು ನಿವೃತ್ತ ಅಧಿಕಾರಿಗಳನ್ನು ಈ ತಂಡಕ್ಕೆ ನೇಮಕ ಮಾಡಲಾಗಿದೆ" ಎಂದರು.

"ಗದಗ-ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರದಿಂದ ಕಳಸಾಪೂರ ಗ್ರಾಮದಲ್ಲಿನ ಒಟ್ಟು 18 ಎಕರೆ ಜಮೀನಿನಲ್ಲಿ 50:50ರ ಅನುಪಾತದಲ್ಲಿ ರೈತರು ಹಾಗೂ ಪ್ರಾಧಿಕಾರದ ಸಹಭಾಗಿತ್ವದೊಂದಿಗೆ ರೂ.19.69 ಕೋಟಿಗಳ ಅಂದಾಜು ಮೊತ್ತದಲ್ಲಿ ವಸತಿ ಯೋಜನೆಯನ್ನು ಕೈಗೊಳ್ಳಲು ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ" ಎಂದು ತಿಳಿಸಿದರು. "ಬೆಂಗಳೂರು ಗ್ರಾಮಾಂತರದ ದೇವನಹಳ್ಳಿಯ ಚನ್ನರಾಯಪಟ್ಟಣ ಹೋಬಳಿಯ 13 ಗ್ರಾಮಗಳ 1,777 ಎಕರೆ ಜಮೀನಿನ ಪೈಕಿ ಸ್ವಯಂಪ್ರೇರಿತವಾಗಿ ಜಮೀನು ನೀಡಲು ರೈತರು ಮುಂದೆ ಬಂದಿದ್ದಾರೆ.

# ಮತ್ತೆ ಹರ್ಮೂಜ್ ಬಂದ್

ಟೆಹ್ರಾನ್: ಅಮೆರಿಕ ಮತ್ತು ಇರಾನ್ ನಡುವೆ ಶಾಂತಿ ಒಪ್ಪಂದಕ್ಕೆ ಸಹಿ ಹಾಕಲಾಗಿದ್ದರೂ ಪಶ್ಚಿಮ ಏಷ್ಯಾದಲ್ಲಿ ಮತ್ತೊಮ್ಮೆ ಉದ್ವಿಗ್ನತೆ ಭುಗಿಲೆದ್ದಿದ್ದು, ಕದನ ವಿರಾಮದ ಹೊರತಾಗಿಯೂ ದಕ್ಷಿಣ ಲೆಬನಾನ್ ಮೇಲೆ ಇಸ್ರೇಲ್ ಪಡೆಗಳು ರಾತ್ರೋ ರಾತ್ರಿ ನಡೆಸಿದ ಭೀಕರ ವೈಮಾನಿಕ ದಾಳಿಯಲ್ಲಿ ಕನಿಷ್ಠ 16 ಜನ ಮೃತಪಟ್ಟಿದ್ದಾರೆ.



ದಕ್ಷಿಣ ಲೆಬನಾನ್ ಮೇಲೆ ಇಸ್ರೇಲ್ ನಡೆಸಿದ ದಾಳಿಯಿಂದ ರೊಚ್ಚಿಗೆದ್ದ ಇರಾನ್‌ನ ಕೇಂದ್ರ ಮಿಲಿಟರಿ ಕಮಾಂಡ್, ಶನಿವಾರ ಮತ್ತೊಮ್ಮೆ ಪ್ರಮುಖ ತೈಲ ಮಾರ್ಗ ಹರ್ಮೂಜ್ ಜಲಸಂಧಿಯನ್ನು ಬಂದ್ ಮಾಡಿರುವುದಾಗಿ ಘೋಷಿಸಿದೆ. ಇಸ್ರೇಲ್ ದಾಳಿ, ಅಮೆರಿಕದೊಂದಿಗಿನ ಟೆಹ್ರಾನ್ ಒಪ್ಪಂದದ ಸ್ಪಷ್ಟ ಉಲ್ಲಂಘನೆಯಾಗಿದೆ ಎಂದು ಇರಾನ್ ವಿವರಿಸಿದೆ.

"ಹಾರ್ಮುಜ್ ಜಲಸಂಧಿಯನ್ನು ಹಡಗು ಸಂಚಾರಕ್ಕೆ ಮುಚ್ಚಲಾಗುವುದು ಎಂದು ಈ ಮೂಲಕ ಘೋಷಿಸಲಾಗಿದೆ. ಶತ್ರುಗಳು ಒಪ್ಪಂದವನ್ನು ಉಲ್ಲಂಘಿಸಿದ್ದಕ್ಕೆ ಪ್ರತಿಕ್ರಿಯೆಯಾಗಿ ಇದು ಮೊದಲ ಹೆಜ್ಜೆ ಎಂದಿರುವ ಇರಾನ್, ಆಕ್ರಮಣ ಮುಂದುವರಿದರೆ, ಶತ್ರು ತನ್ನ ಬಾಧ್ಯತೆಗಳನ್ನು ಪಾಲಿಸುವಂತೆ ಒತ್ತಾಯಿಸಲು ಮುಂದಿನ ಕ್ರಮಗಳನ್ನು ತೆಗೆದುಕೊಳ್ಳಲಾಗುತ್ತದೆ" ಎಂದು ಖತಮ್-ಅಲ್ ಅನ್ಬಿಯಾ ಕೇಂದ್ರ ಪ್ರಧಾನ ಕಚೇರಿ ಪ್ರಕಟಣೆಯಲ್ಲಿ ತಿಳಿಸಿದೆ.

ಲೆಬನಾನ್ ಸರ್ಕಾರಿ ಮಾಧ್ಯಮವು, ಸುಮಾರು 20 ಸ್ಥಳಗಳ ಮೇಲೆ ಇಸ್ರೇಲಿ ವಾಯುದಾಳಿಗಳನ್ನು ವರದಿ ಮಾಡಿದೆ. ದೇಶದ ನಾಗರಿಕ ರಕ್ಷಣಾ ಸಂಸ್ಥೆ ನಬತಿಹ್ ಪ್ರದೇಶದಲ್ಲಿ 16 ಜನರು ಸಾವನ್ನಪ್ಪಿದ್ದಾರೆ ಎಂದು ವರದಿ ತಿಳಿಸಿದೆ. ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಮತ್ತು ಇರಾನ್ ಅಧ್ಯಕ್ಷ ಮಸೌದ್ ಪೆಜೆಶ್ಕಿಯನ್ ಅವರು ಈ ವಾರ ಶಾಂತಿ ಒಪ್ಪಂದಕ್ಕೆ ಸಹಿ ಹಾಕಿದ್ದರು.

ಈ ಒಪ್ಪಂದದ ಪ್ರಕಾರ ಲೆಬನಾನ್ ಸೇರಿದಂತೆ ಸಂಘರ್ಷ ಪೀಡಿತ ಎಲ್ಲಾ ಪ್ರದೇಶಗಳಲ್ಲಿ ತಕ್ಷಣವೇ ಕದನ ವಿರಾಮ ಜಾರಿಯಾಗಬೇಕು ಹಾಗೂ ಲೆಬನಾನ್‌ನ ಪ್ರಾದೇಶಿಕ ಸಮಗ್ರತೆ ಮತ್ತು ಸಾರ್ವಭೌಮತ್ವವನ್ನು ಕಾಪಾಡಬೇಕು ಎಂದು ಉಲ್ಲೇಖಿಸಲಾಗಿದೆ.

ಆದರೆ ಅಮೆರಿಕ ಮತ್ತು ಇರಾನ್ ನಡುವೆ ಸಹಿ ಹಾಕಲಾದ ಮಹತ್ವದ ಶಾಂತಿ ಒಪ್ಪಂದದ ನಂತರ ಆರಂಭವಾಗಬೇಕಿದ್ದ ರಾಜತಾಂತ್ರಿಕ ಮಾತುಕತೆಗಳು ದಿಢೀರ್ ರದ್ದಾಗಿದ್ದು, ಇದರಿಂದ ಆತಂಕಗೊಂಡ ಪ್ಯಾಲೆಸ್ಟೈನ್, ಪ್ರಧಾನಿ ನರೇಂದ್ರ ಮೋದಿ ಅವರು ಮಧ್ಯ ಪ್ರವೇಶಿಸಬೇಕು ಎಂದು ಒತ್ತಾಯಿಸಿದೆ. ಲೆಬನಾನ್ ಸರ್ಕಾರಿ ಮಾಧ್ಯಮವು, ಸುಮಾರು 20 ಸ್ಥಳಗಳ ಮೇಲೆ ಇಸ್ರೇಲಿ ವಾಯುದಾಳಿಗಳನ್ನು ವರದಿ ಮಾಡಿದೆ. ದೇಶದ ನಾಗರಿಕ ರಕ್ಷಣಾ ಸಂಸ್ಥೆ ನಬತಿಹ್ ಪ್ರದೇಶದಲ್ಲಿ 16 ಜನರು ಸಾವನ್ನಪ್ಪಿದ್ದಾರೆ ಎಂದು ವರದಿ ತಿಳಿಸಿದೆ. ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಮತ್ತು ಇರಾನ್ ಅಧ್ಯಕ್ಷ ಮಸೌದ್ ಪೆಜೆಶ್ಕಿಯನ್ ಅವರು ಈ ವಾರ ಶಾಂತಿ ಒಪ್ಪಂದಕ್ಕೆ ಸಹಿ ಹಾಕಿದ್ದರು.

ಈ ಒಪ್ಪಂದದ ಪ್ರಕಾರ ಲೆಬನಾನ್ ಸೇರಿದಂತೆ ಸಂಘರ್ಷ ಪೀಡಿತ ಎಲ್ಲಾ ಪ್ರದೇಶಗಳಲ್ಲಿ ತಕ್ಷಣವೇ ಕದನ ವಿರಾಮ ಜಾರಿಯಾಗಬೇಕು ಹಾಗೂ ಲೆಬನಾನ್‌ನ ಪ್ರಾದೇಶಿಕ ಸಮಗ್ರತೆ ಮತ್ತು ಸಾರ್ವಭೌಮತ್ವವನ್ನು ಕಾಪಾಡಬೇಕು ಎಂದು ಉಲ್ಲೇಖಿಸಲಾಗಿದೆ.



ಜಾಗತಿಕ ಅನಿವಾಸಿ ಕನ್ನಡ ಮತ್ತು ಮೂಲನಿವಾಸಿ ನಿಯೋಗದ ಪ್ರತಿನಿಧಿಗಳು ರೊನಾಲ್ಡೊ ಕೊಲಾಸೋ ಅವರ ನೇತೃತ್ವದಲ್ಲಿ ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕ ವ್ಯವಹಾರಗಳ ಸಚಿವ ಕೆ.ಹೆಚ್. ಮುನಿಯಪ್ಪ ಅವರನ್ನು ಭೇಟಿ ಮಾಡಿ ವಿವಿಧ ವಿಷಯಗಳ ಕುರಿತು ಮಾತುಕತೆ ನಡೆಸಿದರು. ಈ ಸಂದರ್ಭದಲ್ಲಿ ಅನಿವಾಸಿ ಭಾರತೀಯ ಮೂಲನಿವಾಸಿ ಸದಸ್ಯ ಕಾರ್ಯದರ್ಶಿ ಹಾಗೂ ವಿಧಾನ ಪರಿಷತ್ ಸದಸ್ಯೆ ಆರತಿ ಕೃಷ್ಣ ಉಪಸ್ಥಿತರಿದ್ದರು.

ಮೋದಿ ಅವರ ವ್ಯಕ್ತಿತ್ವದ ಕುರಿತು ಮಾತನಾಡಿದ ಟ್ರಂಪ್, "ನಿಜವಾದ ಮೋದಿಯನ್ನು ನಾನು ಈಗ ಹೆಚ್ಚು ಅರ್ಥ ಮಾಡಿಕೊಂಡಿದ್ದೇನೆ. ಅವರು ತುಂಬಾ ಗಟ್ಟಿಯಾದ ವ್ಯಕ್ತಿ. ಹೊರಗೆ ಶಾಂತವಾಗಿ ಕಾಣುತ್ತಾರೆ, ಆದರೆ ಒಳಗೆ ಅತ್ಯಂತ ದೃಢವಾದ ನಾಯಕ," ಎಂದು ಹೇಳಿದರು. ಭಾರತದಲ್ಲಿ ಹಿಂದೆ ಆಗಾಗ ನಾಯಕತ್ವ ಬದಲಾವಣೆ ಆಗುತ್ತಿತ್ತು. "ಒಬ್ಬ ನಾಯಕ ಆರು ತಿಂಗಳು, ಮತ್ತೊಬ್ಬ ಒಂದು ವರ್ಷ ಅಧಿಕಾರದಲ್ಲಿರುತ್ತಿದ್ದರು. ಆದರೆ ಮೋದಿ ಹನ್ನೆರಡು ವರ್ಷಕ್ಕೂ ಹೆಚ್ಚು ಕಾಲ ಅಧಿಕಾರದಲ್ಲಿದ್ದು, ದೇಶಕ್ಕೆ ಸ್ಥಿರ ನಾಯಕತ್ವ ನೀಡಿದ್ದಾರೆ," ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

# ಟ್ರಂಪ್‌ನಿಂದ ಮೋದಿಗೆ ಭಾರೀ ಮೆಚ್ಚುಗೆ

ವಾಷಿಂಗ್ಟನ್: ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರು ಪ್ರಧಾನಿ ನರೇಂದ್ರ ಮೋದಿ ಅವರನ್ನು "ಅದ್ಭುತ ನಾಯಕ" ಹಾಗೂ "ತುಂಬಾ ಗಟ್ಟಿಯಾದ ವ್ಯಕ್ತಿ" ಎಂದು ಬಣ್ಣಿಸಿದ್ದು, ಭಾರತ-ಅಮೆರಿಕ ಸಂಬಂಧಗಳು ಹೊಸ ಎತ್ತರಕ್ಕೆ ತಲುಪಿರುವುದಾಗಿ ಹೇಳಿದ್ದಾರೆ. ಇದೇ ವೇಳೆ, ತಾವು ಹೆಚ್ಚು ಮೆಚ್ಚುವ ಜಾಗತಿಕ ನಾಯಕರ ಪಟ್ಟಿಯಲ್ಲಿ ಮೋದಿ ಹಾಗೂ ಚೀನಾ ಅಧ್ಯಕ್ಷ ಷಿ ಜಿನ್‌ಪಿಂಗ್ ಅವರ ಹೆಸರನ್ನು ಉಲ್ಲೇಖಿಸಿ, ಅವರ ನಾಯಕತ್ವ ಮತ್ತು ಪ್ರಭಾವವನ್ನು ಕೊಂಡಾಡಿದ್ದಾರೆ.

ವಿಶೇಷ ಸಂದರ್ಶನದಲ್ಲಿ ಮಾತನಾಡಿದ ಟ್ರಂಪ್, ಮೋದಿ ಅವರ ನಾಯಕತ್ವ, ಭಾರತದ ಬೆಳವಣಿಗೆ, ಜಾಗತಿಕ ಪ್ರಭಾವ ಹಾಗೂ ಭಾರತ-ಅಮೆರಿಕ ವ್ಯಾಪಾರ ಸಂಬಂಧಗಳ ಬಗ್ಗೆ ಮುಕ್ತವಾಗಿ ಅಭಿಪ್ರಾಯ ವ್ಯಕ್ತಪಡಿಸಿದರು.

"ಮೋದಿ ತುಂಬಾ ಉತ್ತಮ ನಾಯಕ. ಭಾರತದಲ್ಲಿ ಉತ್ತಮ ಬೆಳವಣಿಗೆಗಳು ನಡೆಯುತ್ತಿವೆ. ಅವರು ಯುದ್ಧಗಳಿಂದ ದೂರ ಉಳಿಯುತ್ತಾರೆ, ಅದು ಬುದ್ಧಿವಂತಿಕೆಯ ನಡೆ. ಭಾರತವು ವಿಶ್ವದ ಅತಿ ದೊಡ್ಡ ಜನಸಂಖ್ಯೆ ಹೊಂದಿರುವ ದೇಶವಾಗಿದೆ. ಮೋದಿ ನಿಜಕ್ಕೂ ಅದ್ಭುತ ನಾಯಕ," ಎಂದು ಟ್ರಂಪ್ ಶ್ಲಾಘಿಸಿದರು.

ಜಾಗತಿಕ ರಾಜಕೀಯದ ಪ್ರಭಾವಿ ನಾಯಕರ ಕುರಿತು ಮಾತನಾಡಿದ ಟ್ರಂಪ್, ಮೋದಿ ಹಾಗೂ ಚೀನಾ ಅಧ್ಯಕ್ಷ ಷಿ ಜಿನ್‌ಪಿಂಗ್ ಇಬ್ಬರನ್ನೂ ವಿಶೇಷವಾಗಿ ಉಲ್ಲೇಖಿಸಿದರು.

"ಮೋದಿ ಮತ್ತು ಷಿ ಜಿನ್‌ಪಿಂಗ್ ಅವರಂತಹ ವ್ಯಕ್ತಿತ್ವದ ನಾಯಕರ ಬಗ್ಗೆ ಸಿನಿಮಾ ಮಾಡಬೇಕೆಂದರೆ, ಹಾಲಿವುಡ್‌ನಲ್ಲೂ ಅವರಂತ ವ್ಯಕ್ತಿಯನ್ನು ಹುಡುಕಲು ಸಾಧ್ಯವಾಗುವುದಿಲ್ಲ," ಎಂದು ಅವರು ಹೇಳಿದರು.



ಇಬ್ಬರೂ ತಮ್ಮ ದೇಶಗಳಲ್ಲಿ ಅಪಾರ ಪ್ರಭಾವ ಹೊಂದಿದ್ದು, ಕಠಿಣ ನಿರ್ಧಾರಗಳನ್ನು ತೆಗೆದುಕೊಳ್ಳುವ ಸಾಮರ್ಥ್ಯ ಹಾಗೂ ಫಲಿತಾಂಶ ನೀಡುವ ನಾಯಕತ್ವದ ಗುಣಗಳಿಂದ ಇತರ ನಾಯಕರಿಗಿಂತ ಭಿನ್ನವಾಗಿ ಕಾಣಿಸುತ್ತಾರೆ ಎಂದು ಟ್ರಂಪ್ ಅಭಿಪ್ರಾಯಪಟ್ಟರು.

ಮೋದಿ ಅವರ ವ್ಯಕ್ತಿತ್ವದ ಕುರಿತು ಮಾತನಾಡಿದ ಟ್ರಂಪ್, "ನಿಜವಾದ ಮೋದಿಯನ್ನು ನಾನು ಈಗ ಹೆಚ್ಚು ಅರ್ಥ ಮಾಡಿಕೊಂಡಿದ್ದೇನೆ. ಅವರು ತುಂಬಾ ಗಟ್ಟಿಯಾದ ವ್ಯಕ್ತಿ. ಹೊರಗೆ ಶಾಂತವಾಗಿ ಕಾಣುತ್ತಾರೆ, ಆದರೆ ಒಳಗೆ ಅತ್ಯಂತ ದೃಢವಾದ ನಾಯಕ," ಎಂದು ಹೇಳಿದರು.

ಭಾರತದಲ್ಲಿ ಹಿಂದೆ ಆಗಾಗ ನಾಯಕತ್ವ ಬದಲಾವಣೆ ಆಗುತ್ತಿತ್ತು. "ಒಬ್ಬ ನಾಯಕ ಆರು ತಿಂಗಳು, ಮತ್ತೊಬ್ಬ ಒಂದು ವರ್ಷ ಅಧಿಕಾರದಲ್ಲಿರುತ್ತಿದ್ದರು. ಆದರೆ ಮೋದಿ ಹನ್ನೆರಡು ವರ್ಷಕ್ಕೂ ಹೆಚ್ಚು ಕಾಲ ಅಧಿಕಾರದಲ್ಲಿದ್ದು, ದೇಶಕ್ಕೆ ಸ್ಥಿರ ನಾಯಕತ್ವ ನೀಡಿದ್ದಾರೆ," ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಭಾರತ-ಅಮೆರಿಕ ಆರ್ಥಿಕ ಸಂಬಂಧಗಳ ಬಗ್ಗೆ ಮಾತನಾಡಿದ ಟ್ರಂಪ್, "ನಾವು ಈಗ ಭಾರತದೊಂದಿಗೆ ನ್ಯಾಯಯುತ ವ್ಯಾಪಾರ ನಡೆಸುತ್ತಿದ್ದೇವೆ. ಹಿಂದೆ ಅವರು ನಮ್ಮನ್ನು ಸಾಕಷ್ಟು ಲಾಭಕ್ಕೆ ಬಳಸಿಕೊಳ್ಳುತ್ತಿದ್ದರು. ಅದಕ್ಕೆ ನಾನು ಭಾರತವನ್ನು ದೂಷಿಸುವುದಿಲ್ಲ. ಅದಕ್ಕೆ ಅವಕಾಶ ಕೊಟ್ಟ ನಮ್ಮ ರಾಜಕಾರಣಿಗಳೇ ಕಾರಣ," ಎಂದು ಹೇಳಿದರು.

"ಆದರೆ ಈಗ ಎರಡೂ ದೇಶಗಳ ನಡುವೆ ದೊಡ್ಡ ಮಟ್ಟದ ವ್ಯಾಪಾರ ನಡೆಯುತ್ತಿದೆ. ಈ ಹೊಸ ವ್ಯವಸ್ಥೆಯಿಂದ ಭಾರತ ಅಷ್ಟಾಗಿ ಸಂತೋಷವಾಗಿಲ್ಲ, ಏಕೆಂದರೆ ಹಿಂದೆ ಅವರಿಗೆ ಹೆಚ್ಚು ಲಾಭವಾಗುತ್ತಿತ್ತು. ಆದರೂ ಮೋದಿ ಅತ್ಯುತ್ತಮ ನಾಯಕ," ಎಂದು ಟ್ರಂಪ್ ಹೇಳಿದರು.

ಇತ್ತೀಚೆಗೆ ಫ್ರಾನ್ಸ್‌ನಲ್ಲಿ ನಡೆದ ಏಳು ಪ್ರಮುಖ ಕೈಗಾರಿಕಾ ರಾಷ್ಟ್ರಗಳ ಶೃಂಗಸಭೆಯ ವೇಳೆ ಪ್ರಧಾನಿ ನರೇಂದ್ರ ಮೋದಿ ಮತ್ತು ಡೊನಾಲ್ಡ್ ಟ್ರಂಪ್ ಭೇಟಿಯಾಗಿದ್ದರು. ಉಭಯ ದೇಶಗಳು ಇತ್ತೀಚಿನ ಕೆಲವು ಭಿನ್ನಾಭಿಪ್ರಾಯಗಳ ಬಳಿಕ ದ್ವಿಪಕ್ಷೀಯ ಸಂಬಂಧಗಳನ್ನು ಮತ್ತಷ್ಟು ಬಲಪಡಿಸುವತ್ತ ಗಮನ ಹರಿಸುತ್ತಿರುವ ಸಂದರ್ಭದಲ್ಲೇ ಟ್ರಂಪ್ ಅವರ ಈ ಹೇಳಿಕೆಗಳು ಮಹತ್ವ ಪಡೆದುಕೊಂಡಿವೆ.

ಸಂದರ್ಶನದ ವೇಳೆ ಟ್ರಂಪ್ ಅವರು ತಾವು ಮೆಚ್ಚುವ ನಾಯಕರ ಪಟ್ಟಿಯಲ್ಲಿ ಪಾಕಿಸ್ತಾನದ ಸೇನಾ ಮುಖ್ಯಸ್ಥ ಅಸೀಂ ಮುನೀರ್ ಹಾಗೂ ಪ್ರಧಾನಿ ಶೆಹಬಾಜ್ ಷರೀಫ್ ಅವರ ಹೆಸರನ್ನೂ ಉಲ್ಲೇಖಿಸಿದರು. ಆದಾಗ್ಯೂ, ಜಾಗತಿಕ ಮಟ್ಟದಲ್ಲಿ ತಮ್ಮ ಪ್ರಭಾವ, ನಾಯಕತ್ವದ ಸಾಮರ್ಥ್ಯ ಮತ್ತು ಫಲಿತಾಂಶ ನೀಡುವ ಗುಣಗಳಿಂದ ಮೋದಿ ಹಾಗೂ ಷಿ ಜಿನ್‌ಪಿಂಗ್ ವಿಶೇಷವಾಗಿ ಗುರುತಿಸಿಕೊಂಡಿದ್ದಾರೆ ಎಂದು ಟ್ರಂಪ್ ಪುನರುಚ್ಚರಿಸಿದರು.

ಟ್ರಂಪ್ ಅವರ ಈ ಹೇಳಿಕೆಗಳು ಪ್ರಧಾನಿ ಮೋದಿ ಅವರ ಜಾಗತಿಕ ನಾಯಕತ್ವದ ಪ್ರಭಾವ, ಭಾರತದ ಹೆಚ್ಚುತ್ತಿರುವ ಅಂತರರಾಷ್ಟ್ರೀಯ ಮಹತ್ವ ಹಾಗೂ ಭಾರತ-ಅಮೆರಿಕ ನಡುವಿನ ಬಲಿಷ್ಠ ಸಂಬಂಧಗಳನ್ನು ಮತ್ತೊಮ್ಮೆ ಬೆಳಕಿಗೆ ತಂದಿವೆ.

# ಕುಡಿಯುವ ನೀರಿನ ಸಮಸ್ಯೆಯಿಲ್ಲ

ಬೆಂಗಳೂರು: ರಾಜ್ಯದಲ್ಲಿ ಈ ಬಾರಿ ನಿರೀಕ್ಷಿತ ಪ್ರಮಾಣದ ಮಳೆ ಬಾರದೇ ಇದ್ದರೂ, ಮುಂದಿನ ಎರಡು ತಿಂಗಳ ಕಾಲ ಕುಡಿಯುವ ನೀರಿಗೆ ಯಾವುದೇ ರೀತಿಯ ಸಮಸ್ಯೆ ಉಂಟಾಗುವುದಿಲ್ಲ ಎಂದು ಜಲ ಸಂಪನ್ಮೂಲ ಸಚಿವ ರಾಮಲಿಂಗ ರೆಡ್ಡಿ ಅವರು ರಾಜ್ಯದ ಜನತೆಗೆ ಅಭಯ ನೀಡಿದ್ದಾರೆ.

> **ಬೆಂಗಳೂರು ಮತ್ತು ಸುತ್ತಮುತ್ತಲ ಜಿಲ್ಲೆಗಳಿಗೆ ಕುಡಿಯುವ ನೀರು ಪೂರೈಕೆ ಮಾಡುವ ಮೇಕೆದಾಟು ನದಿ ನೀರು ಯೋಜನೆಗೆ ತಮಿಳುನಾಡು ಸರ್ಕಾರ ವಿರೋಧ ವ್ಯಕ್ತಪಡಿಸುವುದು ಸರಿಯಲ್ಲ.ಇದು ಸಂಪೂರ್ಣವಾಗಿ ಕುಡಿಯುವ ನದಿ ನೀರು ಯೋಜನೆಯ ನಾವು ನೀರನ್ನು ಬೇರೆ ಯಾವುದೇ ಉದ??ೀ??ಶಕ್ಕೆ ಬಳಸಿಕೊಳ್ಳುವುದಿಲ್ಲ.**

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮುಂಗಾರು ಆರಂಭವಾಗಿ ಹಲವು ದಿನಗಳು ಕಳೆದರೂ ರಾಜ್ಯದಲ್ಲಿ ವಾಡಿಕೆಯಂತೆ ನಿರೀಕ್ಷಿತ ಪ್ರಮಾಣದಲ್ಲಿ ಮಳೆಯಾಗಿಲ್ಲ. ಆದರೆ ಮುಂದಿನ ಎರಡು ತಿಂಗಳು ಕಾಲ ಕುಡಿಯುವ ನೀರಿಗೆ ಸಮಸ್ಯೆ ಇಲ್ಲ ಜನರು ಆತಂಕಕ್ಕೆ ಒಳಗಾಗಬಾರದು ಎಂದು ಅಭಯ ನೀಡಿದರು.

ಬೆಂಗಳೂರು ಸೇರಿದಂತೆ ಸುತ್ತಮುತ್ತಲಿನ ಭಾಗಗಳಿಗೆ ಕುಡಿಯುವ ನೀರು ಪೂರೈಕೆ ಮಾಡುವ ಕೆಆರ್ ಎಸ್ ಅಣೆಕಟ್ಟಿನಲ್ಲಿ ಪ್ರಸ್ತುತ 11 ಟಿಎಂಸಿ ನೀರು ಸಂಗ್ರಹಣೆವಾಗಿದೆ ಹವಾಮಾನ ಇಲಾಖೆಯ ಪ್ರಕಾರ ಮುಂದಿನ ದಿನಗಳಲ್ಲಿ ಮಳೆಯಾಗುವ ಸಂಭವವಿರುವುದರಿಂದ ಸದ್ಯಕ್ಕೆ ಕುಡಿಯುವ ನೀರಿನ ಸಮಸ್ಯೆ ಎದುರಾಗುವುದಿಲ್ಲ ಎಂಬ ವಿಶ್ವಾಸ ವ್ಯಕ್ತಪಡಿಸಿದರು.

ಬೆಂಗಳೂರು ಮತ್ತು ಸುತ್ತಮುತ್ತಲ ಜಿಲ್ಲೆಗಳಿಗೆ ಕುಡಿಯುವ ನೀರು ಪೂರೈಕೆ ಮಾಡುವ ಮೇಕೆದಾಟು ನದಿ ನೀರು ಯೋಜನೆಗೆ ತಮಿಳುನಾಡು ಸರ್ಕಾರ ವಿರೋಧ ವ್ಯಕ್ತಪಡಿಸುವುದು ಸರಿಯಲ್ಲ.ಇದು ಸಂಪೂರ್ಣವಾಗಿ ಕುಡಿಯುವ ನದಿ ನೀರು ಯೋಜನೆಯ ನಾವು ನೀರನ್ನು ಬೇರೆ ಯಾವುದೇ ಉದ??ೀ??ಶಕ್ಕೆ ಬಳಸಿಕೊಳ್ಳುವುದಿಲ್ಲ. ಇದು ಗೊತ್ತಿದ್ದು ತಮಿಳುನಾಡಿ ಸರ್ಕಾರ ಸುಖ-ಸುಮ್ಮನೆ ಖಾತೆ ತೆಗೆಯುವ ಕೆಲಸ ಮಾಡುತ್ತಿದೆ ಎಂದು ಆರೋಪಿಸಿದರು.

ಮೇಕೆದಾಟು ನದಿ ನೀರು ಯೋಜನೆ, ಕರ್ನಾಟಕದ ಮಹತ್ವಕಾಂಕ್ಷಿಯ ನೀರಾವರಿ ಯೋಜನೆಗಳಲ್ಲಿ ಒಂದಾಗಿದೆ ಹೊಸದಾಗಿ ಆಣೆಕಟ್ಟು ಕಟ್ಟಿ ನೀರನ್ನು ಸಂಗ್ರಹಿಸಿ ಕುಡಿಯುವ ನೀರಿನ ಬಳಕೆಗೆ ಬಳಸಿಕೊಳ್ಳುತ್ತೇವೆ ಆದರೆ ತಮಿಳುನಾಡು ಸರ್ಕಾರ ಅನಗತ್ಯವಾಗಿ ಯೋಜನೆಗೆ ಅಡ್ಡಿಪಡಿಸುತ್ತದೆ ಈ ಬಗ್ಗೆ ಮನವರಿಕೆ ಮಾಡಿಕೊಡುತ್ತೇವೆ ಎಂದು ಅವರು ಹೇಳಿದರು.

ಮೇಕೆದಾಟು ನದಿ ನೀರು ಯೋಜನೆ ಜಾರಿಯಾದರೆ ರಾಜಧಾನಿ ಬೆಂಗಳೂರಿಗೆ 4.75 ಟಿಎಂಸಿ ನಮಗೆ ಲಭ್ಯವಾಗುತ್ತದೆ ಅಲ್ಲದೆ 400 ವಿದ್ಯುತ್ ಕೂಡ ಉತ್ಪಾದನೆ ಮಾಡಬಹುದು ಯೋಜನೆಗಲ್ಲಿ ನಾವು ಇದನ್ನು ಸ್ಪಷ್ಟವಾಗಿ ಉಲ್ಲೇಖ ಮಾಡಿದ್ದೇವೆ.. ಆದರೂ ಅಲ್ಲಿನ ರಾಜಕಾರಣಕ್ಕಾಗಿ ತಮಿಳುನಾಡು ಸರ್ಕಾರ ವಿರೋಧ ವ್ಯಕ್ತಪಡಿಸುವುದು ಸರಿಯೇ ಎಂದು ಪ್ರಶ್ನೆ ಮಾಡಿದರು.

ಈ ಯೋಜನೆಯಿಂದ ಕೃಷಿ ಚಟುವಟಿಕೆಗಳಿಗೆ ನೀರನ್ನು ಬಳಕೆ ಮಾಡಿಕೊಳ್ಳುವುದಿಲ್ಲ. ಈ ಭಾಗದಲ್ಲಿ ವ್ಯವಸಾಯಕ್ಕೆ ನೀರು ಲಭ್ಯವಿರುವುದಿಲ್ಲ. ಏಕೆಂದರೆ ಈ ಪ್ರದೇಶದಲ್ಲಿ 4-5 ವರ್ಷಕ್ಕೊಮ್ಮೆ ಮಳೆ ಕಮ್ಮಿಯಾಗುತ್ತದೆ. ಇದು ಸಂಪೂರ್ಣವಾಗಿ ಕುಡಿಯುವ ನೀರಿನ ಯೋಜನೆ ಎಂದು ಪುನರುಚ್ಚರಿಸಿದರು.

ತಮಿಳುನಾಡಿಗೆ ನಾವು ಕೇಂದ್ರದ ನಿರ್ದೇಶನದ ಪ್ರಕಾರ ತಿಂಗಳಿಗೊಮ್ಮೆ ನೀರು ಹರಿಸಬೇಕು. ಪ್ರತಿ ವರ್ಷ ಜೂನ್ ತಿಂಗಳಿನಲ್ಲಿ 19 ಟಿಎಂಸಿ ನೀರನ್ನು ಬಿಡಬೇಕಿದೆ. ಇದು ಹಿಂದೆಯೇ ತೀರ್ಮಾನವಾಗಿದೆ. ಜೊತೆಗೆ ಕೇಂದ್ರದ ಜಲ ಆಯೋಗದ ತೀರ್ಮಾನವೂ ಇದೇ ಆಗಿದೆ.ಪ್ರಸ್ತುತ ನಮ್ಮ ಬಳಿ 16 ಟಿಎಂ ಸಿ ನೀರು ಸಂಗ್ರಹವಾಗಿದೆ.

21/06/2026
ಭಾರತ ಸಾರಥಿ
BHARATHA SARATHI KANNADA DAILY NEWS PAPER
ಬೆಂಗಳೂರು । ಬೆಂ.ಗ್ರಾಮಾಂತರ । ತುಮಕೂರು । ಮೈಸೂರು । ಮಂಡ್ಯ । ರಾಮನಗರ । ಕೋಲಾರ । ಚಿಕ್ಕಬಳ್ಳಾಪುರ । ಚಿತ್ರದುರ್ಗ । ದಾವಣಗೆರೆ । ಶಿವಮೊಗ್ಗ । ಮಂಗಳೂರು । ಉಡುಪಿ । ಹುಬ್ಬಳ್ಳಿ । ಮಡಿಕೇರಿ । ಚಿಕ್ಕಮಗಳೂರು । ಹಾಸನ । ಬಳ್ಳಾರಿ
ಇ-ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

# ಎಲಾನ್ ಬೈ ಕ್ಯಾಂಪಸ್ ಬಿಡುಗಡೆ

ಬೆಂಗಳೂರು

ಭಾರತದ ಮುಂಚೂಣಿಯ ಕ್ರೀಡೆ ಮತ್ತು ಅಥ್ಲೀಷರ್ ಪಾದರಕ್ಷೆ ಬ್ರಾಂಡ್‌ಗಳಲ್ಲಿ ಒಂದಾದ ಕ್ಯಾಂಪಸ್ ಆಕ್ಟಿವ್ ವೇರ್ ಲಿಮಿಟೆಡ್, ತನ್ನ ಹೊಸ ನಿಯೊ-ಕ್ಯಾಶ್ಯುಯಲ್ ಪಾದರಕ್ಷೆ ಸಂಗ್ರಹ 'ಎಲಾನ್ ಬೈ ಕ್ಯಾಂಪಸ್' ಅನ್ನು ಬಿಡುಗಡೆ ಮಾಡುವ ಮೂಲಕ ಮತ್ತೊಂದು ಮಹತ್ವದ ಹೆಜ್ಜೆ ಇಟ್ಟಿದೆ. ಆಧುನಿಕ ಪುರುಷರ ಶೈಲಿ, ಸೌಖ್ಯ ಮತ್ತು ವೈವಿಧ್ಯತೆಯ ಅಗತ್ಯಗಳನ್ನು ಗಮನದಲ್ಲಿಟ್ಟುಕೊಂಡು ರೂಪಿಸಲಾದ ಈ ಸಂಗ್ರಹವನ್ನು ಖ್ಯಾತ ನಟ ಜಿಮ್ ಸರ್ಭ್ ಅವರೊಂದಿಗೆ ಆರಂಭಿಸಲಾಗಿದೆ.



'ಮೋಸ್ಟ್ ಎಲಿಗೆಂಟ್ ಮ್ಯಾನ್ ಇನ್ ಟೌನ್' ಎಂಬ ಹೊಸ ಅಭಿಯಾನದ ಮೂಲಕ ಈ ಸಂಗ್ರಹವನ್ನು ಪರಿಚಯಿಸಲಾಗಿದ್ದು, ಜಿಮ್ ಸರ್ಭ್ ಅವರ ವಿಶಿಷ್ಟ ವ್ಯಕ್ತಿತ್ವ, ಆತ್ಮವಿಶ್ವಾಸ ಮತ್ತು ಆಧುನಿಕ ಫ್ಯಾಷನ್ ದೃಷ್ಟಿಕೋನವು ಈ ಅಭಿಯಾನಕ್ಕೆ ವಿಶೇಷ ಮೆರುಗು ನೀಡಿದೆ.


ಆಧುನಿಕ ಪುರುಷರ ಬದಲಾಗುತ್ತಿರುವ ಜೀವನಶೈಲಿ ಮತ್ತು ಫ್ಯಾಷನ್ ಆದ್ಯತೆಗಳನ್ನು ಪ್ರತಿಬಿಂಬಿಸುವ ಈ ಅಭಿಯಾನವು ಪ್ರಯತ್ನರಹಿತ ಸೊಗಸಿನ ಹೊಸ ವ್ಯಾಖ್ಯಾನವನ್ನು ನೀಡುತ್ತದೆ.

ಎಲಾನ್ ಬೈ ಕ್ಯಾಂಪಸ್ ಬಿಡುಗಡೆ ಮೂಲಕ ಕಂಪನಿಯು ತನ್ನ ವ್ಯಾಪ್ತಿಯನ್ನು ಕ್ರೀಡೆ ಮತ್ತು ಅಥ್ಲೀಷರ್ ವಿಭಾಗದಿಂದ ಹೊರತಾಗಿ ವೇಗವಾಗಿ ಬೆಳೆಯುತ್ತಿರುವ ನಿಯೊ-ಕ್ಯಾಶ್ಯುಯಲ್ ಪಾದರಕ್ಷೆ ಮಾರುಕಟ್ಟೆಗೆ ವಿಸ್ತರಿಸಿದೆ. ದಿನದ ವಿವಿಧ ಸಂದರ್ಭಗಳಲ್ಲಿ ಸುಲಭವಾಗಿ ಹೊಂದಿಕೊಳ್ಳುವ ಶೈಲಿಯ ಪಾದರಕ್ಷೆಗಳನ್ನು ಬಯಸುವ ಪುರುಷರಿಗಾಗಿ ಈ ಸಂಗ್ರಹವನ್ನು ವಿಶೇಷವಾಗಿ ವಿನ್ಯಾಸಗೊಳಿಸಲಾಗಿದೆ.

# 'ಸರ್ವಿಸ್ ಅಶ್ಯೂರ್' ರಸ್ತೆಬದಿ ಸಹಾಯ ಸೇವೆಗೆ ಹೊಸ ಉತ್ತೇಜನ

ಮುಂಬೈ

ಗ್ರಾಹಕರಿಗೆ ತ್ವರಿತ ಮತ್ತು ವಿಶ್ವಾಸಾರ್ಹ ಸೇವೆಗಳನ್ನು ತಲುಪಿಸುವ ತನ್ನ ಬದ್ಧತೆಯನ್ನು ಮತ್ತಷ್ಟು ಬಲಪಡಿಸುವ ನಿಟ್ಟಿನಲ್ಲಿ ಐಸಿಐಸಿಐ ಲೊಂಬಾರ್ಡ್ ಜನರಲ್ ಇನ್ಶೂರೆನ್ಸ್, ಸ್ವಿಗ್ಗಿ ಇನ್ಸ್ಟಾಮಾರ್ಟ್ ಜೊತೆಗೆ ವಿನೂತನ ಬ್ರ್ಯಾಂಡ್ ಏಕೀಕರಣ ಅಭಿಯಾನವನ್ನು ಆರಂಭಿಸಿದೆ. 'ಸರ್ವಿಸ್ ಅಶ್ಯೂರ್' 30 ನಿಮಿಷಗಳ ರಸ್ತೆಬದಿ ಸಹಾಯ ಸೇವೆಯನ್ನು ಜನಪ್ರಿಯಗೊಳಿಸುವ ಉದ್ದೇಶದಿಂದ ಈ




ವಿಶೇಷ ಅಭಿಯಾನವನ್ನು ಮುಂಬೈನಲ್ಲಿ ಜಾರಿಗೆ ತರಲಾಗಿದೆ. ಈ ಅಭಿಯಾನದ ಭಾಗವಾಗಿ, ಸ್ವಿಗ್ಗಿ ಇನ್ಸ್ಟಾಮಾರ್ಟ್‌ನಲ್ಲಿ ಗ್ರಾಹಕರು ತಮ್ಮ ಆರ್ಡರ್‌ಗಳ ಸ್ಥಿತಿಯನ್ನು ಟ್ರ್ಯಾಕ್ ಮಾಡುವ ವೇಳೆ, ಐಸಿಐಸಿಐ ಲೊಂಬಾರ್ಡ್ ಬ್ರ್ಯಾಂಡ್ ಹೊಂದಿರುವ ಡೆಲಿವರಿ ರೈಡರ್ ಐಕಾನ್ ಕಾಣಿಸಿಕೊಳ್ಳಲಿದೆ. ಇದರ ಜೊತೆಗೆ, ಸಂಸ್ಥೆಯ ವೇಗದ ಮತ್ತು ವಿಶ್ವಾಸಾರ್ಹ ಸೇವಾ ಬದ್ಧತೆಯನ್ನು ಪ್ರತಿಬಿಂಬಿಸುವ ವಿಶೇಷ ಬ್ಯಾನರ್‌ಗಳೂ ಅಪ್ಲಿಕೇಶನ್‌ನಲ್ಲಿ ಪ್ರದರ್ಶಿಸಲಾಗುತ್ತವೆ.


ಈ ವಿನೂತನ ಏಕೀಕರಣವು ಐಸಿಐಸಿಐ ಲೊಂಬಾರ್ಡ್‌ನ 'ಸರ್ವಿಸ್ ಅಶ್ಯೂರ್' ರಸ್ತೆಬದಿ ಸಹಾಯ ಸೇವೆಯ ತ್ವರಿತ ಪ್ರತಿಕ್ರಿಯೆ ಭರವಸೆಯನ್ನು, ಸ್ವಿಗ್ಗಿ ಇನ್ಸ್ಟಾಮಾರ್ಟ್‌ನ ವೇಗದ ವಿತರಣಾ ಅನುಭವದೊಂದಿಗೆ ಸಂಯೋಜಿಸುತ್ತದೆ.

ಇದರಿಂದ ಗ್ರಾಹಕರು ದಿನನಿತ್ಯ ಅನುಭವಿಸುವ ಕ್ಷಿಪ್ರ ಸೇವೆಯ ಭಾವನೆಯನ್ನು ವಿಮಾ ಸೇವೆಗಳೊಂದಿಗೆ ಸಂಪರ್ಕಿಸುವ ಪ್ರಯತ್ನ ಮಾಡಲಾಗಿದೆ.

# 'ಟಿವಿಕೆ, ಕಾಂಗ್ರೆಸ್ ಪಕ್ಷದಿಂದ ಬೆಂಬಲ ವಾಪಸ್ ಪಡೆಯಲಿ'

ಬೆಂಗಳೂರು

ತಮಿಳುನಾಡಲ್ಲಿ ಟಿವಿಕೆ ಪಕ್ಷದ ಸರ್ಕಾರ ಮೇಕೆದಾಟು ಯೋಜನೆಗೆ ವಿರುದ್ಧವಾಗಿ ನಿರ್ಣಯ ಕೈಗೊಂಡಿದೆ. ಈಗ ಕಾಂಗ್ರೆಸ್ ತನ್ನ ಬೆಂಬಲವನ್ನು ಹಿಂಪಡೆಯಲಿ ಎಂದು ಪ್ರತಿಪಕ್ಷ ನಾಯಕ ಆರ್.ಅಶೋಕ ಸವಾಲು ಹಾಕಿದರು.



ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ತಮಿಳುನಾಡಲ್ಲಿ ಡಿಎಂಕೆ ಬೆನ್ನಿಗೆ ಚೂರಿ ಹಾಕಿದ ಕಾಂಗ್ರೆಸ್, ಟಿವಿಕೆ ಜೊತೆ ಸೇರಿಕೊಂಡಿದೆ. ಅದೇ ಟಿವಿಕೆ ಪಕ್ಷ ಈಗ ಮೇಕೆದಾಟು ಯೋಜನೆ ಜಾರಿಯಾಗಲು ಬಿಡುವುದಿಲ್ಲ ಎಂದು ನಿರ್ಣಯ ಕೈಗೊಂಡಿದೆ. ಕಾಂಗ್ರೆಸ್ ಪಕ್ಷಕ್ಕೆ ಧೈರ್ಯವಿದ್ದರೆ ಟಿವಿಕೆಗೆ ನೀಡಿದ ಬೆಂಬಲವನ್ನು ವಾಪಸ್ ಪಡೆಯಬೇಕು. ಇಲ್ಲವಾದರೆ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಡಬಲ್ ಸ್ಟಾಂಡರ್ಡ್ ಹಾಗೂ ಎರಡು ನಾಲಿಗೆ ಎಂದು ಒಪ್ಪಿಕೊಳ್ಳಬೇಕು. ಕಾಂಗ್ರೆಸ್ ಸರ್ಕಾರ ಇರುವವರೆಗೂ ಮೇಕೆದಾಟು ಯೋಜನೆ ಜಾರಿಯಾಗಲು ಸಾಧ್ಯವಿಲ್ಲ. ಇವರು ಪಾದಯಾತ್ರೆ ಮಾಡಿದ್ದು ಕೇವಲ ಮತಕ್ಕಾಗಿ ಎಂದು ಟೀಕೆ ಮಾಡಿದರು. ಕಾಂಗ್ರೆಸ್ ಸರ್ಕಾರ ರೇಷನ್ ಕಾರ್ಡ್‌ಗಳಿಗೆ ಕತ್ತರಿ ಹಾಕಿ ಗ್ಯಾರಂಟಿ ಫಲಾನುಭವಿಗಳನ್ನು ಕಡಿಮೆ ಮಾಡುತ್ತಿದೆ. ಉಚಿತ ವಿದ್ಯುತ್ ಪಡೆಯುವ ಯೋಜನೆಯಲ್ಲೂ ಬೋಗಸ್ ಇದೆ ಎನ್ನುತ್ತಿದ್ದಾರೆ ಎಂದರು.

# ಫ್ರೀಡಂ ಪಾರ್ಕ್‌ನಲ್ಲಿ ಎಂ.ಪಿ. ಬಿರ್ಲಾ ಇನ್‌ಸ್ಟಿಟ್ಯೂಟ್‌ನ 'ಹರಿತೋತ್ಸವ' ಯಶಸ್ವಿ

ಬೆಂಗಳೂರು

ಪರಿಸರ ಸಂರಕ್ಷಣೆ ಮತ್ತು ಸುಸ್ಥಿರ ಜೀವನಶೈಲಿಯ ಕುರಿತು ಜಾಗೃತಿ ಮೂಡಿಸುವ ಉದ್ದೇಶದಿಂದ, ಭಾರತೀಯ ವಿದ್ಯಾಭವನದ ಸಹಯೋಗಿ ಸಂಸ್ಥೆಯಾದ ಎಂ.ಪಿ. ಬಿರ್ಲಾ ಇನ್‌ಸ್ಟಿಟ್ಯೂಟ್ ಆಫ್ ಮ್ಯಾನೇಜ್‌ಮೆಂಟ್ ವತಿಯಿಂದ ಫ್ರೀಡಂ ಪಾರ್ಕ್‌ನಲ್ಲಿ 'ಹರಿತೋತ್ಸವ' ಕಾರ್ಯಕ್ರಮವನ್ನು ಯಶಸ್ವಿಯಾಗಿ ಆಯೋಜಿಸಲಾಯಿತು.

ಕಳೆದ 25 ವರ್ಷಗಳಿಂದ ನಿರ್ವಹಣಾ ಶಿಕ್ಷಣ ಕ್ಷೇತ್ರದಲ್ಲಿ ಸೇವೆ ಸಲ್ಲಿಸುತ್ತಿರುವ ಸಂಸ್ಥೆಯು ಹಸಿರು ಪರಿಸರ ನಿರ್ಮಾಣದ ಮಹತ್ವಾಕಾಂಕ್ಷೆಯ ಯೋಜನೆಯಾದ 'ಹರಿತೋತ್ಸವ'ದ ಮೂಲಕ ಪರಿಸರದ ಅರಿವು ಮತ್ತು ಸುಸ್ಥಿರ ಬದುಕಿನ ಅಗತ್ಯತೆಯನ್ನು ಜನರಿಗೆ



ಮನವರಿಕೆ ಮಾಡಿಕೊಟ್ಟಿತು. ಸಂಸ್ಥೆಯ ಅಧ್ಯಕ್ಷರಾದ ಎನ್. ರಾಮಾನುಜ, ಉಪಾಧ್ಯಕ್ಷರಾದ ವಿ. ಮುರುಳೀಧರ್ ಹಾಗೂ ಪ್ರಾಂಶುಪಾಲರಾದ ಡಾ. ಸತ್ಯನಾರಾಯಣ ಅವರ ಮಾರ್ಗದರ್ಶನದಲ್ಲಿ ನಡೆದ ಈ ಕಾರ್ಯಕ್ರಮದಲ್ಲಿ ಆಡಳಿತ ಮಂಡಳಿ ಸದಸ್ಯರು, ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳು ಉತ್ಸಾಹದಿಂದ ಭಾಗವಹಿಸಿದರು.

ಡಾ. ಸುಮಿತ್ರಾ ಶ್ರೀನಾಥ್, ಡಾ. ಬಿ.ಎ. ಕರ್ಪಗಂ ಹಾಗೂ ಮಾರ್ಕೆಟಿಂಗ್ ಕ್ಲಬ್‌ನ ವಿದ್ಯಾರ್ಥಿಗಳ ನೇತೃತ್ವದಲ್ಲಿ ನೇರಳೆ, ಹಲಸು, ಬಟರ್ ಫ್ರೂಟ್ ಸಸಿ ಸೇರಿದಂತೆ ವಿವಿಧ ಬಗೆಯ 30ಕ್ಕೂ ಹೆಚ್ಚು ಸಸಿಗಳನ್ನು ನಡೆಸಲಾಯಿತು. ಕಾರ್ಯಕ್ರಮದಲ್ಲಿ ಪರಿಸರ ಜಾಗೃತಿ ನಡಿಗೆ, ಸಸಿ ನೆಡುವಿಕೆ ಹಾಗೂ ಸುಸ್ಥಿರ ಜೀವನಶೈಲಿಯ ಕುರಿತು ಅರಿವು ಮೂಡಿಸುವ ವಿವಿಧ ಚಟುವಟಿಕೆಗಳು ನಡೆಯುವ ಮೂಲಕ ಪರಿಸರ ಸಂರಕ್ಷಣೆಯ ಮಹತ್ವವನ್ನು ಸಾರಲಾಯಿತು.

ಮುಂದಿನ ಪೀಳಿಗೆಗೆ ಹಸಿರು ಮತ್ತು ಆರೋಗ್ಯಕರ ವಾತಾವರಣವನ್ನು ನಿರ್ಮಿಸುವುದು ಪ್ರತಿಯೊಬ್ಬರ ಜವಾಬ್ದಾರಿ ಎಂಬ ಸಂದೇಶವನ್ನು 'ಹರಿತೋತ್ಸವ' ಸಾರಿತು. ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ಫ್ರೀಡಂ ಪಾರ್ಕ ಅಧ್ಯಕ್ಷರಾದ ಗಂಡಸಿ ಸದಾನಂದ ಸ್ವಾಮಿರವರು ಕಾರ್ಯಕ್ರಮದ ಯಶಸ್ಸಿಗೆ ನೀಡಿದ ಬೆಂಬಲ ಮತ್ತು ಮಾರ್ಗದರ್ಶನವನ್ನು ಸಂಸ್ಥೆ ಕೃತಜ್ಞತೆಯಿಂದ ಸ್ಮರಿಸಿತು.

'ಇಂದು ನಾವು ನೆಡುವ ಪ್ರತಿಯೊಂದು ಗಿಡವೂ ನಾಳೆಯ ಸುಸ್ಥಿರತೆಯನ್ನು ಖಾತ್ರಿಪಡಿಸುತ್ತದೆ' ಎಂಬ ಧ್ಯೇಯವಾಕ್ಯದೊಂದಿಗೆ ನಡೆದ 'ಹರಿತೋತ್ಸವ' ಕಾರ್ಯಕ್ರಮವು ಯುವಜನರಲ್ಲಿ ಪರಿಸರ ಕಾಳಜಿಯನ್ನು ಬೆಳೆಸುವ ನಿಟ್ಟಿನಲ್ಲಿ ಮಹತ್ವದ ಹೆಜ್ಜೆಯಾಯಿತು.

# ಹಾಸನದಲ್ಲಿ ನೂತನ ಇಂದಿರಾ ಐವಿಎಫ್ ಬಂಜೆತನ ನಿವಾರಣಾ ಕೇಂದ್ರದ ಪ್ರಾರಂಭ




ಹಾಸನ

ಭಾರತದ ಪ್ರಮುಖ ಪ್ರಸವ ಚಿಕಿತ್ಸೆ ಸೇವಾ ಸಂಸ್ಥೆಗಳಲ್ಲೊಂದಾದ ಇಂದಿರಾ ಐವಿಎಫ್ ಇಂದು ಹಾಸನದಲ್ಲಿ ತನ್ನ ಹೊಸ ಫರ್ಟಿಲಿಟಿ ಕೇಂದ್ರವನ್ನು ಆರಂಭಿಸಿದೆ. ಈ ಪ್ರಾರಂಭವು ಪ್ರದೇಶದಲ್ಲಿ ಸುವ್ಯವಸ್ಥಿತ ಹಾಗೂ ಫರ್ಟಿಲಿಟಿ ತಂತ್ರಜ್ಞಾನ ಆಧಾರಿತ ಚಿಕಿತ್ಸೆಗಳ ಪ್ರವೇಶವನ್ನು ಬಲಪಡಿಸುವ ಮತ್ತೊಂದು ಪ್ರಮುಖ ಹೆಜ್ಜೆಯಾಗಿದೆ.

ಹಾಸನದ ಸಾಲಗಾಮೆ ರಸ್ತೆ, ಸುಬೇದಾರ್ ಸರ್ಕಲ್, ವಿಶ್ವೇಶ್ವರಯ್ಯ ಎಕ್ಸ್‌ಟೆನ್ಷನ್, ಎಸ್ ಕ್ಯೂಬ್ ಆರ್ಕೇಡ್ ಕಟ್ಟಡದ 2ನೇ ಮಹಡಿಯಲ್ಲಿ ಇರುವ ಈ ಕೇಂದ್ರವು ಇಂದಿರಾ ಐವಿಎಫ್‌ನ ಪ್ರಮಾಣೀಕೃತ ಕ್ಲಿನಿಕಲ್ ಪ್ರೋಟೋಕಾಲ್‌ಗಳು ಮತ್ತು ಲ್ಯಾಬೋರೇಟರಿ ವ್ಯವಸ್ಥೆಗಳ ಆಧಾರದಿಂದ ಸಂಪೂರ್ಣ ಫರ್ಟಿಲಿಟಿ ಮೌಲ್ಯಮಾಪನ ಮತ್ತು ಸಹಾಯಕ ಸಂತಾನೋತ್ಪತಿ ಚಿಕಿತ್ಸೆಗಳು ವ್ಯಾಪಕ ಸೇವೆಗಳನ್ನು ಒದಗಿಸುತ್ತದೆ.

ಉದ್ಘಾಟನಾ ಸಮಾರಂಭದಲ್ಲಿ ಹಾಸನ ಲೋಕಸಭಾ ಕ್ಷೇತ್ರದ ಸಂಸದ ಶ್ರೇಯಸ್ ಎಂ. ಪಟೇಲ್ ಹಾಗೂ ಜಗದೀಶ್ ಗಂಗಣ್ಣವರ್ ಹೆಚ್ಚುವರಿ ಜಿಲ್ಲಾಧಿಕಾರಿ. ಹಾಸನ. ಅದರೊಂದಿಗೆ ಇಂದಿರಾ ಐವಿಎಫ್ ಜೆ.ಪಿ. ನಗರ, ಬೆಂಗಳೂರು ಕೇಂದ್ರ ಮುಖ್ಯಸ್ಥರಾದ ಡಾ. ಶ್ಯಾಮ್ ಎನ್. ಗುಪ್ತಾ, ಇಂದಿರಾ ಐವಿಎಫ್ ಮೈಸೂರು ಕೇಂದ್ರ ಮುಖ್ಯಸ್ಥರಾದ ಡಾ. ದರ್ಶನ್ ಎಸ್. ಎಂ. ಗೌರವ ಅತಿಥಿಗಳಾಗಿ ಭಾಗವಹಿಸಿದ್ದರು. ಮಹಿಳಾ ಪ್ರಸೂತಿ ತಜ್ಞರಾದ ಡಾ. ಶ್ವೇತಾ ಡಿ ಸೇರಿದಂತೆ ಹಿರಿಯ ಪ್ರತಿನಿಧಿಗಳು ಮತ್ತು ವೈದ್ಯಕೀಯ ತಂಡದ ಸದಸ್ಯರು ಕಾರ್ಯಕ್ರಮದಲ್ಲಿ ಭಾಗವಹಿಸಿದರು.



ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಶುಕ್ರವಾರ ಉಪ ಮುಖ್ಯಮಂತ್ರಿ ಡಾ.ಜಿ. ಪರಮೇಶ್ವರ ಅವರ ನಿವಾಸಕ್ಕೆ ಭೇಟಿ ನೀಡಿ ಆರೋಗ್ಯ ವಿಚಾರಿಸಿದರು. ಶೀಘ್ರ ಗುಣಮುಖರಾಗುವಂತೆ ಹಾರೈಸಿದರು.

# ನ್ಯಾಯಾಧೀಶರಾಗಿ ನೇಮಕಕ್ಕೆ ಕೊಲಿಜಿಯಂ ಒಪ್ಪಿಗೆ

ಚಿಕ್ಕಬಳ್ಳಾಪುರ

ದೆಹಲಿಗೆ ತೆರಳುವ ಮೊದಲು ಅವರು ಕರ್ನಾಟಕ ಹೈಕೋರ್ಟ್ ಮತ್ತು ಬೆಂಗಳೂರಿನ ವಿವಿಧ ನ್ಯಾಯಾಲಯಗಳಲ್ಲಿ ವಕೀಲ ವೃತ್ತಿ ನಡೆಸಿದ್ದರು. 2006ರಲ್ಲಿ ಸುಪ್ರೀಂಕೋರ್ಟ್‌ನ ಅಡ್ವೋಕೇಟ್-ಆನ್-ರೆಕಾರ್ಡ್ ಆಗಿ ಅರ್ಹತೆ ಪಡೆದ ಅವರು, ವೈಯಕ್ತಿಕ ಹಾಗೂ ಸಾಂಸ್ಥಿಕ ಕಕ್ಷಿದಾರರ ಪರವಾಗಿ ವಾದ ಮಂಡಿಸುವುದರ ಜೊತೆಗೆ ಕಾನೂನು ಸೇವಾ ಕ್ಷೇತ್ರದಲ್ಲಿಯೂ ಗಮನಾರ್ಹ ಕೊಡುಗೆ ನೀಡಿದ್ದಾರೆ. ಹಲವು ರಾಜ್ಯಗಳ ಸರ್ಕಾರಿ ಸಂಸ್ಥೆಗಳು, ಸಾರ್ವಜನಿಕ ವಲಯದ ಕಂಪನಿಗಳು ಮತ್ತು ಪ್ರಮುಖ ಸಂಸ್ಥೆಗಳ ಪರವಾಗಿ ಅವರು ನ್ಯಾಯಾಲಯಗಳಲ್ಲಿ ಪ್ರತಿನಿಧಿಸಿದ್ದಾರೆ.

ಸಾಮಾಜಿಕ ಹಾಗೂ ಸಾರ್ವಜನಿಕ ಮಹತ್ವದ ಹಲವು ಪ್ರಕರಣಗಳಲ್ಲಿ ವಾದ ಮಂಡಿಸಿರುವ ಅವರು, ಕರ್ನಾಟಕದ ಹಿಜಾಬ್ ಪ್ರಕರಣದಲ್ಲಿ ಹೈಕೋರ್ಟ್‌ನ ಪೂರ್ಣ ಪೀಠದ ಮುಂದೆ ಕೂಡ ತಮ್ಮ ವಾದವನ್ನು ಮಂಡಿಸಿದ್ದರು. ಕಾನೂನು ವಿಷಯಗಳ ಕುರಿತು ಸಂಶೋಧನಾ ಲೇಖನಗಳು, ಪುಸ್ತಕಗಳು ಹಾಗೂ ವಿವಿಧ ಪ್ರಕಟಣೆಗಳ ಮೂಲಕವೂ ಅವರು ತಮ್ಮ ಕೊಡುಗೆ ನೀಡಿದ್ದಾರೆ.

ಕನ್ನಡ ಭಾಷೆಯ ಬಗ್ಗೆ ವಿಶೇಷ ಅಭಿಮಾನ ಹೊಂದಿರುವ ರಾಘವೇಂದ್ರ ಶ್ರೀವತ್ಸ ಅವರು ಕನ್ನಡ ದಿನಪತ್ರಿಕೆಗಳಲ್ಲಿ ಹಲವು ಲೇಖನಗಳನ್ನು ಬರೆದು ಗಮನ ಸೆಳೆದಿದ್ದಾರೆ. ನ್ಯಾಯಾಂಗ, ಕಾನೂನು ಶಿಕ್ಷಣ ಹಾಗೂ ಹೊಸ ಕಾನೂನು ಸುಧಾರಣೆಗಳ ಕುರಿತು ದೇಶದ ವಿವಿಧ ನ್ಯಾಯಾಂಗ ಅಕಾಡೆಮಿಗಳು ಮತ್ತು ತರಬೇತಿ ಸಂಸ್ಥೆಗಳಲ್ಲಿ ಸಂಪನ್ಮೂಲ ವ್ಯಕ್ತಿಯಾಗಿ ಸೇವೆ ಸಲ್ಲಿಸಿರುವುದು ಅವರ ಮತ್ತೊಂದು ವಿಶೇಷತೆ.

# ಮಕ್ಕಳಲ್ಲಿ ಆರೋಗ್ಯಕರ ಜೀವನಶೈಲಿಗೆ ಉತ್ತೇಜನ

ಮುಂಬೈ

ಅಂತರರಾಷ್ಟ್ರೀಯ ಯೋಗ ದಿನದ ಅಂಗವಾಗಿ ನಿಕ್ ಇಂಡಿಯಾ ಮತ್ತು ವಿಶ್ವದ ಅತಿದೊಡ್ಡ ಯುವ-ಚಾಲಿತ ಸಂಘಟನೆಗಳಲ್ಲಿ ಒಂದಾದ ಐ.ಐ.ಎಂ.ಯು.ಎನ್. (ಇಂಡಿಯಾ'ಸ್ ಇಂಟರ್‌ನ್ಯಾಷನಲ್ ಮೂವ್ಮೆಂಟ್ ಟು ಯುನೈಟ್ ನೇಷನ್ಸ್) ಜಂಟಿಯಾಗಿ ಸ್ಪಾರ್ಕ್ ಎ ಚೇಂಜ್ ಫೌಂಡೇಶನ್‌ನಲ್ಲಿ ವಿಶೇಷ ಕಾರ್ಯಕ್ರಮವನ್ನು ಆಯೋಜಿಸಿ, ಮಕ್ಕಳು ಮತ್ತು ಕುಟುಂಬಗಳಲ್ಲಿ ಯೋಗ ಹಾಗೂ ಆರೋಗ್ಯಕರ ಜೀವನಶೈಲಿಯ ಬಗ್ಗೆ ಜಾಗೃತಿ ಮೂಡಿಸಿತು.

ಐ.ಐ.ಎಂ.ಯು.ಎನ್.ನ ಕ್ಷೇಮ ಉಪಕ್ರಮದ ಐದನೇ ಆವೃತ್ತಿಯ ಭಾಗವಾಗಿ ನಡೆದ ಈ ಕಾರ್ಯಕ್ರಮವು ಯೋಗವನ್ನು ಮೋಜು, ಆಟ ಮತ್ತು ಸಕ್ರಿಯ ಚಟುವಟಿಕೆಗಳ ಮೂಲಕ ಮಕ್ಕಳಿಗೆ ಪರಿಚಯಿಸುವ ಉದ್ದೇಶ ಹೊಂದಿತ್ತು.

ಯೋಗ ಎಂದರೆ ಕೇವಲ ವ್ಯಾಯಾಮವಲ್ಲ, ಅದು ಸಂತೋಷ ಮತ್ತು ಆರೋಗ್ಯಕರ ಬದುಕಿನ ಮಾರ್ಗ ಎಂಬ ಸಂದೇಶವನ್ನು ಕಾರ್ಯಕ್ರಮದ




ಮೂಲಕ ಸಾರಲಾಯಿತು.

ಪ್ರಸಿದ್ಧ ಯೋಗ ತರಬೇತುದಾರ್ತಿ ರಜನಿ ಪವಾರ್ ಅವರ ನೇತೃತ್ವದಲ್ಲಿ ನಡೆದ ಸಂವಾದಾತ್ಮಕ ಅಧಿವೇಶನದಲ್ಲಿ ಮಕ್ಕಳು ಮತ್ತು ಕುಟುಂಬ ಸದಸ್ಯರು ಉತ್ಸಾಹದಿಂದ ಪಾಲ್ಗೊಂಡರು. ಸರಳ ಯೋಗಾಸನಗಳು, ದೇಹ ಹಿಗ್ಗಿಸುವ ವ್ಯಾಯಾಮಗಳು ಹಾಗೂ ಉಸಿರಾಟದ ತಂತ್ರಗಳನ್ನು ಪರಿಚಯಿಸುವ ಮೂಲಕ ಆರೋಗ್ಯಕರ ಅಭ್ಯಾಸಗಳನ್ನು ರೂಢಿಸಿಕೊಳ್ಳುವ ಮಹತ್ವವನ್ನು ವಿವರಿಸಲಾಯಿತು. ಯೋಗಾಭ್ಯಾಸದ ಜೊತೆಗೆ ಮಕ್ಕಳನ್ನು ಸಕ್ರಿಯವಾಗಿ ಭಾಗವಹಿಸಲು ಪ್ರೋತ್ಸಾಹಿಸಲಾಯಿತು.

# ರಷ್ಯಾ ಮೇಲೆ ಉಕ್ರೇನ್ ದಾಳಿ

ಮಾಸ್ಕೋ

ಯುದ್ಧವನ್ನು ಕೊನೆಗೊಳಿಸಲು ವೊಲೊಡಿಮಿರ್ ಝೆಲೆನ್ಸ್ಕಿ, ಟ್ರಂಪ್ ಬೆಂಬಲವನ್ನು ಕೋರುತ್ತಿದ್ದಂತೆ ಮಾಸ್ಕೋ ಸಂಸ್ಕರಣಾಗಾರದ ಮೇಲೆ ಉಕ್ರೇನ್ ದಾಳಿ ನಡೆಸಿದೆ. ಈ ವಾರ ಉಕ್ರೇನಿಯನ್ ಡ್ರೋನ್‌ಗಳು ಮಾಸ್ಕೋ ತೈಲ ಸಂಸ್ಕರಣಾಗಾರದ ಮೇಲೆ ಎರಡನೇ ಬಾರಿಗೆ ದಾಳಿ ಮಾಡಿವೆ.

ರಷ್ಯಾದ ಕೀವ್ ಮೇಲೆ ಕ್ಷಿಪಣಿಗಳನ್ನು ಹಾರಿಸಿದೆ. ಅಧ್ಯಕ್ಷ ವೊಲೊಡಿಮಿರ್ ಝೆಲೆನ್ಸ್ಕಿ ಯುದ್ಧವನ್ನು ಕೊನೆಗೊಳಿಸಲು ಒಪ್ಪಂದಕ್ಕಾಗಿ ಯುನೈಟೆಡ್ ಸ್ಟೇಟ್ಸ್ ಮತ್ತು ಯುರೋಪ್‌ನಿಂದ ಬೆಂಬಲವನ್ನು ಕೋರುತ್ತಿರುವ ಹೊತ್ತಲ್ಲೇ ಈ ದಾಳಿಯಾಗಿದೆ. ರಷ್ಯಾದ ರಕ್ಷಣಾ ಸಚಿವಾಲಯ ಗುರುವಾರ ತನ್ನ ವಾಯು ರಕ್ಷಣಾ ಪಡೆಗಳು ಹಲವಾರು ಪ್ರದೇಶಗಳಲ್ಲಿ ರಾತ್ರೋರಾತ್ರಿ 555 ಉಕ್ರೇನಿಯನ್ ಡ್ರೋನ್‌ಗಳನ್ನು ಹೊಡೆದುರುಳಿಸಿದೆ ಎಂದು ಹೇಳಿದೆ. ರಷ್ಯಾದ ರಾಜಧಾನಿಯನ್ನು ಸಮೀಪಿಸುತ್ತಿದ್ದ ಸುಮಾರು 200 ಡ್ರೋನ್‌ಗಳನ್ನು ತಡೆಹಿಡಿಯಲಾಗಿದೆ ಎಂದಿದೆ.

# 10ನೇ ವಿಶ್ವ ದಾಖಲೆ ನಿರ್ಮಿಸಿದ ಹ್ಯಾಬಿಲ್ಡ್

ನವದೆಹಲಿ

ಅಂತರರಾಷ್ಟ್ರೀಯ ಯೋಗ ದಿನಾಚರಣೆ-2026ರ ಅಂಗವಾಗಿ ಭಾರತದ ಅಭ್ಯಾಸ ನಿರ್ಮಾಣ ಸ್ವಾಸ್ಥ್ಯ ವೇದಿಕೆಯಾದ ಹ್ಯಾಬಿಲ್ಡ್ ತನ್ನ ಯೋಗ ಸಪ್ತಾಹ ಉಪಕ್ರಮದ ಮೂಲಕ ಮತ್ತೊಂದು ಐತಿಹಾಸಿಕ ಸಾಧನೆ ಮಾಡಿದ್ದು, 1 ಕೋಟಿಗೂ ಹೆಚ್ಚು ಜನರ ಭಾಗವಹಿಸುವಿಕೆಯೊಂದಿಗೆ ತನ್ನ 10ನೇ ವಿಶ್ವ ದಾಖಲೆಯನ್ನು ನಿರ್ಮಿಸಿದೆ. ದೇಶಾದ್ಯಂತ ಯೋಗವನ್ನು ಜನಾಂದೋಲನವಾಗಿ ರೂಪಿಸುವ ಉದ್ದೇಶದಿಂದ ಹ್ಯಾಬಿಲ್ಡ್ ಆರಂಭಿಸಿದ್ದ 'ಹರ್ ಘರ್ ಯೋಗ, ಹರ್ ದಿನ್ ಯೋಗ' ಅಭಿಯಾನಕ್ಕೆ ಅಭೂತಪೂರ್ವ ಪ್ರತಿಕ್ರಿಯೆ ವ್ಯಕ್ತವಾಗಿದ್ದು, ಕೇವಲ ಒಂದು ವಾರದ ಅವಧಿಯಲ್ಲಿ 1 ಕೋಟಿಗೂ ಹೆಚ್ಚು ಜನರು ಈ ಉಪಕ್ರಮದಲ್ಲಿ ಭಾಗವಹಿಸಿದ್ದಾರೆ. ಇದರೊಂದಿಗೆ ಜಾಗತಿಕ ಮಟ್ಟದಲ್ಲಿ




ಸಮುದಾಯದ ನೇತೃತ್ವದಲ್ಲಿ ನಡೆದ ಅತಿದೊಡ್ಡ ಸ್ವಾಸ್ಥ್ಯ ಅಭಿಯಾನಗಳಲ್ಲಿ ಒಂದಾಗಿ ಇದು ಗುರುತಿಸಿಕೊಂಡಿದೆ. ಈ ವರ್ಷದ ಅಂತರರಾಷ್ಟ್ರೀಯ ಯೋಗ ದಿನದ ಧ್ಯೇಯವಾಕ್ಯವಾದ 'ಆರೋಗ್ಯಕರ ವೃದ್ಧಾಪ್ಯಕ್ಕಾಗಿ ಯೋಗ'**ಕ್ಕೆ ಅನುಗುಣವಾಗಿ ರೂಪುಗೊಂಡಿರುವ ಈ ಅಭಿಯಾನವು, ಯೋಗವನ್ನು ವರ್ಷಕ್ಕೊಮ್ಮೆ ಆಚರಿಸುವ ಕಾರ್ಯಕ್ರಮವಾಗಿ ನೋಡದೆ.

ಹ್ಯಾಬಿಲ್ಡ್‌ನ ಈ ಉಪಕ್ರಮವು ದೀರ್ಘಕಾಲೀನ ದೈಹಿಕ ಆರೋಗ್ಯ, ಮಾನಸಿಕ ನೆಮ್ಮದಿ, ಒತ್ತಡ ನಿರ್ವಹಣೆ ಹಾಗೂ ಆರೋಗ್ಯಕರ ವೃದ್ಧಾಪ್ಯಕ್ಕಾಗಿ ಯೋಗದ ಮಹತ್ವವನ್ನು ಜನರಿಗೆ ಮನವರಿಕೆ ಮಾಡಿಕೊಡುವಲ್ಲಿ ಪ್ರಮುಖ ಪಾತ್ರ ವಹಿಸಿದೆ. ಆರೋಗ್ಯಕರ ಜೀವನಶೈಲಿಯನ್ನು ರೂಢಿಸಿಕೊಳ್ಳುವ ಸಂದೇಶವನ್ನು ದೇಶದ ಮೂಲೆಮೂಲೆಗೂ ತಲುಪಿಸುವ ಉದ್ದೇಶದಿಂದ ಈ ಅಭಿಯಾನವನ್ನು ರೂಪಿಸಲಾಗಿದೆ.

# ಬಿಜೆಪಿ ನಾಯಕರು ದಿಲ್ಲಿಗೆ

ಚಿಕ್ಕಬಳ್ಳಾಪುರ

11 ಎನ್‌ಡಿಎ ಶಾಸಕರು ಅಡ್ಡಮತ ದಾನವನ್ನು ಬಿಜೆಪಿ ಹೈಕಮಾಂಡ್ ಗಂಭೀರವಾಗಿ ಪರಿಗಣಿಸಿದ್ದು, ರಾಜ್ಯ ನಾಯಕರಿಗೆ ದೆಹಲಿಗೆ ಬರುವಂತೆ ಬುಲಾವ್ ನೀಡಿದೆ. ಅಡ್ಡಮತದಾನದಿಂದ ಅಸಮಾಧಾನಗೊಂಡಿರುವ ಹೈಕಮಾಂಡ್ ಈ ಬಗ್ಗೆ ಚರ್ಚಿಸಲು ರಾಜ್ಯಾಧ್ಯಕ್ಷ ವಿಜಯೇಂದ್ರ ವಿಪಕ್ಷ ನಾಯಕ ಆರ್ ಅಶೋಕ್ ಹಾಗೂ ರಾಜ್ಯ ಬಿಜೆಪಿ ಉಸ್ತುವಾರಿ ರಾಧಾಮೋಹನ್ ದಾಸ್ ಅವರಿಗೆ ದೆಹಲಿಗೆ ಬರುವಂತೆ ಬುಲಾವ್ ಕೊಟ್ಟಿದೆ.

ಕೇಂದ್ರ ಸಚಿವ ಕುಮಾರಸ್ವಾಮಿ ತಮ್ಮ ಪಕ್ಷದ ನಾಲ್ವರು ಶಾಸಕರು ಅಡ್ಡಮತದಾನ ಮಾಡಿರೋದಾಗಿ ಹೇಳ್ತಿದ್ದಾರೆ. ಆದ್ರೆ ಬಿಜೆಪಿ ರಾಜ್ಯಾಧ್ಯಕ್ಷ ವಿಜಯೇಂದ್ರ ದಳ ಪಡೆಯ ಆರೇಳು ಶಾಸಕರು ಕ್ರಾಸ್ ವೋಟಿಂಗ್ ಮಾಡಿದ್ದಾರೆ ಅಂತಿದ್ದಾರೆ. ಹೀಗಾಗಿ ಮೈತ್ರಿ ನಾಯಕರ ನಡುವೆ ಅಂಕಿ ಸಂಖ್ಯೆಯ ಗೊಂದಲ ಇರುವುದು ಇಲ್ಲಿ ಗೆದ್ದು ಕಾಣುತ್ತಿದೆ. ರಾಜ್ಯ ರಾಜಕಾರಣದಲ್ಲಿ ಬದಲಾಗುತ್ತಿರುವ ರಾಜಕೀಯ ಸಮೀಕರಣಗಳ ಪ್ರಭಾವ ಅಡ್ಡಮತದಾನದ ಮೇಲೆ ಬಿದ್ದಿದೆ ಅನ್ನೋದು ರಾಜಕೀಯ ವಿಶ್ಲೇಷಣೆ. ಕಾಂಗ್ರೆಸ್ ಬೆಂಬಲಿಸಿದವರಿಗೆ ಮುಂದಿನ ಚುನಾವಣೆಗೆ ಟಿಕೆಟ್, ಬಿಜೆಪಿ-ಜೆಡಿಎಸ್ ಶಾಸಕರ ಅಭಿವೃದ್ಧಿಗೆ ಅನುದಾನದ ಭರವಸೆ ಕೊಟ್ಟಿರೋ ಮಾತು ರಾಜಕೀಯ ಪಡಸಾಲೆಯಲ್ಲಿ ಹರಿದಾಡ್ತಿದೆ.ಕೇಸರಿ-ದಳ ಶಾಸಕರಿಗೆ ಸಕಲ ರೀತಿಯಲ್ಲಿ ಸಹಾಯ ಹಸ್ತ ಭರವಸೆ ಕಾರಣಕ್ಕೆ ಕ್ರಾಸ್ ವೋಟಿಂಗ್ ಆಗಿರೋದಾಗಿ ತಿಳಿದುಬಂದಿದೆ. ರಾಜ್ಯ ಕಾಂಗ್ರೆಸ್‌ನೊಳಗೆ ಆತಂರಿಕ ಕಲಹ ಅಂತಿದ್ದ ವಿಪಕ್ಷಗಳಲ್ಲೇ ದೊಡ್ಡ ಬಿರುಕು ಇರೋದು ಬಟಾಬಯಲಾಗಿದೆ. ಮೈತ್ರಿಯೊಳಗಿನ ಅಸಮಾಧಾನ, ಗೊಂದಲ ಹಾಗೂ ಪಕ್ಷದ ಮೇಲಿನ ಬೇಸರದ ಬಗ್ಗೆ ಸದ್ಯ ರಾಜಕೀಯ ವಿಶ್ಲೇಷಣೆ ನಡೀತಿದೆ.

# ಬಸ್‌ಪಾಸ್ ದರ ಏರಿಕೆಗೆ ಸಾರ್ವಜನಿಕರ ಆಕ್ರೋಶ

ವಿಜಯಪುರ

ಎಡಗೈಯಲ್ಲಿ ಕೊಟ್ಟ ದಾನ ಬಲಗೈಗೆ ಗೊತ್ತಾಗಬಾರದು ಎಂಬುದು ಹಿರಿಯರ ಆಶಯ ನುಡಿ. ಆದರೆ ಇಂದಿನ ಸಾರಿಗೆ ಇಲಾಖೆ ಹಾಗೂ ಕಾಂಗ್ರೆಸ್ ಸರ್ಕಾರ ಈ ಗಾದೆಯನ್ನೇ ಉಲ್ಟಾ ಮಾಡಿದೆ.

ಎಡಗೈಯಲ್ಲಿ ಕೊಡುವುದನ್ನು ಜಗತ್ತಿಗೆಲ್ಲಾ ಡಂಗುರ ಹೊಡೆದು ಸಾರುವ ಸರ್ಕಾರ, ಬಲಗೈಯಲ್ಲಿ ಸಾರ್ವಜನಿಕರ ಜೇಬಿಗೆ ಕತ್ತರಿ ಹಾಕುವುದನ್ನು ಮಾತ್ರ ಸದ್ದಿಲ್ಲದೆ ಮಾಡುತ್ತಿದೆ ಎಂದು ವಿಜಯಪುರ ಹಾಗೂ ದೇವನಹಳ್ಳಿ ಭಾಗದ ನಾಗರಿಕರು ತೀವ್ರ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ವಿದ್ಯಾರ್ಥಿಗಳಿಗೆ ಬಸ್ಸುಗಳಲ್ಲಿ ಉಚಿತ ಸಂಚಾರದ ಭರವಸೆ ನೀಡಿ, ಅಂತರರಾಷ್ಟ್ರೀಯ ಮಟ್ಟದಲ್ಲಿ ಪ್ರಚಾರ ಗಿಟ್ಟಿಸಿಕೊಂಡ ಬೆನ್ನಲ್ಲೇ, ಯಾರ ಗಮನಕ್ಕೂ ಬಾರದಂತೆ ಜೂನ್ 2ನೇ ತಾರೀಕಿನಿಂದಲೇ ಜಾರಿಗೆ ಬರುವಂತೆ ವಿಜಯಪುರದಿಂದ ನೀಡಲಾಗುತ್ತಿದ್ದ ಬಿ.ಎಂ.ಟಿ.ಸಿ. ಬಸ್ಗಳ ದಿನವಹಿ ಪಾಸ್ ನಿಲ್ಲಿಸಿ, ಮಾಸಿಕ ಪಾಸ್ಗಳ ದರವನ್ನು ಭಾರಿ ಪ್ರಮಾಣದಲ್ಲಿ ಏರಿಕೆ ಮಾಡಿರುವುದು ಸಾರ್ವಜನಿಕರ ಕೆಂಗಣ್ಣಿಗೆ ಗುರಿಯಾಗಿದೆ.

ಒಂದೆಡೆ ವಿದ್ಯಾರ್ಥಿಗಳಿಗೆ ಉಚಿತ ಪ್ರಯಾಣ ಎಂದು ಆಸೆ ತೋರಿಸಿ, ಮತ್ತೊಂದೆಡೆ ಸಾರ್ವಜನಿಕರ ಬಸ್ ಪಾಸ್ ದರಗಳನ್ನು ಕದ್ದುಮುಚ್ಚಿ ಏರಿಸುವುದು ಯಾವ ನ್ಯಾಯ? ಗ್ಯಾರಂಟಿ ಹೆಸರಿನಲ್ಲಿ ಮಹಿಳೆಯರಿಗೆ ರೂ2,000 ನೀಡುವುದನ್ನು ದೊಡ್ಡ ದೊಡ್ಡ ಜಾಹೀರಾತುಗಳ ಮೂಲಕ ಪ್ರಚಾರ ಮಾಡುವ ಸರ್ಕಾರ, ಕೇವಲ ರೂ20 ಇದ್ದ ಸ್ಟಾಂಪ್ ಪೇಪರ್ ಶುಲ್ಕವನ್ನು 100 ರೂ ಗೆ ಏರಿಸಿದೆ. ಮದ್ಯದ ದರ, ನೋಂದಣಿ ಶುಲ್ಕ, ಕಂದಾಯ ಹೀಗೆ ಸರಕಾರ ಕೈಹಾಕದ ಮತ್ತು ಬೆಲೆ ಏರಿಸದ ಕ್ಷೇತ್ರವೇ ಇಲ್ಲದಂತಾಗಿದೆ ಎಂದು ಬಳುವನಹಳ್ಳಿಯ ರೈತ ಕೃಷ್ಣಪ್ಪ ಸರಕಾರದ ವಿರುದ್ಧ ಹರಿಹಾಯ್ದರು.

# ಮಾವು ಬೆಳೆಗಾರರ ಸಂಕಷ್ಟಕ್ಕೆ ಕೇಂದ್ರದ ಮಧ್ಯಪ್ರವೇಶ ಕೋರಿದ ಸಂಸದ ಡಾ.ಕೆ.ಸುಧಾಕರ್

ಚಿಕ್ಕಬಳ್ಳಾಪುರ

ಸೇರಿದಂತೆ ರಾಜ್ಯದ ಹಲವು ಭಾಗಗಳಲ್ಲಿ ಮಾವಿನ ಬೆಲೆ ತೀವ್ರ ಕುಸಿತ ಕಂಡಿರುವ ಹಿನ್ನೆಲೆಯಲ್ಲಿ ರೈತರ ಪರವಾಗಿ ಧ್ವನಿಯಾಗಿರುವ ಡಾ. ಕೆ. ಸುಧಾಕರ್ ಅವರು ಕೇಂದ್ರ ಕೃಷಿ ಮತ್ತು ರೈತರ ಕಲ್ಯಾಣ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಅವರಿಗೆ ಪತ್ರ ಬರೆದು ತಕ್ಷಣ ಮಧ್ಯಪ್ರವೇಶಿಸುವಂತೆ ಮನವಿ ಮಾಡಿದ್ದಾರೆ.

ಈ ವರ್ಷ ಉತ್ತಮ ಇಳುವರಿ ಬಂದಿದ್ದರೂ ಸಮರ್ಪಕ ಖರೀದಿ ವ್ಯವಸ್ಥೆ, ಸಂಸ್ಕರಣಾ ಸೌಲಭ್ಯ ಮತ್ತು ಮಾರುಕಟ್ಟೆ ಬೆಂಬಲದ ಕೊರತೆಯಿಂದ ಮಾವಿನ ಬೆಲೆ ಕೆ.ಜಿಗೆ ಕೇವಲ 4 ರಿಂದ 6 ರೂಪಾಯಿವರೆಗೆ ಕುಸಿದಿದೆ. ಇದರಿಂದ ಸಾವಿರಾರು ರೈತರು ತಮ್ಮ ಉತ್ಪಾದನಾ ವೆಚ್ಚ, ಕೊಯ್ಲು ಮತ್ತು ಸಾರಿಗೆ ಖರ್ಚನ್ನೂ ವಾಪಸ್ ಪಡೆಯಲಾಗದ ಸ್ಥಿತಿಗೆ ತಲುಪಿದ್ದಾರೆ ಎಂದು ಅವರು ಆತಂಕ ವ್ಯಕ್ತಪಡಿಸಿದ್ದಾರೆ.

ಬೆಲೆ ಸ್ಥಿರಗೊಳಿಸಲು ಹಾಗೂ ರೈತರನ್ನು ನಷ್ಟದಿಂದ ರಕ್ಷಿಸಲು ರಾಷ್ಟ್ರೀಯ ಕೃಷಿ ಸಹಕಾರಿ ಮಾರುಕಟ್ಟೆ ಒಕ್ಕೂಟ ಮತ್ತು ಇತರೆ ಸಂಸ್ಥೆಗಳ ಮೂಲಕ ತಕ್ಷಣ ಖರೀದಿ ಪ್ರಕ್ರಿಯೆ ಆರಂಭಿಸಬೇಕು ಎಂದು ಅವರು ಒತ್ತಾಯಿಸಿದ್ದಾರೆ. ವಿಶೇಷವಾಗಿ ಚಿಕ್ಕಬಳ್ಳಾಪುರ, ಕೋಲಾರ, ಬೆಂಗಳೂರು ಗ್ರಾಮಾಂತರ ಮತ್ತು ರಾಮನಗರ ಜಿಲ್ಲೆಗಳಲ್ಲಿ ವಿಶೇಷ ಖರೀದಿ ವ್ಯವಸ್ಥೆ ಜಾರಿಗೊಳಿಸುವ ಅಗತ್ಯವಿದೆ ಎಂದು ತಿಳಿಸಿದ್ದಾರೆ.



ಹೆಚ್ಚುವರಿ ಮಾವನ್ನು ಆಹಾರ ಸಂಸ್ಕರಣಾ ಘಟಕಗಳು ಮತ್ತು ರೈತ ಉತ್ಪಾದಕ ಸಂಸ್ಥೆಗಳ ಮೂಲಕ ಮೌಲ್ಯವರ್ಧನೆ ಮಾಡಿ ಬೃಹತ್ ಪ್ರಮಾಣದಲ್ಲಿ ಸಂಸ್ಕರಣೆ ನಡೆಸಬೇಕು.

ಜೊತೆಗೆ ಅಂತರರಾಜ್ಯ ಹಾಗೂ ವಿದೇಶಿ ಮಾರುಕಟ್ಟೆಗಳಿಗೆ ರಫ್ತು ಹೆಚ್ಚಿಸಲು ಸಾರಿಗೆ ಮತ್ತು ಮಾರುಕಟ್ಟೆ ಸಂಪರ್ಕದ ಅಡಚಣೆಗಳನ್ನು ನಿವಾರಿಸಬೇಕು ಎಂದು ಅವರು ಮನವಿ ಮಾಡಿದ್ದಾರೆ.

ಮಾವು ಬೆಳೆಗಾರರು ಅನುಭವಿಸಿರುವ ನಷ್ಟದ ತಕ್ಷಣದ ಮೌಲ್ಯಮಾಪನ ನಡೆಸಿ, ಕೇಂದ್ರದ ವಿವಿಧ ಯೋಜನೆಗಳಡಿ ಪರಿಹಾರ ಒದಗಿಸಬೇಕು. ಕೃಷಿ ಮತ್ತು ಆಹಾರ ಸಂಸ್ಕರಣಾ ಸಚಿವಾಲಯದ ಅಧಿಕಾರಿಗಳ ಜಂಟಿ ತಂಡವನ್ನು ಕರ್ನಾಟಕಕ್ಕೆ ಕಳುಹಿಸಿ ಪರಿಸ್ಥಿತಿಯನ್ನು ಪರಿಶೀಲಿಸಿ ಸೂಕ್ತ ಪರಿಹಾರ ಕ್ರಮಗಳನ್ನು ಕೈಗೊಳ್ಳಬೇಕು ಎಂದು ಪತ್ರದಲ್ಲಿ ಕೋರಿದ್ದಾರೆ.

ಕರ್ನಾಟಕದ ಬಯಲುಸೀಮೆ ಭಾಗದ ರೈತರಿಗೆ ಮಾವು ಕೇವಲ ಒಂದು ಬೆಳೆ ಅಲ್ಲ, ಅದು ಗ್ರಾಮೀಣ ಆರ್ಥಿಕತೆಯ ಜೀವನಾಡಿಯಾಗಿದೆ. ರೈತರು ತಮ್ಮ ಶ್ರಮದ ಫಲವನ್ನು ಅತ್ಯಂತ ಕಡಿಮೆ ಬೆಲೆಗೆ ಮಾರಾಟ ಮಾಡುವ ಪರಿಸ್ಥಿತಿ ಬರಬಾರದು ಎಂದು ಒತ್ತಿಹೇಳಿರುವ ಡಾ. ಸುಧಾಕರ್, ರೈತರ ಹಿತಾಸಕ್ತಿಗಾಗಿ ತಾವು ಸದಾ ಅವರೊಂದಿಗಿರುವುದಾಗಿ ತಿಳಿಸಿದ್ದಾರೆ.

# ದೇವರ ದಾಸಿಮಯ್ಯ ಹೆಬ್ಬಾಗಿಲು ಉದ್ಘಾಟನೆ



ದೊಡ್ಡಬಳ್ಳಾಪುರ

ನಗರದ ಚೈತನ್ಯನಗರದಲ್ಲಿ ನಿರ್ಮಾಣಗೊಂಡಿರುವ ನೂತನ ಸ್ವಾಗತ ಕಮಾನಿಗೆ "ಶ್ರೀ ದೇವರ ದಾಸಿಮಯ್ಯ ಹೆಬ್ಬಾಗಿಲು" ಎಂದು ನಾಮಕರಣ ಮಾಡಲಾಗಿದ್ದು, ಶಾಸಕ ಧೀರಜ್ ಮುನಿರಾಜು ಅವರು ಅದನ್ನು ಉದ್ಘಾಟಿಸಿದರು.

ಸುಮಾರು 4.80 ಲಕ್ಷ ರೂ. ವೆಚ್ಚದಲ್ಲಿ ನಿರ್ಮಾಣಗೊಂಡಿರುವ ಈ ಹೆಬ್ಬಾಗಿಲನ್ನು ಸ್ಥಳೀಯ ನಗರಸಭಾ ಸದಸ್ಯರೊಂದಿಗೆ ಉದ್ಘಾಟಿಸಿದ ಅವರು, ದೊಡ್ಡಬಳ್ಳಾಪುರದಲ್ಲಿ ನೇಕಾರಿಕೆ ಪ್ರಮುಖ ಉದ್ಯಮವಾಗಿದ್ದು, ನೇಕಾರ ಸಮುದಾಯದ ಕೊಡುಗೆಯನ್ನು ಗೌರವಿಸುವ ಉದ್ದೇಶದಿಂದ ಈ ಹೆಬ್ಬಾಗಿಲಿಗೆ ದೇವರ ದಾಸಿಮಯ್ಯರ ಹೆಸರನ್ನು ಇಡಲಾಗಿದೆ ಎಂದು ಹೇಳಿದರು.

ಈ ಹಿಂದೆ ನಗರಸಭೆ ಅಧ್ಯಕ್ಷೆಯಾಗಿದ್ದ ಸುಧಾರಾಣಿ ಲಕ್ಷ್ಮೀನಾರಾಯಣ ಅವರ ಅವಧಿಯಲ್ಲಿ ಈ ಕಾಮಗಾರಿಗೆ ಅನುಮೋದನೆ ದೊರೆತಿದ್ದು, ಇದೀಗ ಕಾಮಗಾರಿ ಪೂರ್ಣಗೊಂಡ ಹಿನ್ನೆಲೆಯಲ್ಲಿ ಸಾರ್ವಜನಿಕರ ಸಹಯೋಗದೊಂದಿಗೆ ಉದ್ಘಾಟನೆ ನೆರವೇರಿಸಲಾಗಿದೆ ಎಂದು ತಿಳಿಸಿದರು. ತಾಲೂಕಿನಾದ್ಯಂತ ನೇಕಾರಿಕೆ ವೃತ್ತಿಯನ್ನು ಅವಲಂಬಿಸಿ ಬದುಕುತ್ತಿರುವ ಸಾವಿರಾರು ಕುಟುಂಬಗಳಿಗೆ ಈ ಹೆಬ್ಬಾಗಿಲನ್ನು ಸಮರ್ಪಿಸಲಾಗಿದೆ ಎಂದರು.

ಈ ಸಂದರ್ಭದಲ್ಲಿ ಮಾತನಾಡಿದ ಸ್ಥಳೀಯ ಮುಖಂಡ ಲಕ್ಷ್ಮೀನಾರಾಯಣ, 11ನೇ ಶತಮಾನದ ಶಿವಶರಣರಲ್ಲಿ ಪ್ರಮುಖರಾದ ದೇವರ ದಾಸಿಮಯ್ಯ ಅವರು ಶರಣ ಸಂಪ್ರದಾಯದ ಆದ್ಯ ವಚನಕಾರರಾಗಿ ಹಾಗೂ ಜನಪದ ಜಗದ್ಗುರುವಾಗಿ ಪ್ರಸಿದ್ಧರಾಗಿದ್ದಾರೆ. ಇಂತಹ ಮಹಾನ್ ಐತಿಹಾಸಿಕ ವ್ಯಕ್ತಿಯ ಹೆಸರನ್ನು ವಾರ್ಡಿನ ಹೆಬ್ಬಾಗಿಲಿಗೆ ನಾಮಕರಣ ಮಾಡಿರುವುದು ಹೆಮ್ಮೆಯ ಸಂಗತಿ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ನಗರಸಭೆ ಅಧ್ಯಕ್ಷೆ ಸುಮಿತ್ರ ಆನಂದ್, ಪೌರಾಯುಕ್ತ ಕಾರ್ತಿಕೇಶ್ವರ್, ಉಪಾಧ್ಯಕ್ಷ ವೆಂಕಟೇಶ್ ಬಂತಿ, ನಗರಸಭೆ ಸದಸ್ಯರು, ದೇವಾಂಗ ಸಮುದಾಯದ ಮುಖಂಡರು, ಸ್ಥಳೀಯ ಗಣ್ಯರು ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.

# ವಿದ್ಯುತ್ ಖಾಸಗೀಕರಣ ವಿರುದ್ಧ ರೈತರ ಬೃಹತ್ ಪ್ರತಿಭಟನೆ: ಬಿಲ್ ವಾಪಸ್ ಪಡೆಯಲು ಆಗ್ರಹ

ತುಮಕೂರು

ಸಂಸತ್ತಿನಲ್ಲಿ ಮಂಡನೆಯಾಗಿರುವ ವಿದ್ಯುತ್ ಖಾಸಗಿ ಮಸೂದೆ ವಾಪಸ್ ಪಡೆಯಬೇಕು ಹಾಗೂ ರಾಜ್ಯದ 19 ಜಿಲ್ಲೆಗಳ ವಿದ್ಯುತ್ ಸರಬರಾಜು ನಿರ್ವಹಣೆಯನ್ನು ಖಾಸಗಿ ಕಂಪನಿಗೆ ವಹಿಸುವ ನಿರ್ಧಾರವನ್ನು ಕೈಬಿಡಬೇಕು ಎಂದು ಒತ್ತಾಯಿಸಿ ಕರ್ನಾಟಕ ರಾಜ್ಯ ರೈತ ಸಂಘದ ನೇತೃತ್ವದಲ್ಲಿ ಜಿಲ್ಲೆಯ ಜಿಲ್ಲಾಧಿಕಾರಿ ಕಚೇರಿ ಮುಂಭಾಗ ಪ್ರತಿಭಟನೆ ನಡೆಯಿತು.

ಕರ್ನಾಟಕ ರಾಜ್ಯ ರೈತ ಸಂಘದ ರಾಜ್ಯ ಕಾರ್ಯಾಧ್ಯಕ್ಷ ಹಾಗೂ ತುಮಕೂರು ಜಿಲ್ಲಾಧ್ಯಕ್ಷ ಎ. ಗೋವಿಂದರಾಜು ಅವರ ನೇತೃತ್ವದಲ್ಲಿ ನೂರಾರು ರೈತರು, ವಿದ್ಯುತ್ ಗುತ್ತಿಗೆದಾರರು ಹಾಗೂ ಬಳಕೆದಾರರ ಸಂಘದ ಸದಸ್ಯರು ಪ್ರತಿಭಟನೆಯಲ್ಲಿ ಭಾಗವಹಿಸಿದರು.

ಪ್ರತಿಭಟನಾಕಾರರು ಮಾತನಾಡಿ, ರಾಜ್ಯದ ವಿದ್ಯುತ್ ಇಲಾಖೆ ಸಾರ್ವಜನಿಕರ ತೆರಿಗೆ ಹಣದಿಂದ ನಿರ್ಮಿತವಾಗಿದ್ದು, ಅದನ್ನು ಖಾಸಗಿ ಸಂಸ್ಥೆಗಳ ವಶಕ್ಕೆ ನೀಡಿದರೆ ವಿದ್ಯುತ್ ದರ ಏರಿಕೆ, ಸ್ಮಾರ್ಟ್ ಮೀಟರ್ ಮೂಲಕ ಹೆಚ್ಚಿನ ಶುಲ್ಕ ವಿಧಿಸುವ ಸಾಧ್ಯತೆ ಹೆಚ್ಚುತ್ತದೆ ಎಂದು ಆತಂಕ ವ್ಯಕ್ತಪಡಿಸಿದರು. ಈಗಾಗಲೇ ಕೆಲ ರಾಜ್ಯಗಳಲ್ಲಿ ವಿದ್ಯುತ್ ದರ ಏರಿಕೆಯಾಗಿರುವ ಉದಾಹರಣೆಗಳನ್ನು ಉಲ್ಲೇಖಿಸಿ, ಇದು ರೈತರಿಗೆ ದೊಡ್ಡ ಹೊಡೆತವಾಗಲಿದೆ ಎಂದು ಹೇಳಿದರು.

ವಿದ್ಯುತ್ ಗುತ್ತಿಗೆದಾರರ ಸಂಘದ ಜಿಲ್ಲಾ ಅಧ್ಯಕ್ಷ ಶ್ರೀನಿವಾಸ್ ಮಾತನಾಡಿ, ಖಾಸಗೀಕರಣದಿಂದ ಸಾವಿರಾರು ಗುತ್ತಿಗೆದಾರರು ಮತ್ತು ಅವರ ಕುಟುಂಬಗಳು ಉದ್ಯೋಗ ಕಳೆದುಕೊಳ್ಳುವ ಅಪಾಯವಿದೆ ಎಂದು ಎಚ್ಚರಿಸಿದರು. ಜೊತೆಗೆ ಸರ್ಕಾರಿ ನೌಕರರು ಕಡಿಮೆ ವೇತನದಲ್ಲಿ ಖಾಸಗಿ ಕಂಪನಿಗಳ ಅಧೀನದಲ್ಲಿ ಕೆಲಸ ಮಾಡಬೇಕಾಗುತ್ತದೆ ಎಂದು ಹೇಳಿದರು.

ಈ ಹಿನ್ನೆಲೆಯಲ್ಲಿ ಸಂಸತ್ತಿನಲ್ಲಿ ಮಂಡನೆಯಾಗಿರುವ ವಿದ್ಯುತ್ ಖಾಸಗಿ ಮಸೂದೆ ತಕ್ಷಣ ವಾಪಸ್ ಪಡೆಯಬೇಕು ಹಾಗೂ ಖಾಸಗೀಕರಣ ಕ್ರಮವನ್ನು ಕೈಬಿಡಬೇಕು ಎಂದು ಆಗ್ರಹಿಸಿ ಜಿಲ್ಲಾಧಿಕಾರಿಗೆ ಮನವಿ ಸಲ್ಲಿಸಲಾಯಿತು.

# ‘ಟಿವಿಕೆ, ಕಾಂಗ್ರೆಸ್ ಪಕ್ಷದಿಂದ ಬೆಂಬಲ ವಾಪಸ್ ಪಡೆಯಲಿ’

ಬೆಂಗಳೂರು

ತಮಿಳುನಾಡಲ್ಲಿ ಟಿವಿಕೆ ಪಕ್ಷದ ಸರ್ಕಾರ ಮೇಕೆದಾಟು ಯೋಜನೆಗೆ ವಿರುದ್ಧವಾಗಿ ನಿರ್ಣಯ ಕೈಗೊಂಡಿದೆ. ಈಗ ಕಾಂಗ್ರೆಸ್ ತನ್ನ ಬೆಂಬಲವನ್ನು ಹಿಂಪಡೆಯಲಿ ಎಂದು ಪ್ರತಿಪಕ್ಷ ನಾಯಕ ಆರ್.ಅಶೋಕ ಸವಾಲು ಹಾಕಿದರು.



ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ತಮಿಳುನಾಡಲ್ಲಿ ಡಿಎಂಕೆ ಬೆನ್ನಿಗೆ ಚೂರಿ ಹಾಕಿದ ಕಾಂಗ್ರೆಸ್, ಟಿವಿಕೆ ಜೊತೆ ಸೇರಿಕೊಂಡಿದೆ. ಅದೇ ಟಿವಿಕೆ ಪಕ್ಷ ಈಗ ಮೇಕೆದಾಟು ಯೋಜನೆ ಜಾರಿಯಾಗಲು ಬಿಡುವುದಿಲ್ಲ ಎಂದು ನಿರ್ಣಯ ಕೈಗೊಂಡಿದೆ. ಕಾಂಗ್ರೆಸ್ ಪಕ್ಷಕ್ಕೆ ಧೈರ್ಯವಿದ್ದರೆ ಟಿವಿಕೆಗೆ ನೀಡಿದ ಬೆಂಬಲವನ್ನು ವಾಪಸ್ ಪಡೆಯಬೇಕು. ಇಲ್ಲವಾದರೆ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಡಬಲ್ ಸ್ಟಾಂಡರ್ಡ್ ಹಾಗೂ ಎರಡು ನಾಲಿಗೆ ಎಂದು ಒಪ್ಪಿಕೊಳ್ಳಬೇಕು. ಕಾಂಗ್ರೆಸ್ ಸರ್ಕಾರ ಇರುವವರೆಗೂ ಮೇಕೆದಾಟು ಯೋಜನೆ ಜಾರಿಯಾಗಲು ಸಾಧ್ಯವಿಲ್ಲ. ಇವರು ಪಾದಯಾತ್ರೆ ಮಾಡಿದ್ದು ಕೇವಲ ಮತಕ್ಕಾಗಿ ಎಂದು ಟೀಕೆ ಮಾಡಿದರು. ಕಾಂಗ್ರೆಸ್ ಸರ್ಕಾರ ರೇಷನ್ ಕಾರ್ಡ್‌ಗಳಿಗೆ ಕತ್ತರಿ ಹಾಕಿ ಗ್ಯಾರಂಟಿ ಫಲಾನುಭವಿಗಳನ್ನು ಕಡಿಮೆ ಮಾಡುತ್ತಿದೆ. ಉಚಿತ ವಿದ್ಯುತ್ ಪಡೆಯುವ ಯೋಜನೆಯಲ್ಲೂ ಬೋಗಸ್ ಇದೆ ಎನ್ನುತ್ತಿದ್ದಾರೆ ಎಂದರು.

# ‘ಅಡ್ಡ ಮತದಾನ ಮಾಡಿದವರ ವಿರುದ್ಧ ಸಮಯ ಬಂದಾಗ ಕ್ರಮ’

ಮೈಸೂರು

ವಿಧಾನಪರಿಷತ್ ಚುನಾವಣೆಯಲ್ಲಿ ಅಡ್ಡ ಮತದಾನ ನಡೆದಿರುವುದು ನನಗೆ ಮೊದಲೇ ಗೊತ್ತಿತ್ತು. ಯಾರು ಪಕ್ಷದ ವಿರುದ್ಧ ಮತ ಚಲಾಯಿಸಿದ್ದಾರೆ ಎಂಬ ಮಾಹಿತಿಯೂ ಇದೆ. ಆದರೆ ಇದರಿಂದ ನಾನು ವಿಚಲಿತನಾಗಿಲ್ಲ ಎಂದು ಕೇಂದ್ರ ಸಚಿವ ಹಾಗೂ ಜೆಡಿಎಸ್ ರಾಜ್ಯಾಧ್ಯಕ್ಷ ಹೆಚ್.ಡಿ. ಕುಮಾರಸ್ವಾಮಿ ಹೇಳಿದರು.

ಮೈಸೂರಿನಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಪಕ್ಷದ ನಾಲ್ವರು ಶಾಸಕರು ಅಡ್ಡ ಮತದಾನ ಮಾಡಿದ್ದು, ಪಕ್ಷ ತೊರೆಯುವ ಬಗ್ಗೆ ಚರ್ಚೆ ನಡೆಸಿರುವ ವಿಚಾರವೂ ತಮ್ಮ ಗಮನಕ್ಕೆ ಬಂದಿದೆ ಎಂದು ತಿಳಿಸಿದರು.

ಪಕ್ಷದ ಅಭ್ಯರ್ಥಿಯನ್ನು ಕಣಕ್ಕಿಳಿಸುವ ಮೂಲಕ ಯಾರ ಆತ್ಮಸಾಕ್ಷಿ ಹೇಗೆ ಕಾರ್ಯನಿರ್ವಹಿಸುತ್ತದೆ ಎಂಬುದನ್ನು ಪರೀಕ್ಷಿಸಲು ಅವಕಾಶ ಸಿಕ್ಕಿದ್ದು, ನಿರೀಕ್ಷಿಸಿದಂತೆಯೇ ಬೆಳವಣಿಗೆಗಳು ನಡೆದಿವೆ ಎಂದು ಹೇಳಿದರು.



ಅಡ್ಡ ಮತದಾನ ಮಾಡಿದವರ ವಿರುದ್ಧ ಸೂಕ್ತ ಸಮಯದಲ್ಲಿ ಕ್ರಮ ಕೈಗೊಳ್ಳಲಾಗುವುದು ಎಂದು ಎಚ್ಚರಿಕೆ ನೀಡಿದ ಅವರು, ಪಕ್ಷವನ್ನು ಮತ್ತಷ್ಟು ಬಲಪಡಿಸುವ ಶಕ್ತಿ ತಮ್ಮಲ್ಲಿದೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ಅತಿಯಾದ ನಂಬಿಕೆ ಮತ್ತು ವಿಶ್ವಾಸವೇ ಈ ಸೋಲಿಗೆ ಕಾರಣವಾಗಿದ್ದು, ಅದರಿಂದ ಪಾಠ ಕಲಿದು ಮುಂದಿನ ದಿನಗಳಲ್ಲಿ ಪಕ್ಷವನ್ನು ಹೊಸ ರೀತಿಯಲ್ಲಿ ಕಟ್ಟಲಾಗುವುದು ಎಂದರು.

ಯುವ ನಾಯಕತ್ವಕ್ಕೆ ಹೆಚ್ಚಿನ ಅವಕಾಶ ನೀಡುವ ಬಗ್ಗೆ ಮಾತನಾಡಿದ ಕುಮಾರಸ್ವಾಮಿ, ಮುಂದಿನ ದಿನಗಳಲ್ಲಿ ಹೊಸ ತಲೆಮಾರಿನ ಯುವಕರನ್ನು ರಾಜಕೀಯವಾಗಿ ಬೆಳೆಸಲು ಆದ್ಯತೆ ನೀಡಲಾಗುವುದು ಎಂದು ಹೇಳಿದರು. ಪಕ್ಷದಲ್ಲಿ ಹೊಸ ಮುಖಗಳಿಗೆ ಅವಕಾಶ ಕಲ್ಪಿಸಿ ಹೊಸ ನಾಯಕತ್ವ ರೂಪಿಸುವ ನಿರ್ಧಾರ ಕೈಗೊಂಡಿರುವುದಾಗಿ ತಿಳಿಸಿದರು.

ಮೈಸೂರು ಜಿಲ್ಲೆಯ ಒಬ್ಬ ಶಾಸಕರ ಬಗ್ಗೆ ಕೇಳಿದ ಪ್ರಶ್ನೆಗೆ ತೀವ್ರ ಅಸಮಾಧಾನ ವ್ಯಕ್ತಪಡಿಸಿದ ಅವರು, ಆ ನಾಯಕರ ಕುರಿತು ಮಾತನಾಡಲು ನಿರಾಕರಿಸಿದರು. ಪಕ್ಷದ ಹಿತಾಸಕ್ತಿಯನ್ನು ಗಮನದಲ್ಲಿಟ್ಟುಕೊಂಡು ಕೆಲವು ಕಠಿಣ ನಿರ್ಧಾರಗಳನ್ನು ತೆಗೆದುಕೊಳ್ಳುವುದು ಅನಿವಾರ್ಯವಾಗಿದ್ದು, ಅಂತಿಮ ನಿರ್ಧಾರ ತಮ್ಮದೇ ಆಗಿರಲಿದೆ ಎಂದು ಸ್ಪಷ್ಟಪಡಿಸಿದರು.

ಪಕ್ಷದ ಕಾರ್ಯಕರ್ತರು ಮತ್ತು ನಾಯಕರ ಪರಿಶ್ರಮದಿಂದ ಕಟ್ಟಿದ ಸಂಘಟನೆಯನ್ನು ಉಳಿಸುವುದು ಮುಖ್ಯವಾಗಿದ್ದು, ಪಕ್ಷದ ವಿರುದ್ಧ ನಡೆದುಕೊಂಡವರ ಬಗ್ಗೆ ತಮ್ಮ ನಿಲುವು ಸ್ಪಷ್ಟವಾಗಿದೆ ಎಂದು ಕುಮಾರಸ್ವಾಮಿ ಹೇಳಿದರು.

ಮುಂದಿನ ವಿಧಾನಸಭೆ ಚುನಾವಣೆಗೆ ಸಂಬಂಧಿಸಿದ ಅಭ್ಯರ್ಥಿಗಳ ಆಯ್ಕೆ ಸೇರಿದಂತೆ ಪ್ರಮುಖ ನಿರ್ಧಾರಗಳನ್ನು ತಾವೇ ಕೈಗೊಳ್ಳುವುದಾಗಿ ತಿಳಿಸಿದರು.

## ಹೆಸರಿಗಷ್ಟೇ ಘನತ್ಯಾಜ್ಯ ನಿರ್ವಹಣಾ ಘಟಕ: ದರ್ಗಾಜೋಗಹಳ್ಳಿಯಲ್ಲಿ

# ಕಸದ ರಾಶಿ, ಸ್ಥಳೀಯರ ಆಕ್ರೋಶ



ದೊಡ್ಡಬಳ್ಳಾಪುರ

ತಾಲೂಕಿನ ದರ್ಗಾಜೋಗಹಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಘನತ್ಯಾಜ್ಯ ಸಂಪನ್ಮೂಲ ನಿರ್ವಹಣಾ ಘಟಕ ತನ್ನ ಉದ್ದೇಶವನ್ನೇ ಮರೆತಂತಿದ್ದು, ಘಟಕದ ಆವರಣದಲ್ಲೇ ರಾಶಿರಾಶಿಯಾಗಿ ಕಸ ಸಂಗ್ರಹವಾಗಿರುವುದು ಸಾರ್ವಜನಿಕರ ಅಸಮಾಧಾನಕ್ಕೆ ಕಾರಣವಾಗಿದೆ.

ಸರ್ಕಾರ ಮತ್ತು ಸ್ಥಳೀಯ ಸಂಸ್ಥೆಗಳು ಮನೆಮನೆಗೆ ತೆರಳಿ ಹಸಿ ಹಾಗೂ ಒಣ ಕಸವನ್ನು ಪ್ರತ್ಯೇಕವಾಗಿ ನೀಡುವಂತೆ ಜಾಗೃತಿ ಮೂಡಿಸುತ್ತಿರುವುದರ ಜೊತೆಗೆ, ಸಾರ್ವಜನಿಕರು ರಸ್ತೆ ಬದಿಯಲ್ಲಿ ಕಸ ಎಸೆಯುವವರ ವಿರುದ್ಧ ದಂಡ ವಿಧಿಸುತ್ತಿವೆ. ಆದರೆ ಅಧಿಕೃತವಾಗಿ ಕಸ ವಿಲೇವಾರಿ ಮತ್ತು ನಿರ್ವಹಣೆಗಾಗಿ ಸ್ಥಾಪಿಸಲಾದ ಘಟಕಗಳಲ್ಲೇ ಕಸ ವಿಲೇವಾರಿ ಸಮರ್ಪಕವಾಗಿ ನಡೆಯದಿದ್ದರೆ ಅದರ ಹೊಣೆ ಯಾರು ಹೊರುತ್ತಾರೆ ಎಂಬ ಪ್ರಶ್ನೆಯನ್ನು ಸ್ಥಳೀಯರು ಎತ್ತಿದ್ದಾರೆ.

ದರ್ಗಾಜೋಗಹಳ್ಳಿಯ ಘನತ್ಯಾಜ್ಯ ನಿರ್ವಹಣಾ ಘಟಕದ ಒಳಭಾಗದಲ್ಲಿ ಕ್ವಿಂಟಲ್‌ಗಟ್ಟಲೆ ಕಸ ಸಂಗ್ರಹವಾಗಿದ್ದು, ಕೊಳೆತು ದುರ್ವಾಸನೆ ಬೀರುತ್ತಿದೆ ಎನ್ನಲಾಗಿದೆ. ಕೇವಲ ಹಸಿ ಕಸ ಮಾತ್ರ ಇದೆ ಎಂದು ಸಿಬ್ಬಂದಿ ಹೇಳುತ್ತಿದ್ದರೂ, ಕಸದ ರಾಶಿಯಲ್ಲಿ ಪ್ಲಾಸ್ಟಿಕ್, ಲೋಹದ ವಸ್ತುಗಳು ಹಾಗೂ ವೈದ್ಯಕೀಯ ತ್ಯಾಜ್ಯದಂತಹ ವಸ್ತುಗಳೂ ಕಂಡುಬರುತ್ತಿವೆ ಎಂದು ಸ್ಥಳೀಯರು ಆರೋಪಿಸಿದ್ದಾರೆ.

ಗ್ರಾಮ ಸ್ವಚ್ಛತೆ ಕಾಪಾಡಲು ಸರ್ಕಾರದಿಂದ ಅನುದಾನ, ಅಗತ್ಯ ಸೌಲಭ್ಯಗಳು ಹಾಗೂ ಸಿಬ್ಬಂದಿಯನ್ನು ಒದಗಿಸಲಾಗಿದ್ದರೂ, ಘಟಕದ ನಿರ್ವಹಣೆಯಲ್ಲಿ ನಿರ್ಲಕ್ಷ್ಯ ಕಂಡುಬರುತ್ತಿದೆ ಎಂದು ಗ್ರಾಮಸ್ಥರು ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ಘಟಕದ ಸ್ಥಿತಿಗತಿಯನ್ನು ಪರಿಶೀಲಿಸಿ ಸಮಸ್ಯೆಗೆ ಶಾಶ್ವತ ಪರಿಹಾರ ಕಲ್ಪಿಸಲು ಸಂಬಂಧಪಟ್ಟ ಅಧಿಕಾರಿಗಳು, ಗ್ರಾಮ ಪಂಚಾಯಿತಿ ಅಧ್ಯಕ್ಷರು ಹಾಗೂ ಜನಪ್ರತಿನಿಧಿಗಳು ತಕ್ಷಣ ಭೇಟಿ ನೀಡಿ ಕ್ರಮ ಕೈಗೊಳ್ಳಬೇಕು ಎಂದು ಸ್ಥಳೀಯರು ಆಗ್ರಹಿಸಿದ್ದಾರೆ.



ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಶುಕ್ರವಾರ ಉಪ ಮುಖ್ಯಮಂತ್ರಿ ಡಾ.ಜಿ. ಪರಮೇಶ್ವರ ಅವರ ನಿವಾಸಕ್ಕೆ ಭೇಟಿ ನೀಡಿ ಆರೋಗ್ಯ ವಿಚಾರಿಸಿದರು. ಶೀಘ್ರ ಗುಣಮುಖರಾಗುವಂತೆ ಹಾರೈಸಿದರು.

# ನ್ಯಾಯಾಧೀಶರಾಗಿ ನೇಮಕಕ್ಕೆ ಕೊಲಿಜಿಯಂ ಒಪ್ಪಿಗೆ

ಚಿಕ್ಕಬಳ್ಳಾಪುರ

ದೆಹಲಿಗೆ ತೆರಳುವ ಮೊದಲು ಅವರು ಕರ್ನಾಟಕ ಹೈಕೋರ್ಟ್ ಮತ್ತು ಬೆಂಗಳೂರಿನ ವಿವಿಧ ನ್ಯಾಯಾಲಯಗಳಲ್ಲಿ ವಕೀಲ ವೃತ್ತಿ ನಡೆಸಿದ್ದರು. 2006ರಲ್ಲಿ ಸುಪ್ರೀಂಕೋರ್ಟ್‌ನ ಅಡ್ವೊಕೇಟ್–ಆನ್–ರೆಕಾರ್ಡ್ ಆಗಿ ಅರ್ಹತೆ ಪಡೆದ ಅವರು, ವೈಯಕ್ತಿಕ ಹಾಗೂ ಸಾಂಸ್ಥಿಕ ಕಕ್ಷಿದಾರರ ಪರವಾಗಿ ವಾದ ಮಂಡಿಸುವುದರ ಜೊತೆಗೆ ಕಾನೂನು ಸೇವಾ ಕ್ಷೇತ್ರದಲ್ಲಿಯೂ ಗಮನಾರ್ಹ ಕೊಡುಗೆ ನೀಡಿದ್ದಾರೆ. ಹಲವು ರಾಜ್ಯಗಳ ಸರ್ಕಾರಿ ಸಂಸ್ಥೆಗಳು, ಸಾರ್ವಜನಿಕ ವಲಯದ ಕಂಪನಿಗಳು ಮತ್ತು ಪ್ರಮುಖ ಸಂಸ್ಥೆಗಳ ಪರವಾಗಿ ಅವರು ನ್ಯಾಯಾಲಯಗಳಲ್ಲಿ ಪ್ರತಿನಿಧಿಸಿದ್ದಾರೆ.

ಸಾಮಾಜಿಕ ಹಾಗೂ ಸಾರ್ವಜನಿಕ ಮಹತ್ವದ ಹಲವು ಪ್ರಕರಣಗಳಲ್ಲಿ ವಾದ ಮಂಡಿಸಿರುವ ಅವರು, ಕರ್ನಾಟಕದ ಹಿಜಾಬ್ ಪ್ರಕರಣದಲ್ಲಿ ಹೈಕೋರ್ಟ್‌ನ ಪೂರ್ಣ ಪೀಠದ ಮುಂದೆ ಕೂಡ ತಮ್ಮ ವಾದವನ್ನು ಮಂಡಿಸಿದ್ದರು. ಕಾನೂನು ವಿಷಯಗಳ ಕುರಿತು ಸಂಶೋಧನಾ ಲೇಖನಗಳು, ಪುಸ್ತಕಗಳು ಹಾಗೂ ವಿವಿಧ ಪ್ರಕಟಣೆಗಳ ಮೂಲಕವೂ ಅವರು ತಮ್ಮ ಕೊಡುಗೆ ನೀಡಿದ್ದಾರೆ.

ಕನ್ನಡ ಭಾಷೆಯ ಬಗ್ಗೆ ವಿಶೇಷ ಅಭಿಮಾನ ಹೊಂದಿರುವ ರಾಘವೇಂದ್ರ ಶ್ರೀವತ್ಸ ಅವರು ಕನ್ನಡ ದಿನಪತ್ರಿಕೆಗಳಲ್ಲಿ ಹಲವು ಲೇಖನಗಳನ್ನು ಬರೆದು ಗಮನ ಸೆಳೆದಿದ್ದಾರೆ. ನ್ಯಾಯಾಂಗ, ಕಾನೂನು ಶಿಕ್ಷಣ ಹಾಗೂ ಹೊಸ ಕಾನೂನು ಸುಧಾರಣೆಗಳ ಕುರಿತು ದೇಶದ ವಿವಿಧ ನ್ಯಾಯಾಂಗ ಅಕಾಡೆಮಿಗಳು ಮತ್ತು ತರಬೇತಿ ಸಂಸ್ಥೆಗಳಲ್ಲಿ ಸಂಪನ್ಮೂಲ ವ್ಯಕ್ತಿಯಾಗಿ ಸೇವೆ ಸಲ್ಲಿಸಿರುವುದು ಅವರ ಮತ್ತೊಂದು ವಿಶೇಷತೆ.

# ವಾದ್ಯ ಕಲಾವಿದ ಕಾಂತರಾಜ್‌ರಿಂದ ಚುನಾವಣೆಗೆ ಸ್ಪರ್ಧಿಸುವ ಇಂಗಿತ

ತಿಪಟೂರು

ರೈತ ಹಾಗೂ ವಾದ್ಯ ಕಲಾವಿದ ಮಣಕೀಕೆರೆಯ ಎಂ.ಕೆ. ಕಾಂತರಾಜ್ ಅವರು ಮುಂಬರುವ 2028ರ ತಿಪಟೂರು ವಿಧಾನಸಭಾ ಕ್ಷೇತ್ರದ ಚುನಾವಣೆಯಲ್ಲಿ ಪಕ್ಷೇತರ ಅಭ್ಯರ್ಥಿಯಾಗಿ ಸ್ಪರ್ಧಿಸುವ ಇಂಗಿತವನ್ನು ವ್ಯಕ್ತಪಡಿಸಿದ್ದಾರೆ.

ತಾಲೂಕಿನ ವಿವಿಧ ಸರ್ಕಾರಿ ಶಾಲೆಗಳ ವಿದ್ಯಾರ್ಥಿಗಳಿಗೆ ಉಚಿತ ಊಟದ ಬಾಕ್ಸ್‌ಗಳನ್ನು ವಿತರಿಸುವ ಕಾರ್ಯಕ್ರಮದ ಅಂಗವಾಗಿ ಹೊನ್ನವಳ್ಳಿ ಹೋಬಳಿಯ ಎಚ್. ಬೈರಾಪುರ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆಯಲ್ಲಿ ಮಾತನಾಡಿದ ಅವರು, ಸಾರ್ವಜನಿಕರು ಹಾಗೂ ಮತದಾರರು ತಮ್ಮನ್ನು ಆಶೀರ್ವದಿಸಿ ಬೆಂಬಲಿಸಬೇಕು ಎಂದು ಮನವಿ ಮಾಡಿದರು.

2012ರಲ್ಲಿ ಬಿಎಸ್‌ಆರ್ ಸ್ವಾಭಿಮಾನಿ ಪಕ್ಷದ ಅಭ್ಯರ್ಥಿಯಾಗಿ ಚುನಾವಣೆಗೆ ಸ್ಪರ್ಧಿಸಿದ್ದ ಅನುಭವವನ್ನು ಸ್ಮರಿಸಿದ ಕಾಂತರಾಜ್, ಈಗಾಗಲೇ ತಾಲೂಕಿನ ವಿವಿಧ ಗ್ರಾಮಗಳಿಗೆ ಭೇಟಿ ನೀಡಿ ಜನರ ಸಮಸ್ಯೆಗಳನ್ನು ಆಲಿಸುತ್ತಿದ್ದೇನೆ.

ನನ್ನ ಕೈಲಾದ ಮಟ್ಟಿಗೆ ಸಾಮಾಜಿಕ ಸೇವಾ ಕಾರ್ಯಗಳನ್ನು ನಡೆಸುತ್ತಾ ಮತದಾರರ




ವಿಶ್ವಾಸ ಗಳಿಸಲು ಪ್ರಯತ್ನಿಸುತ್ತಿದ್ದೇನೆ ಎಂದು ಹೇಳಿದರು.

ತಾವು ಮೂಲತಃ ರೈತ ಕುಟುಂಬದಿಂದ ಬಂದವರಾಗಿದ್ದು, ವಾದ್ಯ ಕಲಾವಿದರಾಗಿಯೂ ಸೇವೆ ಸಲ್ಲಿಸುತ್ತಿದ್ದೇನೆ. ಜನಸಾಮಾನ್ಯರ ಸಮಸ್ಯೆಗಳಿಗೆ ಸ್ಪಂದಿಸುವ, ಭ್ರಷ್ಟಾಚಾರ ಮುಕ್ತ ಆಡಳಿತ ನೀಡುವ ಹಾಗೂ ಸರ್ಕಾರಿ ಕಚೇರಿಗಳಲ್ಲಿ ಲಂಚದ ಹಾವಳಿಯನ್ನು ತಡೆಯುವ ಉದ್ದೇಶದಿಂದ ರಾಜಕೀಯ ಪ್ರವೇಶಿಸಲು ನಿರ್ಧರಿಸಿದ್ದೇನೆ ಎಂದು ತಿಳಿಸಿದರು.

ರೈತರ ಸಮಸ್ಯೆಗಳಿಗೆ ಆದ್ಯತೆ ನೀಡುವುದು, ಸಾಮಾಜಿಕ ಅಭಿವೃದ್ಧಿ, ಶಿಕ್ಷಣ ಹಾಗೂ ಕ್ರೀಡಾ ಕ್ಷೇತ್ರಗಳ ಪ್ರಗತಿಗೆ ವಿಶೇಷ ಒತ್ತು ನೀಡುವುದು ತಮ್ಮ ಪ್ರಮುಖ ಗುರಿಗಳಾಗಿವೆ. ಜನರು ತಮ್ಮ ಮೇಲೆ ವಿಶ್ವಾಸವಿಟ್ಟು ಆಶೀರ್ವದಿಸಿದರೆ ಕ್ಷೇತ್ರದ ಸಮಗ್ರ ಅಭಿವೃದ್ಧಿಗೆ ಶ್ರಮಿಸುವುದಾಗಿ ಕಾಂತರಾಜ್ ಹೇಳಿದರು.

ಈ ಸಂದರ್ಭದಲ್ಲಿ ಶಾಲಾ ವಿದ್ಯಾರ್ಥಿಗಳಿಗೆ ಉಚಿತ ಊಟದ ಬಾಕ್ಸ್‌ಗಳನ್ನು ವಿತರಿಸಿ ಶುಭ ಹಾರೈಸಿದರು.

# ರಷ್ಯಾ ಮೇಲೆ ಉಕ್ರೇನ್ ದಾಳಿ

ಮಾಸ್ಕೋ

ಯುದ್ಧವನ್ನು ಕೊನೆಗೊಳಿಸಲು ವೊಲೊಡಿಮಿರ್ ಝೆಲೆನ್ಸ್ಕಿ, ಟ್ರಂಪ್ ಬೆಂಬಲವನ್ನು ಕೋರುತ್ತಿದ್ದಂತೆ ಮಾಸ್ಕೋ ಸಂಸ್ಕರಣಾಗಾರದ ಮೇಲೆ ಉಕ್ರೇನ್ ದಾಳಿ ನಡೆಸಿದೆ. ಈ ವಾರ ಉಕ್ರೇನಿಯನ್ ಡ್ರೋನ್‌ಗಳು ಮಾಸ್ಕೋ ತೈಲ ಸಂಸ್ಕರಣಾಗಾರದ ಮೇಲೆ ಎರಡನೇ ಬಾರಿಗೆ ದಾಳಿ ಮಾಡಿವೆ.

ರಷ್ಯಾದ ಕೀವ್ ಮೇಲೆ ಕ್ಷಿಪಣಿಗಳನ್ನು ಹಾರಿಸಿದೆ. ಅಧ್ಯಕ್ಷ ವೊಲೊಡಿಮಿರ್ ಝೆಲೆನ್ಸ್ಕಿ ಯುದ್ಧವನ್ನು ಕೊನೆಗೊಳಿಸಲು ಒಪ್ಪಂದಕ್ಕಾಗಿ ಯುನೈಟೆಡ್ ಸ್ಟೇಟ್ಸ್ ಮತ್ತು ಯುರೋಪ್‌ನಿಂದ ಬೆಂಬಲವನ್ನು ಕೋರುತ್ತಿರುವ ಹೊತ್ತಲ್ಲೇ ಈ ದಾಳಿಯಾಗಿದೆ. ರಷ್ಯಾದ ರಕ್ಷಣಾ ಸಚಿವಾಲಯ ಗುರುವಾರ ತನ್ನ ವಾಯು ರಕ್ಷಣಾ ಪಡೆಗಳು ಹಲವಾರು ಪ್ರದೇಶಗಳಲ್ಲಿ ರಾತ್ರೋರಾತ್ರಿ 555 ಉಕ್ರೇನಿಯನ್ ಡ್ರೋನ್‌ಗಳನ್ನು ಹೊಡೆದುರುಳಿಸಿದೆ ಎಂದು ಹೇಳಿದೆ. ರಷ್ಯಾದ ರಾಜಧಾನಿಯನ್ನು ಸಮೀಪಿಸುತ್ತಿದ್ದ ಸುಮಾರು 200 ಡ್ರೋನ್‌ಗಳನ್ನು ತಡೆಹಿಡಿಯಲಾಗಿದೆ ಎಂದಿದೆ.

# ಬಸ್‌ಪಾಸ್ ದರ ಏರಿಕೆಗೆ ಸಾರ್ವಜನಿಕರ ಆಕ್ರೋಶ

ವಿಜಯಪುರ

ಎಡಗೈಯಲ್ಲಿ ಕೊಟ್ಟ ದಾನ ಬಲಗೈಗೆ ಗೊತ್ತಾಗಬಾರದು ಎಂಬುದು ಹಿರಿಯರ ಆಶಯ ನುಡಿ. ಆದರೆ ಇಂದಿನ ಸಾರಿಗೆ ಇಲಾಖೆ ಹಾಗೂ ಕಾಂಗ್ರೆಸ್ ಸರ್ಕಾರ ಈ ಗಾದೆಯನ್ನೇ ಉಲ್ಟಾ ಮಾಡಿದೆ. ಎಡಗೈಯಲ್ಲಿ ಕೊಡುವುದನ್ನು ಜಗತ್ತಿಗೆಲ್ಲಾ ಡಂಗುರ ಹೊಡೆದು ಸಾರುವ ಸರ್ಕಾರ, ಬಲಗೈಯಲ್ಲಿ ಸಾರ್ವಜನಿಕರ ಜೇಬಿಗೆ ಕತ್ತರಿ ಹಾಕುವುದನ್ನು ಮಾತ್ರ ಸದ್ದಿಲ್ಲದೆ ಮಾಡುತ್ತಿದೆ ಎಂದು ವಿಜಯಪುರ ಹಾಗೂ ದೇವನಹಳ್ಳಿ ಭಾಗದ ನಾಗರಿಕರು ತೀವ್ರ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ವಿದ್ಯಾರ್ಥಿಗಳಿಗೆ ಬಸ್ಸುಗಳಲ್ಲಿ ಉಚಿತ ಸಂಚಾರದ ಭರವಸೆ ನೀಡಿ, ಅಂತರರಾಷ್ಟ್ರೀಯ ಮಟ್ಟದಲ್ಲಿ ಪ್ರಚಾರ ಗಿಟ್ಟಿಸಿಕೊಂಡ ಬೆನ್ನಲ್ಲೇ, ಯಾರ ಗಮನಕ್ಕೂ ಬಾರದಂತೆ ಜೂನ್ 2ನೇ ತಾರೀಕಿನಿಂದಲೇ ಜಾರಿಗೆ ಬರುವಂತೆ ವಿಜಯಪುರದಿಂದ ನೀಡಲಾಗುತ್ತಿದ್ದ ಬಿ.ಎಂ.ಟಿ.ಸಿ. ಬಸ್ಗಳ ದಿನವಹಿ ಪಾಸ್ ನಿಲ್ಲಿಸಿ, ಮಾಸಿಕ ಪಾಸ್ಗಳ ದರವನ್ನು ಭಾರಿ ಪ್ರಮಾಣದಲ್ಲಿ ಏರಿಕೆ ಮಾಡಿರುವುದು ಸಾರ್ವಜನಿಕರ ಕೆಂಗಣ್ಣಿಗೆ ಗುರಿಯಾಗಿದೆ.

ಒಂದೆಡೆ ವಿದ್ಯಾರ್ಥಿಗಳಿಗೆ ಉಚಿತ ಪ್ರಯಾಣ ಎಂದು ಆಸೆ ತೋರಿಸಿ, ಮತ್ತೊಂದೆಡೆ ಸಾರ್ವಜನಿಕರ ಬಸ್ ಪಾಸ್ ದರಗಳನ್ನು




ಕದ್ದುಮುಚ್ಚಿ ಏರಿಸುವುದು ಯಾವ ನ್ಯಾಯ? ಗ್ಯಾರಂಟಿ ಹೆಸರಿನಲ್ಲಿ ಮಹಿಳೆಯರಿಗೆ ರೂ2,000 ನೀಡುವುದನ್ನು ದೊಡ್ಡ ದೊಡ್ಡ ಜಾಹೀರಾತುಗಳ ಮೂಲಕ ಪ್ರಚಾರ ಮಾಡುವ ಸರ್ಕಾರ, ಕೇವಲ ರೂ20 ಇದ್ದ ಸ್ಟಾಂಪ್ ಪೇಪರ್ ಶುಲ್ಕವನ್ನು 100 ರೂ ಗೆ ಏರಿಸಿದೆ. ಮದ್ಯದ ದರ, ನೋಂದಣಿ ಶುಲ್ಕ, ಕಂದಾಯ ಹೀಗೆ ಸರಕಾರ ಕೈಹಾಕದ ಮತ್ತು ಬೆಲೆ ಏರಿಸದ ಕ್ಷೇತ್ರವೇ ಇಲ್ಲದಂತಾಗಿದೆ ಎಂದು ಬಳುವನಹಳ್ಳಿಯ ರೈತ ಕೃಷ್ಣಪ್ಪ ಸರಕಾರದ ವಿರುದ್ಧ ಹರಿಹಾಯ್ದರು.

ಪಟ್ಟಣದಿಂದ ಬಿಎಂಟಿಸಿ ಎಕ್ಸ್ಪ್ರೆಸ್ ಬಸ್ಸುಗಳ ಸೇವೆ ಪ್ರಾರಂಭವಾಗಿ,ಕೇವಲ 20 ದಿನಗಳಾಗಿದ್ದು, ಇದರ ಸೌಲಭ್ಯವನ್ನು ಪಡೆಯುವಷ್ಟರಲ್ಲೇ ವಿಜಯಪುರ ವಲಯದಿಂದ ಬಿ.ಎಂ.ಟಿ.ಸಿ ದಿನವಹಿ ಪಾಸ್ಗಳ ನೀಡಿಕೆಯನ್ನು ರದ್ದುಗೊಳಿಸಿರುವುದು, ಹೊರೆಯಾಗಿದ್ದು, 1,200 ಇದ್ದ ಸಾಮಾನ್ಯ ಮಾಸಿಕ ಪಾಸ್ ದರವನ್ನು, ಇದೀಗ 1,500 ಗೆ ಏರಿಕೆ ಮಾಡಲಾಗಿದೆ.

ಜೂನ್ 2ರ ಒಳಗೆ ಪಾಸ್ ಪಡೆದವರಿಗೆ ಹಳೇ ದರ ಅನ್ವಯವಿದ್ದರೆ, ಇನ್ನು ಮುಂದೆ ಹೊಸ ದರವೇ ಅನ್ವಯವಾಗುತ್ತದೆ.

# ಬಿಜೆಪಿ ನಾಯಕರು ದಿಲ್ಲಿಗೆ

ಚಿಕ್ಕಬಳ್ಳಾಪುರ

11 ಎನ್‌ಡಿಎ ಶಾಸಕರು ಅಡ್ಡಮತ ದಾನವನ್ನು ಬಿಜೆಪಿ ಹೈಕಮಾಂಡ್ ಗಂಭೀರವಾಗಿ ಪರಿಗಣಿಸಿದ್ದು, ರಾಜ್ಯ ನಾಯಕರಿಗೆ ದೆಹಲಿಗೆ ಬರುವಂತೆ ಬುಲಾವ್ ನೀಡಿದೆ. ಅಡ್ಡಮತದಾನದಿಂದ ಅಸಮಾಧಾನಗೊಂಡಿರುವ ಹೈಕಮಾಂಡ್ ಈ ಬಗ್ಗೆ ಚರ್ಚಿಸಲು ರಾಜ್ಯಾಧ್ಯಕ್ಷ ವಿಜಯೇಂದ್ರ ವಿಪಕ್ಷ ನಾಯಕ ಆರ್ ಅಶೋಕ್ ಹಾಗೂ ರಾಜ್ಯ ಬಿಜೆಪಿ ಉಸ್ತುವಾರಿ ರಾಧಾಮೋಹನ್ ದಾಸ್ ಅವರಿಗೆ ದೆಹಲಿಗೆ ಬರುವಂತೆ ಬುಲಾವ್ ಕೊಟ್ಟಿದೆ.

ಕೇಂದ್ರ ಸಚಿವ ಕುಮಾರಸ್ವಾಮಿ ತಮ್ಮ ಪಕ್ಷದ ನಾಲ್ವರು ಶಾಸಕರು ಅಡ್ಡಮತದಾನ ಮಾಡಿರೋದಾಗಿ ಹೇಳ್ತಿದ್ದಾರೆ. ಆದ್ರೆ ಬಿಜೆಪಿ ರಾಜ್ಯಾಧ್ಯಕ್ಷ ವಿಜಯೇಂದ್ರ ದಳ ಪಡೆಯ ಆರೇಳು ಶಾಸಕರು ಕ್ರಾಸ್ ವೋಟಿಂಗ್ ಮಾಡಿದ್ದಾರೆ ಅಂತಿದ್ದಾರೆ. ಹೀಗಾಗಿ ಮೈತ್ರಿ ನಾಯಕರ ನಡುವೆ ಅಂಕಿ ಸಂಖ್ಯೆಯ ಗೊಂದಲ ಇರುವುದು ಇಲ್ಲಿ ಗೆದ್ದು ಕಾಣುತ್ತಿದೆ. ರಾಜ್ಯ ರಾಜಕಾರಣದಲ್ಲಿ ಬದಲಾಗುತ್ತಿರುವ ರಾಜಕೀಯ ಸಮೀಕರಣಗಳ ಪ್ರಭಾವ ಅಡ್ಡಮತದಾನದ ಮೇಲೆ ಬಿದ್ದಿದೆ ಅನ್ನೋದು ರಾಜಕೀಯ ವಿಶ್ಲೇಷಣೆ. ಕಾಂಗ್ರೆಸ್ ಬೆಂಬಲಿಸಿದವರಿಗೆ ಮುಂದಿನ ಚುನಾವಣೆಗೆ ಟಿಕೆಟ್, ಬಿಜೆಪಿ–ಜೆಡಿಎಸ್ ಶಾಸಕರ ಅಭಿವೃದ್ಧಿಗೆ ಅನುದಾನದ ಭರವಸೆ ಕೊಟ್ಟಿರೋ ಮಾತು ರಾಜಕೀಯ ಪಡಸಾಲೆಯಲ್ಲಿ ಹರಿದಾಡ್ತಿದೆ.ಕೇಸರಿ–ದಳ ಶಾಸಕರಿಗೆ ಸಕಲ ರೀತಿಯಲ್ಲಿ ಸಹಾಯ ಹಸ್ತ ಭರವಸೆ ಕಾರಣಕ್ಕೆ ಕ್ರಾಸ್ ವೋಟಿಂಗ್ ಆಗಿರೋದಾಗಿ ತಿಳಿದುಬಂದಿದೆ. ರಾಜ್ಯ ಕಾಂಗ್ರೆಸ್‌ನೊಳಗೆ ಆತಂರಿಕ ಕಲಹ ಅಂತಿದ್ದ ವಿಪಕ್ಷಗಳಲ್ಲೇ ದೊಡ್ಡ ಬಿರುಕು ಇರೋದು ಬಟಾಬಯಲಾಗಿದೆ. ಮೈತ್ರಿಯೊಳಗಿನ ಅಸಮಾಧಾನ, ಗೊಂದಲ ಹಾಗೂ ಪಕ್ಷದ ಮೇಲಿನ ಬೇಸರದ ಬಗ್ಗೆ ಸದ್ಯ ರಾಜಕೀಯ ವಿಶ್ಲೇಷಣೆ ನಡೀತಿದೆ.

# ಮಾವು ಬೆಳೆಗಾರರ ಸಂಕಷ್ಟಕ್ಕೆ ಕೇಂದ್ರದ ಮಧ್ಯಪ್ರವೇಶ ಕೋರಿದ ಸಂಸದ ಡಾ.ಕೆ.ಸುಧಾಕರ್

ಚಿಕ್ಕಬಳ್ಳಾಪುರ

ಸೇರಿದಂತೆ ರಾಜ್ಯದ ಹಲವು ಭಾಗಗಳಲ್ಲಿ ಮಾವಿನ ಬೆಲೆ ತೀವ್ರ ಕುಸಿತ ಕಂಡಿರುವ ಹಿನ್ನೆಲೆಯಲ್ಲಿ ರೈತರ ಪರವಾಗಿ ಧ್ವನಿಯಾಗಿರುವ ಡಾ. ಕೆ. ಸುಧಾಕರ್ ಅವರು ಕೇಂದ್ರ ಕೃಷಿ ಮತ್ತು ರೈತರ ಕಲ್ಯಾಣ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಅವರಿಗೆ ಪತ್ರ ಬರೆದು ತಕ್ಷಣ ಮಧ್ಯಪ್ರವೇಶಿಸುವಂತೆ ಮನವಿ ಮಾಡಿದ್ದಾರೆ.

ಈ ವರ್ಷ ಉತ್ತಮ ಇಳುವರಿ ಬಂದಿದ್ದರೂ ಸಮರ್ಪಕ ಖರೀದಿ ವ್ಯವಸ್ಥೆ, ಸಂಸ್ಕರಣಾ ಸೌಲಭ್ಯ ಮತ್ತು ಮಾರುಕಟ್ಟೆ ಬೆಂಬಲದ ಕೊರತೆಯಿಂದ ಮಾವಿನ ಬೆಲೆ ಕೆ.ಜಿಗೆ ಕೇವಲ 4 ರಿಂದ 6 ರೂಪಾಯಿವರೆಗೆ ಕುಸಿದಿದೆ. ಇದರಿಂದ ಸಾವಿರಾರು ರೈತರು ತಮ್ಮ ಉತ್ಪಾದನಾ ವೆಚ್ಚ, ಕೊಯ್ಲು ಮತ್ತು ಸಾರಿಗೆ ಖರ್ಚನ್ನೂ ವಾಪಸ್ ಪಡೆಯಲಾಗದ ಸ್ಥಿತಿಗೆ ತಲುಪಿದ್ದಾರೆ ಎಂದು ಅವರು ಆತಂಕ ವ್ಯಕ್ತಪಡಿಸಿದ್ದಾರೆ.

ಬೆಲೆ ಸ್ಥಿರಗೊಳಿಸಲು ಹಾಗೂ ರೈತರನ್ನು ನಷ್ಟದಿಂದ ರಕ್ಷಿಸಲು ರಾಷ್ಟ್ರೀಯ ಕೃಷಿ ಸಹಕಾರಿ ಮಾರುಕಟ್ಟೆ ಒಕ್ಕೂಟ ಮತ್ತು ಇತರೆ ಸಂಸ್ಥೆಗಳ ಮೂಲಕ ತಕ್ಷಣ ಖರೀದಿ ಪ್ರಕ್ರಿಯೆ ಆರಂಭಿಸಬೇಕು ಎಂದು ಅವರು ಒತ್ತಾಯಿಸಿದ್ದಾರೆ. ವಿಶೇಷವಾಗಿ ಚಿಕ್ಕಬಳ್ಳಾಪುರ, ಕೋಲಾರ, ಬೆಂಗಳೂರು ಗ್ರಾಮಾಂತರ ಮತ್ತು ರಾಮನಗರ ಜಿಲ್ಲೆಗಳಲ್ಲಿ ವಿಶೇಷ ಖರೀದಿ ವ್ಯವಸ್ಥೆ ಜಾರಿಗೊಳಿಸುವ ಅಗತ್ಯವಿದೆ ಎಂದು ತಿಳಿಸಿದ್ದಾರೆ.



ಹೆಚ್ಚುವರಿ ಮಾವನ್ನು ಆಹಾರ ಸಂಸ್ಕರಣಾ ಘಟಕಗಳು ಮತ್ತು ರೈತ ಉತ್ಪಾದಕ ಸಂಸ್ಥೆಗಳ ಮೂಲಕ ಮೌಲ್ಯವರ್ಧನೆ ಮಾಡಿ ಬೃಹತ್ ಪ್ರಮಾಣದಲ್ಲಿ ಸಂಸ್ಕರಣೆ ನಡೆಸಬೇಕು.

ಜೊತೆಗೆ ಅಂತರರಾಜ್ಯ ಹಾಗೂ ವಿದೇಶಿ ಮಾರುಕಟ್ಟೆಗಳಿಗೆ ರಫ್ತು ಹೆಚ್ಚಿಸಲು ಸಾರಿಗೆ ಮತ್ತು ಮಾರುಕಟ್ಟೆ ಸಂಪರ್ಕದ ಅಡಚಣೆಗಳನ್ನು ನಿವಾರಿಸಬೇಕು ಎಂದು ಅವರು ಮನವಿ ಮಾಡಿದ್ದಾರೆ.

ಮಾವು ಬೆಳೆಗಾರರು ಅನುಭವಿಸಿರುವ ನಷ್ಟದ ತಕ್ಷಣದ ಮೌಲ್ಯಮಾಪನ ನಡೆಸಿ, ಕೇಂದ್ರದ ವಿವಿಧ ಯೋಜನೆಗಳಡಿ ಪರಿಹಾರ ಒದಗಿಸಬೇಕು. ಕೃಷಿ ಮತ್ತು ಆಹಾರ ಸಂಸ್ಕರಣಾ ಸಚಿವಾಲಯದ ಅಧಿಕಾರಿಗಳ ಜಂಟಿ ತಂಡವನ್ನು ಕರ್ನಾಟಕಕ್ಕೆ ಕಳುಹಿಸಿ ಪರಿಸ್ಥಿತಿಯನ್ನು ಪರಿಶೀಲಿಸಿ ಸೂಕ್ತ ಪರಿಹಾರ ಕ್ರಮಗಳನ್ನು ಕೈಗೊಳ್ಳಬೇಕು ಎಂದು ಪತ್ರದಲ್ಲಿ ಕೋರಿದ್ದಾರೆ.

ಕರ್ನಾಟಕದ ಬಯಲುಸೀಮೆ ಭಾಗದ ರೈತರಿಗೆ ಮಾವು ಕೇವಲ ಒಂದು ಬೆಳೆ ಅಲ್ಲ, ಅದು ಗ್ರಾಮೀಣ ಆರ್ಥಿಕತೆಯ ಜೀವನಾಡಿಯಾಗಿದೆ. ರೈತರು ತಮ್ಮ ಶ್ರಮದ ಫಲವನ್ನು ಅತ್ಯಂತ ಕಡಿಮೆ ಬೆಲೆಗೆ ಮಾರಾಟ ಮಾಡುವ ಪರಿಸ್ಥಿತಿ ಬರಬಾರದು ಎಂದು ಒತ್ತಿಹೇಳಿರುವ ಡಾ. ಸುಧಾಕರ್, ರೈತರ ಹಿತಾಸಕ್ತಿಗಾಗಿ ತಾವು ಸದಾ ಅವರೊಂದಿಗಿರುವುದಾಗಿ ತಿಳಿಸಿದ್ದಾರೆ.

21/06/2026

ಭಾರತ ಸಾರಥಿ

BHARATHA SARATHI KANNADA DAILY NEWS PAPER

ಬೆಂಗಳೂರು | ಬೆಂ.ಗ್ರಾಮಾಂತರ | ತುಮಕೂರು | ಮೈಸೂರು | ಮಂಡ್ಯ | ರಾಮನಗರ | ಕೋಲಾರ | ಚಿಕ್ಕಬಳ್ಳಾಪುರ | ಚಿತ್ರದುರ್ಗ | ದಾವಣಗೆರೆ | ಶಿವಮೊಗ್ಗ | ಮಂಗಳೂರು | ಉಡುಪಿ | ಹುಬ್ಬಳ್ಳಿ | ಮಡಿಕೇರಿ | ಚಿಕ್ಕಮಗಳೂರು | ಹಾಸನ | ಬಳ್ಳಾರಿ

ಇ-ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

# ಕುಡಿಯುವ ನೀರಿನ ಕಾಮಗಾರಿ ವಿಳಂಬಕ್ಕೆ ಕ್ರಮದ ಎಚ್ಚರಿಕೆ

ಬೆಂಗಳೂರು

ನಗರ ಪ್ರದೇಶಗಳಲ್ಲಿ ನಡೆಯುತ್ತಿರುವ ಕುಡಿಯುವ ನೀರಿನ ಯೋಜನೆಗಳ ಕಾಮಗಾರಿಗಳನ್ನು ನಿಗದಿತ ಅವಧಿಯೊಳಗೆ ಪೂರ್ಣಗೊಳಿಸದಿದ್ದರೆ ಸಂಬಂಧಪಟ್ಟವರ ವಿರುದ್ಧ ಕ್ರಮ ಕೈಗೊಳ್ಳಲಾಗುವುದು ಎಂದು ನಗರಾಭಿವೃದ್ಧಿ ಸಚಿವ ಡಾ. ಯತೀಂದ್ರ ಸಿದ್ದರಾಮಯ್ಯ ಎಚ್ಚರಿಕೆ ನೀಡಿದ್ದಾರೆ.

ಶುಕ್ರವಾರ ನಡೆದ ಸಭೆಯಲ್ಲಿ ಬೆಳಗಾವಿ, ಕಲಬುರಗಿ ಹಾಗೂ ಹುಬ್ಬಳ್ಳಿ-ಧಾರವಾಡ ನಗರಗಳಲ್ಲಿ ವಿಶ್ವಬ್ಯಾಂಕ್ ನೆರವಿನೊಂದಿಗೆ ಜಾರಿಗೊಳ್ಳುತ್ತಿರುವ ಬೃಹತ್ ಕುಡಿಯುವ ನೀರಿನ ಯೋಜನೆಗಳ ಪ್ರಗತಿಯನ್ನು ಅವರು ಪರಿಶೀಲಿಸಿದರು. ಈ ಯೋಜನೆಗಳನ್ನು ಐ&ಖ ಸಂಸ್ಥೆ ಅನುಷ್ಠಾನಗೊಳಿಸುತ್ತಿದ್ದು, ಕಾಮಗಾರಿಗಳ ಪ್ರಗತಿ ನಿರೀಕ್ಷಿತ ಮಟ್ಟದಲ್ಲಿ ಇಲ್ಲದಿರುವ ಬಗ್ಗೆ ಸಚಿವರು ಅಸಮಾಧಾನ ವ್ಯಕ್ತಪಡಿಸಿದರು.

ಜನರಿಗೆ ಶುದ್ಧ ಕುಡಿಯುವ ನೀರು ಒದಗಿಸುವ ಮಹತ್ವದ ಯೋಜನೆಗಳಲ್ಲಿ ಯಾವುದೇ ವಿಳಂಬ ಸಹಿಸುವುದಿಲ್ಲ ಎಂದು ಸ್ಪಷ್ಟಪಡಿಸಿದ ಸಚಿವರು, ನಿಗದಿತ ಕಾಲಮಿತಿಯೊಳಗೆ ಕಾಮಗಾರಿಗಳನ್ನು ಪೂರ್ಣಗೊಳಿಸುವಂತೆ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು.

ಸಭೆಯಲ್ಲಿ ಯೋಜನಾ ಮುಖ್ಯಸ್ಥ ವೆಂಕಟೇಶನ್ ಸೇರಿದಂತೆ ಸಂಬಂಧಿತ ಅಧಿಕಾರಿಗಳು ಉಪಸ್ಥಿತರಿದ್ದರು.

## ಕುಡಿಯುವ ನೀರಿಗೂ ಅಭಾವ...?

ಬೆಂಗಳೂರು

ಕಾವೇರಿ ನದಿ ನೀರಿನ ವಿಚಾರವಾಗಿ ಕರ್ನಾಟಕ ಮತ್ತು ತಮಿಳುನಾಡು ನಡುವಿನ ವಿವಾದಕ್ಕೆ ಬಹುದೊಡ್ಡ ಇತಿಹಾಸವೇ ಇದೆ. ನೀರು ಹಂಚಿಕೆ ಸೇರಿ ಮೇಕೆದಾಟು ಯೋಜನೆಗೆ ನೆರೆ ರಾಜ್ಯದಿಂದ ಕ್ಯಾತೆ ನಡೆದುಕೊಂಡೇ ಬಂದಿದ್ದು, ಈ ನಡುವೆ ಮಳೆಯ ತೀವ್ರ ಅಭಾವದ ಕಾರಣ ಕಾವೇರಿ ನದಿ ಒಡಲು ಸಂಪೂರ್ಣ ಬರಿದಾಗಿರೋದು ಕರ್ನಾಟಕಕ್ಕೆ ಟೆನ್ಷನ್ ಹೆಚ್ಚಿಸಿದೆ. ಪರಿಸ್ಥಿತಿ ಹೀಗೆ ಮುಂದುವರಿದರೆ ತಮಿಳುನಾಡಿಗೆ ನೀರು ನೀಡೋದು ಹಾಗಿರಲಿ ಮೈಸೂರು, ಬೆಂಗಳೂರಿನಲ್ಲಿಯೇ ಕುಡಿಯುವ ನೀರಿಗೂ ಪರದಾಟ ನಡೆಸಬೇಕಾದ ಸ್ಥಿತಿ ಬರಬಹುದೆಂಬ ಆತಂಕ ಶುರುವಾಗಿದೆ.

ಜೂನ್ ತಿಂಗಳಲ್ಲಿ ಧಾರಾಕಾರ ಮಳೆ ನಿರೀಕ್ಷಿಸಲಾಗಿದ್ದ ಕೊಡಗು ಜಿಲ್ಲೆಯ ಕಾವೇರಿ ನದಿ ಪಾತ್ರದಲ್ಲಿ, ನದಿ ಹರಿವು ಗಣನೀಯವಾಗಿ ಕುಸಿದಿದೆ.

ಕೊಡಗು-ಮೈಸೂರು ಗಡಿಯಲ್ಲಿರುವ ಕೊಪ್ಪ ಸೇತುವೆ ಬಳಿ ಕಾವೇರಿ ನದಿಯ ಸ್ಥಿತಿಗತಿ ಪರಿಶೀಲಿಸಿದಾಗ, ಸಾಮಾನ್ಯವಾಗಿ 10-15 ಅಡಿ ಹರಿಯಬೇಕಿದ್ದ ನದಿ ಈಗ ಕೇವಲ ಅರ್ಧದಿಂದ ಒಂದು ಅಡಿ ನೀರಿಗೆ ಸೀಮಿತವಾಗಿದೆ.

## ಹೊಯ್ಸಳ ಮತ್ತು ಕೆಳದಿ ಚೆನ್ನಮ್ಮ ಪ್ರಶಸ್ತಿಗೆ ಮಕ್ಕಳಿಂದ ಅರ್ಜಿ ಆಹ್ವಾನ

ರಾಮನಗರ

2026-27ನೇ ಸಾಲಿನಲ್ಲಿ 5 ರಿಂದ 18 ವರ್ಷ ವಯೋಮಿತಿ ಒಳಗಿನ ಮಕ್ಕಳಿಗೆ ನಾವಿನ್ಯತೆ, ತಾರ್ಕಿಕ ಸಾಧನೆಗಳು, ಕ್ರೀಡೆ, ಕಲೆ, ಸಾಂಸ್ಕೃತಿಕ ಮತ್ತು ಸಂಗೀತ ಕ್ಷೇತ್ರಗಳಲ್ಲಿ ಅಸಾಧಾರಣಾ ಪ್ರತಿಭೆ ಇರುವ ಮಕ್ಕಳಿಗೆ ಹೋಯ್ಸಳ ಮತ್ತು ಕೆಳದಿ ಚೆನ್ನಮ್ಮ ಪ್ರಶಸ್ತಿ ನೀಡಲು ಬೆಂಗಳೂರು ದಕ್ಷಿಣ ಜಿಲ್ಲೆಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಿಂದ ಅರ್ಜಿ ಆಹ್ವಾನಿಸಲಾಗಿದೆ.

ಜಿಲ್ಲಾ ಮಟ್ಟದಲ್ಲಿ ಆಯ್ಕೆಯಾದ ಮಕ್ಕಳಿಗೆ 10 ಸಾವಿರ ರೂ. ಗಳನ್ನು ಮಕ್ಕಳ ಬ್ಯಾಂಕ್ ಖಾತೆಗೆ ನೇರ ನಗದು ಬಹುಮಾನ ಹಾಗೂ ಪ್ರಶಸ್ತಿ ಪತ್ರವನ್ನು ನೀಡಲಾಗುವುದು. ಈ ಕ್ಷೇತ್ರಗಳಲ್ಲಿ ಅತ್ಯುತ್ತಮ ಸೇವೆ ಸಲ್ಲಿಸಿರುವ 8 ಮಕ್ಕಳಿಗೆ ಪ್ರಶಸ್ತಿ ನೀಡಲಾಗುವುದು.

ಅರ್ಜಿ ಹಾಗೂ ನಿಗಧಿತ ದಾಖಲೆಗಳನ್ನು ದ್ವಿಪ್ರತಿಯಲ್ಲಿ 2026ರ ಜುಲೈ 18 ರೊಳಗೆ ಉಪನಿರ್ದೇಶಕರ ಕಚೇರಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಕೊಠಡಿ ಸಂಖ್ಯೆ: 203, ಎರಡನೇ ಮಹಡಿ, ಜಿಲ್ಲಾ ಪಂಚಾಯತ್ ಭವನ, ಬೆಂಗಳೂರು ದಕ್ಷಿಣ ಜಿಲ್ಲೆ. ಈ ವಿಳಾಸಕ್ಕೆ ಸಲ್ಲಿಸಬೇಕು.

ಹೆಚ್ಚಿನ ಮಾಹಿತಿಗೆ ದೂ.ಸಂಖ್ಯೆ: 080-29524996, 8147208605, 9980031129 ಅಥವಾ 7760892291 ಅನ್ನು ಸಂಪರ್ಕಿಸುವಂತೆ ಬೆಂಗಳೂರು ದಕ್ಷಿಣ ಜಿಲ್ಲೆಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವಿದ್ಯುತ್ ವ್ಯತ್ಯಯ

ರಾಮನಗರ

66 ಕೆವಿ ಅಕ್ಕೂರುಮೊಳೆ ವಿದ್ಯುತ್ ಉಪಕೇಂದ್ರದ ಮಾರ್ಗದಲ್ಲಿ ತ್ರೈಮಾಸಿಕ ನಿರ್ವಹಣಾ ಕಾಮಗಾರಿಯನ್ನು ಹಮ್ಮಿಕೊಳ್ಳಲಾಗಿದೆ. ಆದ ಕಾರಣ ಅಕ್ಕೂರುಮೊಳೆ, ಸಂತೆಮೊಗೇನಹಳ್ಳಿ, ಅಕ್ಕೂರು, ಗರಕಹಳ್ಳಿ, ಸುಳ್ಳೇರಿ, ಮಳೂರುಪಟ್ಟಣ, ಚಕ್ಕೆರೆ, ಚಕ್ಕಲೂರು, ಕೃಷ್ಣಾಪುರ, ತೂಬಿನಕೆರೆ, ಎ.ವಿ.ಹಳ್ಳಿ, ಕೊಂಡಾಪುರ, ಸೋಗಾಲ, ಬಾಣಗಹಳ್ಳಿ, ಮಾದಾಪುರ ಹಾಗೂ ಸುತ್ತಮುತ್ತಲಿನ ಪ್ರದೇಶಗಳಿಗೆ ಜೂ. 20ರಂದು ಬೆಳಗ್ಗೆ 10 ರಿಂದ ಮಧ್ಯಾಹ್ನ 3 ಗಂಟೆಯವರೆಗೆ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗಲಿದೆ ಎಂದು ಬೆಸ್ಕಾಂನ ರಾಮನಗರ ವಿಭಾಗದ ಕಾರ್ಯನಿರ್ವಾಹಕ ಇಂಜಿನಿಯರ್ (ವಿ) ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

66/11 ಕೆವಿ ಕೂಟಗಲ್ ವಿದ್ಯುತ್ ಉಪಕೇಂದ್ರದಲ್ಲಿ ತ್ರೈಮಾಸಿಕ ನಿರ್ವಹಣಾ ಕಾಮಗಾರಿಯನ್ನು ಹಮ್ಮಿಕೊಳ್ಳಲಾಗಿದೆ. ಆದ ಕಾರಣ ಕೂಟಗಲ್, ಬಿಳಗುಂಬ, ಯರೇಹಳ್ಳಿ, ಶ್ಯಾನುಭೋಗನಹಳ್ಳಿ, ದನಾಯಕನಪುರ, ಜೈಪುರ, ಕೂನ್‌ಮುದ್ದನಹಳ್ಳಿ, ಅಂಕನಹಳ್ಳಿ ಹಾಗೂ ಸುತ್ತಮುತ್ತಲಿನ ಪ್ರದೇಶಗಳಿಗೆ ಜೂ. 20ರಂದು ಬೆಳಗ್ಗೆ 10 ರಿಂದ ಮಧ್ಯಾಹ್ನ 4 ಗಂಟೆಯವರೆಗೆ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗಲಿದೆ ಎಂದು ಬೆಸ್ಕಾಂನ ರಾಮನಗರ ವಿಭಾಗದ ಕಾರ್ಯನಿರ್ವಾಹಕ ಇಂಜಿನಿಯರ್ (ವಿ) ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಲೈಂಗಿಕ ದೌರ್ಜನ್ಯದಿಂದ ಮಕ್ಕಳ ಸಂರಕ್ಷಣಾ ಕಾಯ್ದೆ-2012 ಕುರಿತು ಕಾರ್ಯಕ್ರಮ

ರಾಮನಗರ

ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾ ವಕೀಲರ ಸಂಘ ಹಾಗೂ ಬಾಲಕರ ಸರ್ಕಾರಿ ಪದವಿ ಪೂರ್ವ ಕಾಲೇಜಿನ ಸಹಯೋಗದಲ್ಲಿ ಜೂ. 20ರ ಶನಿವಾರ ಬೆಳಿಗ್ಗೆ 10 ಗಂಟೆಗೆ ನಗರದ ಬಾಲಕರ ಸರ್ಕಾರಿ ಪದವಿ ಪೂರ್ವ ಕಾಲೇಜಿನಲ್ಲಿ ಲೈಂಗಿಕ ದೌರ್ಜನ್ಯದಿಂದ ಮಕ್ಕಳ ಸಂರಕ್ಷಣಾ ಕಾಯ್ದೆ-2012 (ಪೋಕ್ಸೋ) ಕಾರ್ಯಕ್ರಮವನ್ನು ಆಯೋಜಿಸಲಾಗಿದೆ.

ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷರಾದ ನ್ಯಾ. ಎಂ.ಎಚ್. ಅಣ್ಣಯ್ಯನವರ್ ಅವರು ಕಾರ್ಯಕ್ರಮ ಉದ್ಘಾಟಿಸುವರು. ಬಾಲಕರ ಸರ್ಕಾರಿ ಪದವಿ ಪೂರ್ವ ಕಾಲೇಜಿನ ಪ್ರಾಂಶುಪಾಲರಾದ ಅಸ್ಮಾ ಸುಲ್ತಾನ ಅವರು ಅಧ್ಯಕ್ಷತೆ ವಹಿಸುವರು.

ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಸವಿತ ಪಿ.ಆರ್ ಹಾಗೂ ಜಿಲ್ಲಾ ವಕೀಲರ ಸಂಘದ ಅಧ್ಯಕ್ಷರಾದ ಕೆ. ಕೆಂಪಯ್ಯ ಅವರು ಮುಖ್ಯ ಅತಿಥಿಗಳಾಗಿ ಭಾಗವಹಿಸುವರು.

# ಪಿಡಿಪಿಎಸ್ ಅಡಿಯಲ್ಲಿ ಮಾವು ಖರೀದಿ ಪ್ರಕ್ರಿಯೆ

ಕೋಲಾರ



ಪ್ರಸ್ತುತ ಸಾಲಿನಲ್ಲಿ ಪಿ.ಡಿ.ಪಿ.ಎಸ್. (ಬೆಂಬಲ ಬೆಲೆ ಯೋಜನೆ) ಅಡಿಯಲ್ಲಿ ಮಾವು ಖರೀದಿ ಪ್ರಕ್ರಿಯೆಯನ್ನು ಅತ್ಯಂತ ವ್ಯವಸ್ಥಿತವಾಗಿ ಹಾಗೂ ರೈತಸ್ನೇಹಿಯಾಗಿ ಅನುಷ್ಠಾನಗೊಳಿಸುವ ನಿಟ್ಟಿನಲ್ಲಿ ಮಾನ್ಯ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಅಧಿಕಾರಿಗಳು ಹಾಗೂ ರೈತ ಮುಖಂಡರ ಪೂರ್ವಸಿದ್ಧತಾ ಸಭೆ ಜರುಗಿತು.

ಈ ಬಾರಿ ರೈತರ ಹಿತದೃಷ್ಟಿಯಿಂದ ನೋಂದಣಿ ಪ್ರಕ್ರಿಯೆಯನ್ನು ಸಂಪೂರ್ಣವಾಗಿ ವಿಕೇಂದ್ರೀಕರಣ ಮಾಡಲು ನಿರ್ಧರಿಸಲಾಗಿದೆ. ರೈತರು ತಾಲೂಕು ಕೇಂದ್ರಗಳಿಗೆ ಅಲೆಯುವುದನ್ನು ತಪ್ಪಿಸಲು ಆಯಾ ಗ್ರಾಮ ಪಂಚಾಯಿತಿ ಮಟ್ಟದಲ್ಲಿ ಹಾಗೂ ರೈತ ಸಂಪರ್ಕ ಕೇಂದ್ರಗಳಲ್ಲಿ ಸಾಫ್ಟ್‌ವೇರ್ ಅಳವಡಿಸಿ ನೋಂದಣಿಗೆ ಅವಕಾಶ ಕಲ್ಪಿಸಲಾಗುವುದು. ಪಿಡಿಒ ಹಾಗೂ ತೋಟಗಾರಿಕಾ ಇಲಾಖೆಯ ಅಧಿಕಾರಿಗಳಿಗೆ ಇದರ ಲಾಗಿನ್ ಐಡಿ ಜವಾಬ್ದಾರಿಯನ್ನು ನೀಡಲಾಗುವುದು ಎಂದು ಅವರು ತಿಳಿಸಿದರು.

ರೈತರ ಅನುಕೂಲಕ್ಕಾಗಿ ಗ್ರಾಮೀಣ ಮಟ್ಟದ ಜೊತೆಗೆ, ಶ್ರೀನಿವಾಸಪುರ ಎಪಿಎಂಸಿ ಆವರಣದಲ್ಲೂ ಸಹ 5 ಹೆಚ್ಚುವರಿ ನೋಂದಣಿ ಕೌಂಟರ್‌ಗಳನ್ನು ತೆರೆಯಲು ಸೂಚಿಸಲಾಯಿತು.

ಮಾರುಕಟ್ಟೆಗೆ ಬರುವ ವಾಹನಗಳ ಸುಗಮ ಸಂಚಾರಕ್ಕಾಗಿ ಚೆಕ್‌ಪೋಸ್ಟ್‌ಗಳ ಸ್ಥಾನವನ್ನು ವೇ-ಬ್ರಿಡ್ಜ್‌ಗಿಂತ ಹೊರಭಾಗಕ್ಕೆ ಸ್ಥಳಾಂತರಿಸಲು ನಿರ್ಧರಿಸಲಾಗಿದೆ ಹಾಗೂ ಇಲ್ಲಿನ ಪಾರದರ್ಶಕತೆಗಾಗಿ ಸಿಸಿಟಿವಿ ಕಣ್ಗಾವಲು ಇರಿಸಲಾಗುವುದು ಎಂದರು.

ಗೇಟ್ ಪಾಸ್ ವ್ಯವಸ್ಥೆಯನ್ನು ಇನ್ನಷ್ಟು ಗಟ್ಟಿಗೊಳಿಸಲು ಕಾಗದದ ಬದಲಿಗೆ ಸಣ್ಣ ಕಾರ್ಡ್ ಮಾದರಿಯ ಪಾಸ್ ನೀಡಲು ಮತ್ತು ಬಾರ್‌ಕೋಡ್ ಅಥವಾ ಸೀಲ್ ವ್ಯವಸ್ಥೆ ತರಲು ತೀರ್ಮಾನಿಸಲಾಯಿತು.

ತಾಂತ್ರಿಕ ಕಾರಣಗಳಿಂದ ಮುಂಚಿತವಾಗಿ ನೋಂದಣಿ ಮಾಡಿಕೊಳ್ಳಲು ಸಾಧ್ಯವಾಗದ ರೈತರು ನೇರವಾಗಿ ಮಾರುಕಟ್ಟೆಗೆ ಉತ್ಪನ್ನ ತಂದರೂ ಸಹ, ಅವರಿಗೆ ವಿಶೇಷ ಸ್ಲಿಪ್ ನೀಡಿ ಅಂದೇ ನೋಂದಣಿ ಮಾಡಿಕೊಂಡು ಮಾವು ಖರೀದಿಸಲು ಜಿಲ್ಲಾಧಿಕಾರಿಗಳು ಹಸಿರು ನಿಶಾನೆ ನೀಡಿದರು.

"ಮಳೆಗಾಲ ಆರಂಭವಾಗುತ್ತಿರುವುದರಿಂದ ಎಪಿಎಂಸಿ ಆವರಣದಲ್ಲಿ ರೈತರಿಗೆ ಕುಡಿಯುವ ನೀರು, ನೆರಳು (ಪೆಂಡಾಲ್) ಹಾಗೂ ಸೂಕ್ತ ಸ್ವಚ್ಛತಾ ವ್ಯವಸ್ಥೆಯನ್ನು ಕಲ್ಪಿಸಬೇಕು. ನೋಂದಣಿ ಪ್ರಕ್ರಿಯೆಯಲ್ಲಿ ತೊಡಗಿಕೊಳ್ಳುವ ಎಲ್ಲಾ ಸಿಬ್ಬಂದಿಗಳಿಗೆ ತಕ್ಷಣವೇ ಅಗತ್ಯ ತಾಂತ್ರಿಕ ತರಬೇತಿಯನ್ನು ನೀಡಬೇಕು" ಎಂದರು.

ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಎಸ್. ಎಂ. ಮಂಗಳ ತೋಟಗಾರಿಕಾ ಇಲಾಖೆಯ ಉಪನಿರ್ದೇಶಕ ಕುಮಾರಸ್ವಾಮಿ, ಎಪಿಎಂಸಿ ಕಾರ್ಯದರ್ಶಿ ರವಿಕುಮಾರ್, ಬೆಸ್ಕಾಂ ಅಧಿಕಾರಿ ಶುಭ ಹಾಗೂ ವಿವಿಧ ಇಲಾಖೆಗಳ ಜಿಲ್ಲಾ ಮಟ್ಟದ ಅಧಿಕಾರಿಗಳು ಮತ್ತು ರೈತ ಮುಖಂಡರು ಉಪಸ್ಥಿತರಿದ್ದರು.

# 'ಶಿಕ್ಷಣಕ್ಕೆ ದಾನ ಮಾಡಿದರೆ ಶಾಶ್ವತವಾಗಿ ನೆನಪಿನಲ್ಲಿ ಉಳಿಯುತ್ತದೆ'

ಬೂದಿಕೋಟೆ



ಗ್ರಾಮೀಣ ಪ್ರದೇಶದ ಮಕ್ಕಳಿಗೆ ಗುಣಮಟ್ಟದ ಶಿಕ್ಷಣ ಮತ್ತು ಮೂಲಭೂತ ಸೌಲಭ್ಯಗಳನ್ನು ಒದಗಿಸುವ ನಿಟ್ಟಿನಲ್ಲಿ ದಾನಿಗಳು ಮುಂದೆ ಬಂದು ಶಾಲಾ ಕಟ್ಟಡ ನಿರ್ಮಿಸಿರುವುದು ಸಮಾಜಕ್ಕೆ ಮಾದರಿಯಾದ ಕಾರ್ಯ ಎಂದು ಶಾಸಕ ಎಸ್. ಎನ್.ನಾರಾಯಣಸ್ವಾಮಿ ಹೇಳಿದರು.

ಸಮೀಪದ ಮಾಗೊಂದಿ ಗ್ರಾಮದಲ್ಲಿ ದಾನಿಗಳಾದ ಸೆಂಟ್ ಫಿಲೋಮಿನಾ ಸಿ.ಬಿ.ಎಸ್.ಸಿ. ಶಾಲೆಯ ಅಧ್ಯಕ್ಷ ಚಂದ್ರಯ್ಯ, ವಿ.ಆರ್. ಬಿಲ್ಡರ್ಸ್‌ನ ರಮೇಶ್ ನಾಯ್ಡು ಹಾಗೂ ಲಕ್ಷ್ಮೀ ವೆಂಕಟೇಶ್ವರ ಟ್ರೇಡರ್ಸ್‌ನ ರಾಮನಾಥ್ ಅವರು ತಮ್ಮ ಸ್ವಂತ ಜಾಗದಲ್ಲಿ ಸರ್ಕಾರಿ ಶಾಲೆಗಾಗಿ ಸುಮಾರು 4.50 ಕೋಟಿ ರೂಪಾಯಿ ವೆಚ್ಚದಲ್ಲಿ ನಿರ್ಮಿಸಿರುವ ನಾಲ್ಕು ಕೊಠಡಿಗಳು ಹಾಗೂ ಶೌಚಾಲಯ ಒಳಗೊಂಡ ನೂತನ ಶಾಲಾ ಕಟ್ಟಡವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಯಾವುದೇ ದಾನ ಮಾಡಿದರೂ ಕಾಲಕ್ರಮೇಣ ಜನರು ಮರೆತುಬಿಡಬಹುದು. ಆದರೆ ಶಿಕ್ಷಣಕ್ಕೆ ಮಾಡಿದ ದಾನ ಎಂದಿಗೂ ಜನರ ನೆನಪಿನಲ್ಲಿ ಉಳಿಯುತ್ತದೆ. ಶಿಕ್ಷಣವು ಕದಿಯಲಾಗದ ಅಮೂಲ್ಯ ಸಂಪತ್ತಾಗಿದ್ದು, ಮಕ್ಕಳ ಭವಿಷ್ಯ ರೂಪಿಸುವ ಅತ್ಯಂತ ದೊಡ್ಡ ಶಕ್ತಿಯಾಗಿದೆ ಎಂದು ಅವರು ಹೇಳಿದರು.

ಗ್ರಾಮೀಣ ಮಕ್ಕಳ ಉತ್ತಮ ಭವಿಷ್ಯಕ್ಕಾಗಿ ದಾನಿಗಳು ಶಾಲಾ ಕೊಠಡಿಗಳ ನಿರ್ಮಾಣ ಮಾತ್ರವಲ್ಲದೆ ವಿದ್ಯಾರ್ಥಿಗಳಿಗೆ ಪುಸ್ತಕ, ಪೆನ್ ಹಾಗೂ ಪೆನ್ಸಿಲ್‌ಗಳನ್ನು ವಿತರಿಸುತ್ತಿರುವುದು ಶ್ಲಾಘನೀಯ ಸಂಗತಿಯಾಗಿದೆ. ನೂತನ ಶಾಲಾ ಕಟ್ಟಡವು ಕೇವಲ ಕಟ್ಟಡವಲ್ಲ, ಅದು ಮಕ್ಕಳ ಭವಿಷ್ಯವನ್ನು ರೂಪಿಸುವ ಜ್ಞಾನ ಮಂದಿರವಾಗಿದೆ ಎಂದು ಅವರು ಅಭಿಪ್ರಾಯಪಟ್ಟರು.

ಈ ಗ್ರಾಮದ ಮಕ್ಕಳು ಉತ್ತಮ ಶಿಕ್ಷಣ ಪಡೆದು ವೈದ್ಯರು, ಇಂಜಿನಿಯರ್‌ಗಳು, ಶಿಕ್ಷಕರು ಹಾಗೂ ಉನ್ನತ ಅಧಿಕಾರಿಗಳಾಗಿ ಸಮಾಜಕ್ಕೆ ಸೇವೆ ಸಲ್ಲಿಸಬೇಕು. ಶಿಕ್ಷಣ ಕ್ಷೇತ್ರದ ಅಭಿವೃದ್ಧಿಗೆ ಯಾವುದೇ ರೀತಿಯ ಕೊರತೆ ಉಂಟಾಗದಂತೆ ಸರ್ಕಾರ ಅಗತ್ಯ ಕ್ರಮಗಳನ್ನು ಕೈಗೊಳ್ಳಲಿದೆ ಎಂದು ಭರವಸೆ ನೀಡಿದರು.

ಇದೇ ಸಂದರ್ಭದಲ್ಲಿ ಗ್ರಾಮದಲ್ಲಿ ನೂತನವಾಗಿ ನಿರ್ಮಾಣಗೊಂಡ ಗಂಗಾಂಬಿಕೆ, ಕಾಟೇರಮ್ಮ ಹಾಗೂ ಮುನೇಶ್ವರಸ್ವಾಮಿ ದೇವಸ್ಥಾನಗಳ ಪ್ರತಿಷ್ಠಾಪನಾ ಮಹೋತ್ಸವ ಭಕ್ತಿ, ಶ್ರದ್ಧೆ ಮತ್ತು ಸಾಂಸ್ಕೃತಿಕ ವೈಭವದೊಂದಿಗೆ ನೆರವೇರಿತು. ವಿವಿಧ ಧಾರ್ಮಿಕ ವಿಧಿವಿಧಾನಗಳು, ವಿಶೇಷ ಪೂಜೆಗಳು ಹಾಗೂ ಅನ್ನಸಂತರ್ಪಣೆ ಕಾರ್ಯಕ್ರಮಗಳಲ್ಲಿ ಸಾವಿರಾರು ಭಕ್ತರು ಭಾಗವಹಿಸಿ ದೇವರ ಆಶೀರ್ವಾದ ಪಡೆದರು.

ಕಾರ್ಯಕ್ರಮದಲ್ಲಿ ಸೆಂಟ್ ಫಿಲೋಮಿನಾ ಸಿ.ಬಿ.ಎಸ್.ಸಿ. ಶಾಲೆಯ ಅಧ್ಯಕ್ಷ ಚಂದ್ರಯ್ಯ, ವಿ.ಆರ್. ಬಿಲ್ಡರ್ಸ್‌ನ ರಮೇಶ್ ನಾಯ್ಡು, ಲಕ್ಷ್ಮೀ ವೆಂಕಟೇಶ್ವರ ಟ್ರೇಡರ್ಸ್‌ನ ರಾಮನಾಥ್, ಕ್ಷೇತ್ರ ಶಿಕ್ಷಣಾಧಿಕಾರಿ ಚಂದ್ರಶೇಖರ್, ಶಾಲೆಯ ಮುಖ್ಯ ಶಿಕ್ಷಕಿ ಯಶೋದಮ್ಮ, ಬೂದಿಕೋಟೆ ಪೊಲೀಸ್ ಠಾಣೆಯ ಪೊಲೀಸ್ ಉಪನಿರೀಕ್ಷಕ ಗುರುರಾಜ್ ಚಿಂತಕಲ್, ಮುಖಂಡರಾದ ಚಂಗಾರೆಡ್ಡಿ, ವಿಶ್ವನಾಥ್ ನಾಯ್ಡು, ರಮೇಶ್ ರೆಡ್ಡಿ, ಯಶವಂತ್, ರತ್ನಮ್ಮ, ಕಾಮಾಕ್ಷಮ್ಮ, ರಾಜಮ್ಮ ಸೇರಿದಂತೆ ಗ್ರಾಮಸ್ಥರು ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.

# ಪ್ಲಾಸ್ಟಿಕ್ ಅಪಾಯದ ವಿರುದ್ಧ ಜಾಗೃತಿ ಅಭಿಯಾನ



ವಿಜಯಪುರ

ಹಸಿಕಸ-ಒಣಕಸ ವಿಂಗಡಣೆ ಮತ್ತು ಏಕಬಳಕೆ ಪ್ಲಾಸ್ಟಿಕ್ ತ್ಯಜಿಸುವ ಕುರಿತು, ಬೀದಿ ನಾಟಕದ ಮೂಲಕ ಪುರಸಭೆಯ ವತಿಯಿಂದ ಜನರಲ್ಲಿ ಜಾಗೃತಿ ಮೂಡಿಸುವ ಕಾರ್ಯಕ್ರಮ ಮಾಡಿದರು. ಪುರಸಭೆ ಅಧ್ಯಕ್ಷೆ ಎಸ್.ಭವ್ಯಾಮಹೇಶ್ ಅವರು ಚಾಲನೆ ನೀಡಿದರು.

ಪಟ್ಟಣದ 21 ನೇ ವಾರ್ಡಿನ ಇಂದಿರಾನಗರದಲ್ಲಿ, ಕಸ ಹಾಕುತ್ತಿದ್ದ ಸ್ಥಳದಲ್ಲಿ ಹೂಗಿಡಗಳನ್ನು ನೆಟ್ಟು, ಜನ ಜಾಗೃತಿ ಮೂಡಿಸಿದರು. ಈ ವೇಳೆ ಕೆನರಾ ಬ್ಯಾಂಕಿನ ಸಹಯೋಗದಲ್ಲಿ, ನಾಗರಿಕರಿಗೆ ಬಟ್ಟೆ ಬ್ಯಾಗುಗಳನ್ನು ವಿತರಣೆ ಮಾಡಿದರು.

ಈ ವೇಳೆ ಮಾತನಾಡಿದ ಪುರಸಭೆ ಅಧ್ಯಕ್ಷೆ ಎಸ್.ಭವ್ಯಾಮಹೇಶ್ ಅವರು, ಕಸ ವಿಲೇವಾರಿಯ ಬಗ್ಗೆ ಪ್ರತಿಯೊಬ್ಬರಲ್ಲೂ ಸ್ವಯಂ ಜಾಗೃತಿ ಬರಬೇಕು, ನಾವು ವಾಸ ಮಾಡುತ್ತಿರುವ ಪರಿಸರದ ಬಗ್ಗೆ ಕಾಳಜಿ ಹೊಂದಿದ್ದಾಗ ಮಾತ್ರ, ಇಂತಹ ಕಾರ್ಯಕ್ರಮಗಳು ಯಶಸ್ವಿಯಾಗಲು ಸಾಧ್ಯವಾಗುತ್ತದೆ. ಕಸವನ್ನು ವಿಂಗಡಣೆ ಮಾಡುವುದರ ಜೊತೆಗೆ ಯಾವ ಯಾವ ಕಸವನ್ನು ಹೇಗೆ ಯಾವ ಬಣ್ಣದ ಬಕೆಟ್ ನಲ್ಲಿ ಹಾಕಿ, ಪುರಸಭೆ ಕಸ ಸಂಗ್ರಹಣೆಯ ವಾಹನಗಳಿಗೆ ನೀಡಬೇಕು ಎನ್ನುವ ಕುರಿತು, ಅರಿವು ಮೂಡಿಸಿದರು. ಪ್ರತಿಯೊಂದು ಮನೆಗೂ 4 ಬಣ್ಣದ ಬಕೆಟ್ ಗಳನ್ನು ಪುರಸಭೆಯಿಂದ ವಿತರಣೆ ಮಾಡಲಿದ್ದು, ನಾಗರಿಕರು ಕಸವನ್ನು ಹೊರಗೆ ತಂದು ಸುರಿಯಬಾರದು ಎಂದರು.

ಮುಖ್ಯಾಧಿಕಾರಿ ವೈ.ಎನ್.ಸತ್ಯನಾರಾಯಣ ಮಾತನಾಡಿ, ಹಸಿಕಸ. ಅದನ್ನು ಒಣಕಸದ ಜೊತೆ ಬೆರೆಸಿದರೆ ಇಡೀ ಕಸ ಕೊಳೆತು, ಗೊಬ್ಬರವೂ ಆಗಲ್ಲ, ಮರುಬಳಕೆಯೂ ಆಗಲ್ಲ. ಕೊನೆಗೆ ಲ್ಯಾಂಡ್ಫಿಲ್ಗೆ ಹೋಗಿ ಮಣ್ಣು, ನೀರು, ಗಾಳಿ ಎಲ್ಲವನ್ನೂ ವಿಷವಾಗಿಸುತ್ತದದೆ. ಹಸಿರು ಬುಟ್ಟಿಗೆ, ಅಡುಗೆ ತ್ಯಾಜ್ಯ, ಹಣ್ಣಿನ ಸಿಪ್ಪೆ, ತರಕಾರಿ ಕತ್ತರಿಸಿದ ಭಾಗ, ಉಳಿದ ಅನ್ನ-ಸಾಂಬಾರ್, ಮೊಟ್ಟೆಯ ಸಿಪ್ಪೆ, ಚಹಾ ಪುಡಿ, ಒಣಗಿದ ಹೂವು, ಎಲೆಯಂತಹ ತ್ಯಾಜ್ಯವನ್ನು ಹಾಕಿ, ಇದರಿಂದ ಉತ್ತಮ ಗುಣಮಟ್ಟದ ಕಾಂಪೋಸ್ಟ್ ಗೊಬ್ಬರ ತಯಾರಾಗುತ್ತದೆ. ನಮ್ಮ ಪಾರ್ಕ್, ತೋಟಗಳಿಗೆ ಬಳಸಬಹುದು.

ಕೆಂಪು ಬುಟ್ಟಿಗೆ, ಡೈಪರ್, ಸ್ಯಾನಿಟರಿ ನ್ಯಾಪ್ಕಿನ್, ಬಳಸಿದ ಮಾಸ್ಕ್, ಔಷಧಿ. ಇವನ್ನು ಪ್ರತ್ಯೇಕವಾಗಿ ಪೇಪರ್‌ನಲ್ಲಿ ಸುತ್ತಿ ಕೊಡಬೇಕು. ಪ್ಲಾಸ್ಟಿಕ್ ಕೊಳೆಯುವುದಿಲ್ಲ. ಒಂದು ಪ್ಲಾಸ್ಟಿಕ್ ಕವರ್ ಕೊಳೆಯಲು 500 ವರ್ಷ ಬೇಕು. ಅಲ್ಲಿಯವರೆಗೆ ಅದು ಮಣ್ಣಿನಲ್ಲಿ ಹಾಗೇ ಇರುತ್ತದೆ. ಮಳೆಯಲ್ಲಿ ಪ್ಲಾಸ್ಟಿಕ್ ಚರಂಡಿ ಸೇರಿ ಪಟ್ಟಣ ಮುಳುಗಲು ಮುಖ್ಯ ಕಾರಣವಾಗುತ್ತದೆ. ದನ, ನಾಯಿ ಪ್ಲಾಸ್ಟಿಕ್ ತಿಂದು ಸಾವನ್ನಪ್ಪುತ್ತಿವೆ.

# ಮಧುಗಿರಿ ತಾಲ್ಲೂಕಿನಲ್ಲಿ ತೋಟಗಾರಿಕೆ ಬೆಳೆ ವಿಮೆ ನೋಂದಣಿ ಆರಂಭ

ತುಮಕೂರು

ಜಿಲ್ಲೆಯ ಮಧುಗಿರಿ ತಾಲ್ಲೂಕಿನಲ್ಲಿ 2026-27ನೇ ಸಾಲಿನ ಮರು ವಿನ್ಯಾಸಗೊಳಿಸಿದ ಹವಾಮಾನ ಆಧಾರಿತ ಬೆಳೆ ವಿಮೆ ಯೋಜನೆಗೆ ಒಳಪಟ್ಟ ತೋಟಗಾರಿಕೆ ಬೆಳೆಗಳಿಗೆ ವಿಮೆ ನೋಂದಣಿ ಪ್ರಕ್ರಿಯೆ ಆರಂಭವಾಗಿದೆ ಎಂದು ತೋಟಗಾರಿಕೆ ಇಲಾಖೆ ಪ್ರಕಟಿಸಿದೆ.

ಸರ್ಕಾರದ ಅಧಿಸೂಚನೆಯ ಪ್ರಕಾರ, ಅಡಿಕೆ, ದಾಳಿಂಬೆ ಮತ್ತು ಮಾವು ಬೆಳೆಗಳನ್ನು ಈ ಯೋಜನೆಗೆ ಒಳಪಡಿಸಲಾಗಿದ್ದು, ಬೆಳೆ ಸಾಲ ಪಡೆದಿರುವ ರೈತರಿಗೆ ಕಡ್ಡಾಯವಾಗಿ ವಿಮೆ ಮಾಡಿಸುವ ವ್ಯವಸ್ಥೆ ಇರಲಿದೆ. ಬೆಳೆ ಸಾಲ ಪಡೆಯದ ರೈತರಿಗೆ ಇದು ಐಚ್ಛಿಕವಾಗಿರುತ್ತದೆ.

ಮಧುಗಿರಿ ತಾಲ್ಲೂಕಿನಲ್ಲಿ ವಿಮೆಗೆ ಒಳಪಟ್ಟ ಬೆಳೆಗಳ ನೋಂದಣಿಗಾಗಿ ರೈತರು ತಮ್ಮ ಈಖಗಿಖಖಿಖ ಐಡಿ, ಪಹಣಿ ದಾಖಲೆ, ಬ್ಯಾಂಕ್ ಪಾಸ್‌ಬುಕ್, ಆಧಾರ್ ಪ್ರತಿಗಳು ಹಾಗೂ ಬೆಳೆ ವಿವರಗಳನ್ನು ಸಲ್ಲಿಸಬೇಕು. ನೋಂದಣಿ ಪ್ರಕ್ರಿಯೆಯನ್ನು ರಾಷ್ಟ್ರೀಯ ಬ್ಯಾಂಕುಗಳು, ಗ್ರಾಮ ಒನ್ ಕೇಂದ್ರಗಳು ಹಾಗೂ ಸಾಮಾನ್ಯ ಸೇವಾ ಕೇಂದ್ರಗಳ ಮೂಲಕ ಮಾಡಿಕೊಳ್ಳಬಹುದು.

ಯೋಜನೆಯಡಿ ಹವಾಮಾನ ವೈಪರಿತ್ಯ, ಆಲಿಕಲ್ಲು ಮಳೆ ಮತ್ತು ಮೇಘಸ್ಫೋಟದಂತಹ ಸ್ಥಳೀಯ ಪ್ರಕೃತಿ ವಿಕೋಪಗಳಿಂದ ಬೆಳೆ ನಷ್ಟ ಸಂಭವಿಸಿದರೆ, ರೈತರು 72 ಗಂಟೆಗಳೊಳಗೆ ಸಂಬಂಧಿಸಿದ ವಿಮಾ ಸಂಸ್ಥೆ ಅಥವಾ ಟೋಲ್ ಫ್ರೀ ಸಂಖ್ಯೆಗೆ ಮಾಹಿತಿ ನೀಡಬೇಕೆಂದು ಸೂಚಿಸಲಾಗಿದೆ.

ಅಡಿಕೆ ಬೆಳೆಗೆ ಪ್ರತಿ ಹೆಕ್ಟೇರ್‌ಗೆ 1,28,000 ರೂಪಾಯಿ ವಿಮಾ ಮೊತ್ತಕ್ಕೆ 6,400 ರೂಪಾಯಿ ಪ್ರೀಮಿಯಂ, ದಾಳಿಂಬೆ ಬೆಳೆಗೆ 1,27,000 ರೂಪಾಯಿ ವಿಮಾ ಮೊತ್ತಕ್ಕೆ 6,350 ರೂಪಾಯಿ ಪ್ರೀಮಿಯಂ ಹಾಗೂ ಮಾವು ಬೆಳೆಗೆ 80,000 ರೂಪಾಯಿ ವಿಮಾ ಮೊತ್ತಕ್ಕೆ 4,000 ರೂಪಾಯಿ ಪ್ರೀಮಿಯಂ ಪಾವತಿಸಬೇಕಾಗಿದೆ.

ಅಡಿಕೆ ಮತ್ತು ದಾಳಿಂಬೆ ಬೆಳೆಗಳಿಗೆ ನೋಂದಣಿ ಕೊನೆಯ ದಿನಾಂಕ 30-06-2026 ಆಗಿದ್ದು, ಮಾವು ಬೆಳೆಗೆ 31-07-2026 ಕೊನೆಯ ದಿನಾಂಕವಾಗಿದೆ ಎಂದು ಇಲಾಖೆ ತಿಳಿಸಿದೆ.

ಹೆಚ್ಚಿನ ಮಾಹಿತಿಗಾಗಿ ತೋಟಗಾರಿಕೆ ಇಲಾಖೆಯ ಅಧಿಕಾರಿಗಳನ್ನು ಸಂಪರ್ಕಿಸಬಹುದು ಎಂದು ಸಹಾಯಕ ನಿರ್ದೇಶಕ ಶಶಿಧರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸಿದ್ದರಬೆಟ್ಟ ಶ್ರೀಮಠದ 20ನೇ ವಾರ್ಷಿಕೋತ್ಸವಕ್ಕೆ ಭರದ ಸಿದ್ಧತೆ



ಮಧುಗಿರಿ

ತಾಲೂಕಿನ ಸಸ್ಯಕಾಶಿ ಎಂದೇ ಪ್ರಸಿದ್ಧವಾದ ಸಿದ್ದರ ತಪೋಭೂಮಿಯಾದ ಸಿದ್ದರಬೆಟ್ಟದಲ್ಲಿ ಜೂನ್ 21ರಂದು ನಡೆಯಲಿರುವ ಬಾಳೆಹೊನ್ನೂರು ಖಾಸಾ ಶಾಖಾ ಶ್ರೀಮಠದ 20ನೇ ವಾರ್ಷಿಕ ಮಹೋತ್ಸವ, ಶ್ರೀ ಜಗದ್ಗುರು ರೇಣುಕಾಚಾರ್ಯ ಜಯಂತಿ ಹಾಗೂ ಜಗಜ್ಯೋತಿ ಬಸವೇಶ್ವರ ಜಯಂತೋತ್ಸವಕ್ಕೆ ಭರದ ಸಿದ್ಧತೆಗಳು ನಡೆಯುತ್ತಿವೆ.

ಸಿದ್ದರಬೆಟ್ಟ ಶ್ರೀಮಠದ ಪೀಠಾಧ್ಯಕ್ಷರಾದ ಶ್ರೀ ವೀರಭದ್ರ ಶಿವಾಚಾರ್ಯ ಸ್ವಾಮೀಜಿ ಅವರು ಮಾತನಾಡಿ, ಈ ಧಾರ್ಮಿಕ ಮಹೋತ್ಸವದ ಅಂಗವಾಗಿ ಧರ್ಮ ಜಾಗೃತಿ ಸಮಾವೇಶ, ಉಚಿತ ಸಾಮೂಹಿಕ ವಿವಾಹ ಹಾಗೂ ವಿವಿಧ ಆಧ್ಯಾತ್ಮಿಕ ಮತ್ತು ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಆಯೋಜಿಸಲಾಗಿದೆ ಎಂದು ತಿಳಿಸಿದರು.

ಕಾರ್ಯಕ್ರಮದ ವಿಶೇಷ ಆಕರ್ಷಣೆಯಾಗಿ ಧರ್ಮಸ್ಥಳದ ಧರ್ಮಾಧಿಕಾರಿ ಡಾ.ಡಿ.ವೀರೇಂದ್ರ ಹೆಗ್ಗಡೆ ಅವರಿಗೆ 20ನೇ ವರ್ಷದ ಪ್ರತಿಷ್ಠಿತ "ಸಿದ್ದಶ್ರೀ ಪ್ರಶಸ್ತಿ" ಪ್ರದಾನ ಮಾಡಲಾಗುವುದು ಎಂದು ಅವರು ಹೇಳಿದರು.

ರಾಜ್ಯದ ವಿವಿಧ ಭಾಗಗಳಿಂದ ಸಾವಿರಾರು ಭಕ್ತರು ಭಾಗವಹಿಸುವ ನಿರೀಕ್ಷೆಯಿದ್ದು, ಕಾರ್ಯಕ್ರಮದಲ್ಲಿ ಉಪ ಮುಖ್ಯಮಂತ್ರಿ ಡಾ. ಜಿ. ಪರಮೇಶ್ವರ, ಕೇಂದ್ರ ಸಚಿವ ವಿ. ಸೋಮಣ್ಣ ಹಾಗೂ ಮಧುಗಿರಿ ಶಾಸಕ ಕೆ.ಎನ್. ರಾಜಣ್ಣ ಸೇರಿದಂತೆ ಹಲವಾರು ಗಣ್ಯರನ್ನು ಆಹ್ವಾನಿಸಲಾಗಿದೆ.

ಶ್ರೀಮಠದ ವತಿಯಿಂದ ಕಳೆದ 20 ವರ್ಷಗಳಿಂದ ನಿರಂತರ ದಾಸೋಹ ವ್ಯವಸ್ಥೆ ನಡೆಯುತ್ತಿದ್ದು, ಭಕ್ತರ ಸಹಕಾರದಿಂದ ಮುಂದಿನ ದಿನಗಳಲ್ಲಿ ಸಿದ್ದೇಶ್ವರ ಸ್ವಾಮಿಗೆ ಪ್ರಿಯವಾದ ಹೋಳಿಗೆ ತುಪ್ಪ ಪ್ರಸಾದವನ್ನು ವರ್ಷಪೂರ್ತಿ ಭಕ್ತರಿಗೆ ವಿತರಿಸುವ ಯೋಜನೆಯೂ ರೂಪಿಸಲಾಗುತ್ತಿದೆ ಎಂದು ಸ್ವಾಮೀಜಿ ತಿಳಿಸಿದರು.

# ಲೋಪರಹಿತ ನೀಟ್ ಪರೀಕ್ಷೆಗೆ ಜಿಲ್ಲಾಧಿಕಾರಿ ಸೂಚನೆ

ಕೋಲಾರ



ರಾಷ್ಟ್ರೀಯ ಅರ್ಹತಾ ಮತ್ತು ಪ್ರವೇಶ ಪರೀಕ್ಷೆ (ಓಇಇಖ) 2026 ಅನ್ನು ಜಿಲ್ಲೆಯಲ್ಲಿ ಅತ್ಯಂತ ಪಾರದರ್ಶಕ, ದೋಷಮುಕ್ತ ಹಾಗೂ ಸುರಕ್ಷಿತ ವಾತಾವರಣದಲ್ಲಿ ನಡೆಸಲು ಜಿಲ್ಲಾಡಳಿತ ಸಂಪೂರ್ಣವಾಗಿ ಸನ್ನದ್ಧವಾಗಿದೆ ಎಂದು ಜಿಲ್ಲಾಧಿಕಾರಿ ಡಾ. ಎಂ. ಆರ್. ರವಿ ಅವರು ತಿಳಿಸಿದರು.

ಜಿಲ್ಲಾಧಿಕಾರಿಗಳ ಕೇಸ್ವಾನ್ ಸಭಾಂಗಣದಲ್ಲಿ ನಡೆದ ನೀಟ್ ಪೂರ್ವಸಿದ್ಧತಾ ಸಭೆಯಲ್ಲಿ ಪರೀಕ್ಷೆಯನ್ನು ಯಾವುದೇ ಲೋಪದೋಷಗಳಿಲ್ಲದೆ ಯಶಸ್ವಿಯಾಗಿ ನಡೆಸಲು ಅಧಿಕಾರಿಗಳಿಗೆ ಹಲವು ನಿರ್ದೇಶನಗಳನ್ನು ಅವರು ನೀಡಿದರು.

ಪರೀಕ್ಷೆ ಆರಂಭವಾಗುವ 24 ಗಂಟೆಗಳ ಮುಂಚಿತವಾಗಿಯೇ ಎಲ್ಲಾ ಪರೀಕ್ಷಾ ಕೇಂದ್ರಗಳು ಸಂಪೂರ್ಣವಾಗಿ ಸಜ್ಜಾಗಿರಬೇಕು ಎಂದು ಜಿಲ್ಲಾಧಿಕಾರಿಗಳು ಆದೇಶಿಸಿದರು.

ಜಿಲ್ಲೆಯ ಒಟ್ಟು 11 ಪರೀಕ್ಷಾ ಕೇಂದ್ರಗಳಿಗೆ ನ್ಯಾಷನಲ್ ಟೆಸ್ಟಿಂಗ್ ಏಜೆನ್ಸಿ ನಿಯಮಾವಳಿಗಳ ಪ್ರಕಾರ ತಲಾ ಒಬ್ಬರಂತೆ ಒಟ್ಟು 11 ವೀಕ್ಷಕರನ್ನು ನೇಮಕ ಮಾಡಲಾಗಿದೆ.

ಎನ್‌ಟಿಎ ನಿರ್ದೇಶನದಂತೆ ನಿಯೋಜಿತರಾಗಿರುವ ಇಬ್ಬರು ನೋಡಲ್ ಅಧಿಕಾರಿಗಳು ಶನಿವಾರ ಮಧ್ಯಾಹ್ನ 1:00 ಗಂಟೆಯೊಳಗೆ ಎಲ್ಲಾ ಕೇಂದ್ರಗಳ ಅಂತಿಮ ಸಿದ್ಧತೆಯ ಓಕೆ ವರದಿಯನ್ನು ಸಲ್ಲಿಸಬೇಕಿದೆ.

ಪರೀಕ್ಷಾ ದಿನದಂದು (ಭಾನುವಾರ) ಮುಂಜಾನೆ 7:00 ಗಂಟೆಗೆ ಸರ್ಕಾರಿ ಜೂನಿಯರ್ ಕಾಲೇಜು (ಅಸೆಂಬ್ಲಿ ಪಾಯಿಂಟ್) ನಲ್ಲಿ ಎಲ್ಲಾ ಚೀಫ್ ಸೂಪರಿಂಟೆಂಡೆಂಟ್ಸ್ ಹಾಗೂ ವೀಕ್ಷಕರು ವರದಿ ಮಾಡಿಕೊಳ್ಳಬೇಕು.

ಬ್ಯಾಂಕ್‌ನಿಂದ ಪ್ರಶ್ನೆ ಪತ್ರಿಕೆಗಳ ಟ್ರಂಕ್‌ಗಳನ್ನು ಸುರಕ್ಷಿತವಾಗಿ ಸಾಗಿಸಲು ಜಿಲ್ಲಾಡಳಿತದಿಂದಲೇ ವಿಶೇಷ ವಾಹನ ಹಾಗೂ ಪೊಲೀಸ್ ಎಸ್ಕಾರ್ಟ್ ವ್ಯವಸ್ಥೆಯನ್ನು ಕಲ್ಪಿಸಲಾಗಿದೆ. ಚೀಫ್ ಸೂಪರಿಂಟೆಂಡೆಂಟ್‌ಗಳು ಕೋಡ್ ನಂಬರ್ ಹಾಗೂ ಕೇಂದ್ರದ ವಿವರಗಳನ್ನು ಸೂಕ್ಷ್ಮವಾಗಿ ಪರಿಶೀಲಿಸಿ ಪತ್ರಿಕೆಗಳನ್ನು ಸ್ವೀಕರಿಸಬೇಕು.

ಪ್ರತಿ ಕೊಠಡಿಯಲ್ಲಿ 24 ವಿದ್ಯಾರ್ಥಿಗಳಿಗೆ ಇಬ್ಬರು ಮೇಲ್ವಿಚಾರಕರನ್ನು ನಿಯೋಜಿಸಲಾಗಿದ್ದು, ಪರೀಕ್ಷಾ ಕೇಂದ್ರದಲ್ಲಿ 'ಕೋಡ್ ಆಫ್ ಎಥಿಕ್ಸ್' ಅನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು.

ಕೊಠಡಿ ಮೇಲ್ವಿಚಾರಕರು ವಿದ್ಯಾರ್ಥಿಗಳೊಂದಿಗೆ ಸೌಜನ್ಯ ಹಾಗೂ ಜವಾಬ್ದಾರಿಯಿಂದ ವರ್ತಿಸಬೇಕು. ಪ್ರತಿ ಕೊಠಡಿಯಲ್ಲಿ ಗೋಡೆ ಗಡಿಯಾರಗಳು ಸರಿಯಾಗಿ ಕೆಲಸ ಮಾಡುತ್ತಿರುವುದನ್ನು ಮತ್ತು ವಿದ್ಯಾರ್ಥಿಗಳಿಗೆ ಕುಡಿಯುವ ನೀರಿನ ಸೂಕ್ತ ವ್ಯವಸ್ಥೆ ಇರುವುದನ್ನು ಖಚಿತಪಡಿಸಿಕೊಳ್ಳಬೇಕು. ಪರೀಕ್ಷಾ ಕೇಂದ್ರಗಳಲ್ಲಿವಿದ್ಯುತ್ ವ್ಯವಸ್ಥೆ ಸಮರ್ಪಕವಾಗಿರುವುದರ ಬಗ್ಗೆ ಖಚಿತಪಡಿಸಕೊಳ್ಳಬೇಕೆಂದರು.

ಪರೀಕ್ಷಾ ಕೇಂದ್ರಗಳಲ್ಲಿ ಎನ್‌ಟಿಎ ವತಿಯಿಂದಲೇ ನುರಿತ ತಪಾಸಣಾ ತಂಡ ಕಾರ್ಯನಿರ್ವಹಿಸಲಿದ್ದು, ಹೆಣ್ಣುಮಕ್ಕಳ ತಪಾಸಣೆಗೆ ಪ್ರತ್ಯೇಕ ಸ್ಕ್ರೀನ್ ಹಾಗೂ ಮಹಿಳಾ ಸಿಬ್ಬಂದಿಗಳ ವ್ಯವಸ್ಥೆ ಇರಲಿದೆ.

ಎಲ್ಲಾ ಪರೀಕ್ಷಾ ಕೊಠಡಿಗಳಲ್ಲಿ ಅಳವಡಿಸಲಾಗಿರುವ ಸಿಸಿಟಿವಿಗಳ ನೇರ ಪ್ರಸಾರ ವ್ಯವಸ್ಥೆಯನ್ನು ಮೇಲ್ವಿಚಾರಣೆ ಮಾಡಲು ಸಿಬ್ಬಂದಿಯನ್ನು ನಿಯೋಜಿಸಬೇಕು. ತಾಂತ್ರಿಕ ದೋಷ ಅಥವಾ ನೆಟ್‌ವರ್ಕ್ ಸಮಸ್ಯೆ ಉಂಟಾಗದಂತೆ ಬಿಎಸ್‌ಎನ್‌ಎಲ್ ಹಾಗೂ ಇತರೆ ಸೇವಾ ಪೂರೈಕೆದಾರರೊಂದಿಗೆ ಸಮನ್ವಯ ಸಾಧಿಸಲು ಸೂಚಿಸಲಾಗಿದೆ.

ವಿದ್ಯಾರ್ಥಿಗಳಿಗೆ ಮಧ್ಯಾಹ್ನ 1:30 ಗಂಟೆಗೆ ಮುಖ್ಯ ದ್ವಾರವನ್ನು ಮುಚ್ಚಲಾಗುವುದು, ಆ ನಂತರ ಯಾರಿಗೂ ಪ್ರವೇಶವಿರುವುದಿಲ್ಲ ಎಂದರು

ಬಂಗಾರಪೇಟೆಯ ಆಯ್ದ ಕೇಂದ್ರಗಳಲ್ಲಿ ಪರೀಕ್ಷೆ ಬರೆಯುತ್ತಿರುವ ವಿಶೇಷ ಚೇತನ ವಿದ್ಯಾರ್ಥಿಗಳಿಗೆ ನಿಯಮಾವಳಿಗಳ ಪ್ರಕಾರ ಪರೀಕ್ಷೆಯು ಸಂಜೆ 6:20 ಕ್ಕೆ ಮುಕ್ತಾಯಗೊಳ್ಳಲಿದ್ದು, ಅಲ್ಲಿಯವರೆಗೆ ಇಡೀ ಕೇಂದ್ರದ ಯಾವುದೇ ಒಎಂಆರ್ ಶೀಟ್‌ಗಳನ್ನು ಹೊರಗೆ ಕಳುಹಿಸುವಂತಿಲ್ಲ.

ಪರೀಕ್ಷೆ ಮುಗಿದ ನಂತರ ಒಎಂಆರ್ ಶೀಟ್‌ಗಳನ್ನು ಅತ್ಯಂತ ಜಾಗರೂಕತೆಯಿಂದ ಪ್ಯಾಕ್ ಮಾಡಿ, ಪೊಲೀಸ್ ಭದ್ರತೆಯೊಂದಿಗೆ ಕೆ.ಜಿ.ಎಫ್‌ನ ಕೇಂದ್ರೀಯ ವಿದ್ಯಾಲಯಕ್ಕೆ ತರಬೇಕು.

ಅಲ್ಲಿಂದ ಪೋಸ್ಟಲ್ ಇಲಾಖೆಯ ವಿಶೇಷ ವಾಹನದ ಮೂಲಕ ಭದ್ರತೆಯೊಂದಿಗೆ ಬೆಂಗಳೂರಿಗೆ ಹಾಗೂ ತದನಂತರ ವಿಮಾನದ ಮೂಲಕ ಎನ್‌ಟಿಎ ಪ್ರಧಾನ ಕಚೇರಿಗೆ ರವಾನಿಸಲಾಗುವುದು.

"ನೀಟ್ ಪರೀಕ್ಷೆಯು ಅತ್ಯಂತ ಪ್ರತಿಷ್ಠಿತ ಪರೀಕ್ಷೆಯಾಗಿದ್ದು, ಜಿಲ್ಲೆಯ ಯಾವುದೇ ಕೇಂದ್ರದಲ್ಲಿ ಸಣ್ಣ ನಕಾರಾತ್ಮಕ ಘಟನೆಗಳಿಗೂ ಆಸ್ಪದ ಇರಬಾರದು. ಪರೀಕ್ಷಾ ಕೇಂದ್ರಗಳು ಕೇವಲ ಪೊಲೀಸ್ ಕಾವಲು ಕೇಂದ್ರಗಳಂತೆ ಗೋಚರಿಸದೆ. ವಿದ್ಯಾರ್ಥಿಗಳಲ್ಲಿ ಧೈರ್ಯ ತುಂಬುವಂತಿರಬೇಕು. ಅಧಿಕಾರಿಗಳು ತಮ್ಮ ಜವಾಬ್ದಾರಿಯನ್ನು ಅಚ್ಚುಕಟ್ಟಾಗಿ ನಿರ್ವಹಿಸಿ ದೋಷಮುಕ್ತ ಪರೀಕ್ಷೆಗೆ ಸಹಕರಿಸಬೇಕು." ಎಂದು ನುಡಿದರು.

ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಎಸ್.ಎಂ. ಮಂಗಳ, ಅಪರ ಪೊಲೀಸ್ ವರಿಷ್ಠಾಧಿಕಾರಿ ರವಿಶಂಕರ್, ಉಪವಿಭಾಗಾಧಿಕಾರಿ ಜಂಬಗಿ ರೇಣುಕಾಪ್ರಸಾದ್ ದಿಲೀಪ್, ರವಿಚಂದ್ರ, ಎಲ್ಲಾ ಸೂಪರ್‌ವೈಸರ್‌ಗಳು, ನೀಟ್ ಪರೀಕ್ಷೆಯ ನೋಡಲ್ ಅಧಿಕಾರಿ ಉಮೇಶ್ ಪ್ರಜಾಪತಿ ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

# ಕೋಲಾರ ಜಿಲ್ಲಾ ನ್ಯಾಯಾಲಯಕ್ಕೆ ಬಾಂಬ್ ಬೆದರಿಕೆ



ಕೋಲಾರ

ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಲಯಕ್ಕೆ ಬಾಂಬ್ ಇಟ್ಟಿರುವುದಾಗಿ ಬೆದರಿಕೆ ಸಂದೇಶ ಬಂದ ಹಿನ್ನೆಲೆಯಲ್ಲಿ ಗುರುವಾರ ನ್ಯಾಯಾಲಯ ಆವರಣದಲ್ಲಿ ಕೆಲಕಾಲ ಆತಂಕದ ವಾತಾವರಣ ನಿರ್ಮಾಣವಾಗಿತ್ತು. ಮಾಹಿತಿ ದೊರೆಯುತ್ತಿದ್ದಂತೆಯೇ ಪೊಲೀಸರು, ಬಾಂಬ್ ನಿಷ್ಕ್ರಿಯ ದಳ ಹಾಗೂ ಶ್ವಾನದಳದ ಸಿಬ್ಬಂದಿ ಸ್ಥಳಕ್ಕೆ ಧಾವಿಸಿ ನ್ಯಾಯಾಲಯ ಸಂಕೀರ್ಣದಾದ್ಯಂತ ಸುದೀರ್ಘ ತಪಾಸಣೆ ನಡೆಸಿದರು.

ನ್ಯಾಯಾಲಯದ ಆವರಣ, ಕಟ್ಟಡಗಳು ಹಾಗೂ ಸಾರ್ವಜನಿಕರ ಸಂಚಾರವಿರುವ ಪ್ರದೇಶಗಳನ್ನು ಸೂಕ್ಷ್ಮವಾಗಿ ಪರಿಶೀಲಿಸಿದ ಬಳಿಕ ಯಾವುದೇ ಅನುಮಾನಾಸ್ಪದ ವಸ್ತು ಪತ್ತೆಯಾಗಿಲ್ಲ. ತಪಾಸಣೆಯ ನಂತರ ಇದು ಹುಸಿ ಬೆದರಿಕೆ ಎಂಬುದು ದೃಢಪಟ್ಟಿದೆ.

ಇದೇ ರೀತಿಯ ಬೆದರಿಕೆ ಸಂದೇಶಗಳು ಇತ್ತೀಚೆಗೆ ರಾಜ್ಯದ ಹಲವು ನ್ಯಾಯಾಲಯಗಳಿಗೂ ಬಂದಿದ್ದು, ಅವುಗಳೂ ಸಹ ತನಿಖೆಯಲ್ಲಿ ಸುಳ್ಳು ಎಂಬುದು ಬಹಿರಂಗವಾಗಿತ್ತು. ಆದಾಗ್ಯೂ ಯಾವುದೇ ಅಪಾಯವನ್ನು ನಿರ್ಲಕ್ಷಿಸದೆ ಅಧಿಕಾರಿಗಳು ಅಗತ್ಯ ಮುನ್ನೆಚ್ಚರಿಕಾ ಕ್ರಮಗಳನ್ನು ಕೈಗೊಂಡರು.

ಬೆದರಿಕೆ ಸಂದೇಶದ ಮೂಲವನ್ನು ಪತ್ತೆಹಚ್ಚಲು ಪೊಲೀಸರು ಸೈಬರ್ ತಜ್ಞರ ನೆರವಿನೊಂದಿಗೆ ತನಿಖೆ ಮುಂದುವರಿಸಿದ್ದಾರೆ. ಘಟನೆ ಹಿನ್ನೆಲೆ ನ್ಯಾಯಾಲಯ ಆವರಣದಲ್ಲಿ ಭದ್ರತೆಯನ್ನು ಹೆಚ್ಚಿಸಲಾಗಿದ್ದು, ಪ್ರವೇಶ ದ್ವಾರಗಳಲ್ಲಿ ಕಟ್ಟುನಿಟ್ಟಿನ ತಪಾಸಣೆ ಮುಂದುವರಿದಿದೆ.

# ಅಭಿವೃದ್ಧಿ ಕಾಮಗಾರಿಗಳಿಗೆ ಚಾಲನೆ

ಬಂಗಾರಪೇಟೆ

ತಾಲೂಕಿನ ಗ್ರಾಮೀಣ ಪ್ರದೇಶಗಳ ಸಮಗ್ರ ಅಭಿವೃದ್ಧಿಗೆ ರಾಜ್ಯ ಸರ್ಕಾರ ಬದ್ಧವಾಗಿದ್ದು, ನೀರಾವರಿ ಹಾಗೂ ಮೂಲಸೌಕರ್ಯ ಅಭಿವೃದ್ಧಿ ಯೋಜನೆಗಳಿಗೆ ಹೆಚ್ಚಿನ ಆದ್ಯತೆ ನೀಡಲಾಗಿದೆ ಎಂದು ಶಾಸಕ ಎಸ್.ಎನ್.ನಾರಾಯಣಸ್ವಾಮಿ ಹೇಳಿದರು.

ತಾಲೂಕಿನ ಬೆಂಡಿಗಾನಹಳ್ಳಿ ಸಮೀಪ ವೃಷಭಾವತಿ ನದಿಗೆ ಅಡ್ಡಲಾಗಿ ನಿರ್ಮಿಸಲಾಗುತ್ತಿರುವ ಸೇತುವೆಗೆ ಶಂಕುಸ್ಥಾಪನೆ ನೆರವೇರಿಸಿ, ಒಟ್ಟು 3 ಕೋಟಿ ರೂಪಾಯಿ ವೆಚ್ಚದ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಗುದ್ದಲಿ ಪೂಜೆ ಸಲ್ಲಿಸಿ ಅವರು ಮಾತನಾಡಿದರು.

ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರ ಮಾರ್ಗದರ್ಶನದಲ್ಲಿ ತಾಲೂಕಿನಾದ್ಯಂತ ಅಭಿವೃದ್ಧಿ ಕಾರ್ಯಗಳು ನಿರಂತರವಾಗಿ ನಡೆಯುತ್ತಿವೆ. ಸಣ್ಣ ನೀರಾವರಿ ಇಲಾಖೆಯಿಂದ ಬಂಗಾರಪೇಟೆ ತಾಲೂಕಿಗೆ ಈ ಹಿಂದೆ 20 ಕೋಟಿಗೂ ಅಧಿಕ ಅನುದಾನ ಮಂಜೂರಾಗಿದ್ದು, ಅದರ ಫಲವಾಗಿ ಹಲವು ಮಹತ್ವದ ಕಾಮಗಾರಿಗಳು ಆರಂಭಗೊಂಡಿವೆ ಎಂದು ತಿಳಿಸಿದರು.

ಕಳೆದ ಹಲವು ವರ್ಷಗಳಿಂದ ಹಣಕಾಸಿನ ಕೊರತೆ ಹಾಗೂ ತಾಂತ್ರಿಕ ಕಾರಣಗಳಿಂದ ಸ್ಥಗಿತಗೊಂಡಿದ್ದ ಬೆಂಡಿಗಾನಹಳ್ಳಿ ಸೇತುವೆ ನಿರ್ಮಾಣ ಕಾಮಗಾರಿಗೆ ಇದೀಗ 2 ಕೋಟಿ ರೂಪಾಯಿ ವೆಚ್ಚದಲ್ಲಿ ಮರುಚಾಲನೆ ನೀಡಲಾಗಿದೆ. ಆರಂಭದಲ್ಲಿ 50 ಲಕ್ಷ ರೂಪಾಯಿ ವೆಚ್ಚದ ಯೋಜನೆಯಾಗಿದ್ದ ಕಾರಣ ಕಾಮಗಾರಿ ಅರ್ಧಕ್ಕೆ ನಿಂತಿತ್ತು. ಬಳಿಕ ಅಧಿಕಾರಿಗಳೊಂದಿಗೆ ಸ್ಥಳ ಪರಿಶೀಲನೆ ನಡೆಸಿ ಸರ್ಕಾರದಿಂದ ಹೆಚ್ಚುವರಿ ಅನುದಾನ ಮಂಜೂರು ಮಾಡಿಸಲಾಗಿದ್ದು, ಮುಂದಿನ ಎರಡು ತಿಂಗಳೊಳಗೆ ಕಾಮಗಾರಿ ಪೂರ್ಣಗೊಳ್ಳುವ ನಿರೀಕ್ಷೆಯಿದೆ ಎಂದು ಹೇಳಿದರು.



ಇದೇ ಸಂದರ್ಭದಲ್ಲಿ ಕುಪ್ಪನಹಳ್ಳಿ ಭಾಗದಲ್ಲಿ ರೈತರ ಅನುಕೂಲಕ್ಕಾಗಿ 1 ಕೋಟಿ ರೂಪಾಯಿ ವೆಚ್ಚದಲ್ಲಿ ಕೃಷ್ಣೇಗೌಡನಕುಂಟೆ ಚೆಕ್ ಡ್ಯಾಂ ಹಾಗೂ ಕಾಲುವೆ ನಿರ್ಮಾಣ ಕಾಮಗಾರಿಗೂ ಚಾಲನೆ ನೀಡಲಾಯಿತು. ಒಂದೇ ದಿನದಲ್ಲಿ 3 ಕೋಟಿ ರೂಪಾಯಿ ವೆಚ್ಚದ ಅಭಿವೃದ್ಧಿ ಯೋಜನೆಗಳಿಗೆ ಚಾಲನೆ ನೀಡಿರುವುದು ಗ್ರಾಮೀಣ ಅಭಿವೃದ್ಧಿಗೆ ಹೊಸ ಚೈತನ್ಯ ತುಂಬಲಿದೆ ಎಂದು ಅಭಿಪ್ರಾಯಪಟ್ಟರು.

ಹುದುಕುಳ ಹಾಗೂ ಅಣಿಗಾನಹಳ್ಳಿ ಭಾಗಗಳಲ್ಲಿ ಸಣ್ಣ ನೀರಾವರಿ ಇಲಾಖೆಯಿಂದ ಕೆರೆಗಳ ಕೋಡಿ ನಿರ್ಮಾಣ ಮತ್ತು ಕಾಲುವೆಗಳ ಅಭಿವೃದ್ಧಿ ಕಾರ್ಯಗಳು ನಡೆಯುತ್ತಿವೆ. ಸಿದ್ದನಹಳ್ಳಿ ಗ್ರಾಮದ ಕೆರೆಯ ಅಭಿವೃದ್ಧಿಗೂ 2 ಕೋಟಿ ರೂಪಾಯಿ ಅನುದಾನದಲ್ಲಿ ಕಾಮಗಾರಿಗಳು ಪ್ರಗತಿಯಲ್ಲಿವೆ ಎಂದು ತಿಳಿಸಿದರು.

ದೇಶಿಹಳ್ಳಿವರೆಗೆ ದ್ವಿಪಥ ರಸ್ತೆ ಹಾಗೂ ಸಿಮೆಂಟ್ ರಸ್ತೆ ನಿರ್ಮಾಣ ಪೂರ್ಣಗೊಂಡಿದ್ದು, ಮುಂದಿನ ದಿನಗಳಲ್ಲಿ ರಸ್ತೆ ಅಗಲೀಕರಣ ಕಾರ್ಯವೂ ಕೈಗೊಳ್ಳಲಾಗುವುದು. ಸರ್ವೆ ಸಂಖ್ಯೆ 15ರ ವ್ಯಾಪ್ತಿಯ ಹಳ್ಳಿಡಾಬ ಸೇರಿದಂತೆ ರಸ್ತೆ ಬದಿಯ ಸಾರ್ವಜನಿಕ ಮತ್ತು ಸರ್ಕಾರಿ ಜಾಗಗಳ ಮೇಲಿನ ಒತ್ತುವರಿ ತೆರವುಗೊಳಿಸಲು ಕ್ರಮ ಕೈಗೊಳ್ಳಲಾಗುತ್ತಿದ್ದು, ನಂತರ ಈ ರಸ್ತೆಯನ್ನು ಮಾದರಿ ರಸ್ತೆಯಾಗಿ ಅಭಿವೃದ್ಧಿಪಡಿಸಲಾಗುವುದು ಎಂದು ಹೇಳಿದರು.

ಮರವಳ್ಳಿ ಹಾಗೂ ಹೊಸಕೋಟೆ ಭಾಗಗಳನ್ನು ಸಹ ಬಂಗಾರಪೇಟೆಯ ಮಾದರಿಯಲ್ಲಿ ಸುಂದರ ಮತ್ತು ಸುಸಜ್ಜಿತ ಪ್ರದೇಶಗಳಾಗಿ ಅಭಿವೃದ್ಧಿಪಡಿಸುವ ಗುರಿ ಹೊಂದಿದ್ದೇವೆ ಎಂದು ಶಾಸಕ ನಾರಾಯಣಸ್ವಾಮಿ ತಿಳಿಸಿದರು.

ಕಾರ್ಯಕ್ರಮದಲ್ಲಿ ಗ್ರಾಮ ಪಂಚಾಯಿತಿ ಮಾಜಿ ಅಧ್ಯಕ್ಷರು ಹಾಗೂ ಹಿರಿಯ ಮುಖಂಡರಾದ ಚನ್ನಾರೆಡ್ಡಿ, ನಾರಾಯಣಸ್ವಾಮಿ, ಮಂಜುನಾಥ್, ಕೃಷ್ಣಾರೆಡ್ಡಿ, ರಾಮಮೂರ್ತಿ, ಮುನೀಂದ್ರ, ವೆಂಕಟೇಶ್ ರೆಡ್ಡಿ, ಗೋಪಿ, ತಮ್ಮಣ್ಣ ಸೇರಿದಂತೆ ಇಲಾಖೆಯ ಅಧಿಕಾರಿಗಳು ಮತ್ತು ಗ್ರಾಮಸ್ಥರು ಉಪಸ್ಥಿತರಿದ್ದರು.

# 23ನೇ ಕಂತಿನ ಹಣ ಬಿಡುಗಡೆ; ಕರ್ನಾಟಕದ 41.54 ಲಕ್ಷ ರೈತರಿಗೆ ಲಭಿಸಲಿದೆ ನೆರವು

ಬೆಂಗಳೂರು

ಕೇಂದ್ರ ಸರ್ಕಾರದ ಮಹತ್ವಾಕಾಂಕ್ಷಿ ಯೋಜನೆಯಾದ ಪ್ರಧಾನ ಮಂತ್ರಿ ಕಿಸಾನ್ ಸಮ್ಮಾನ್ ನಿಧಿ(ಪಿಎಂ–ಕಿಸಾನ್) ಯೋಜನೆಯ 23ನೇ ಕಂತಿನ ಆರ್ಥಿಕ ನೆರವನ್ನು ಬಿಡುಗಡೆ ಮಾಡಲು ದಿನಾಂಕ ನಿಗದಿಯಾಗಿದೆ. ಪ್ರಧಾನ ಮಂತ್ರಿಗಳು 2026ನೇ ಜೂನ್ 20ರಂದು ಪಶ್ಚಿಮ ಬಂಗಾಳ ರಾಜ್ಯದ ತಾರಕೇಶ್ವರ್, ಹೂಗ್ಲಿಯಲ್ಲಿ ಸಂಜೆ 4 ಗಂಟೆಗೆ ಆಯೋಜಿಸಲಾಗಿರುವ ಕಾರ್ಯಕ್ರಮದಲ್ಲಿ ದೇಶದ ರೈತರ ಖಾತೆಗಳಿಗೆ ಅಧಿಕೃತವಾಗಿ ಹಣ ವರ್ಗಾವಣೆ ಮಾಡಲಿದ್ದಾರೆ. ಈ ವಿಶೇಷ ದಿನವನ್ನು "ಪಿ.ಎಂ. ಕಿಸಾನ್ ಉತ್ಸವ ದಿವಸ್" ಎಂದು ಆಚರಿಸಲಾಗುತ್ತಿದೆ.

ಈ ಯೋಜನೆಯಡಿ ಕರ್ನಾಟಕ ರಾಜ್ಯದ ಒಟ್ಟು 41,54,160 ಫಲಾನುಭವಿ ರೈತರಿಗೆ ಕೇಂದ್ರ ಸರ್ಕಾರದಿಂದ ಒಟ್ಟಾರೆ ರೂ. 830.832 ಕೋಟಿಗಳ ಆರ್ಥಿಕ ನೆರವು ನೇರ ನಗದು ವರ್ಗಾವಣೆ ಮೂಲಕ ಜಮೆಯಾಗಲಿದೆ.

ವಾರ್ಷಿಕ ನೆರವು: ಅರ್ಹ ರೈತ ಕುಟುಂಬಗಳಿಗೆ ಕೃಷಿ ಚಟುವಟಿಕೆಗಳ ನಿರ್ವಹಣೆ ಹಾಗೂ ಉತ್ತಮ ಇಳುವರಿ ಪಡೆಯಲು ನೆರವಾಗುವಂತೆ ವಾರ್ಷಿಕವಾಗಿ ಒಟ್ಟು 6,000 ರೂ.ಗಳ ಆರ್ಥಿಕ ಸಹಾಯ ನೀಡಲಾಗುತ್ತದೆ.

ಕಂತುಗಳ ವಿವರ: ಈ ಮೊತ್ತವನ್ನು ತಲಾ 2,000 ರೂ.ಗಳಂತೆ ಮೂರು ಸಮಾನ ಕಂತುಗಳಲ್ಲಿ ಪ್ರತಿ ನಾಲ್ಕು ತಿಂಗಳಿಗೊಮ್ಮೆ ರೈತರ ಖಾತೆಗೆ ಜಮೆ ಮಾಡಲಾಗುತ್ತದೆ.

ಅರ್ಹತೆ: ಕರ್ನಾಟಕದಲ್ಲಿ ಫೆಬ್ರವರಿ 2019 ರಿಂದ ಈ ಯೋಜನೆ ಜಾರಿಯಲ್ಲಿದ್ದು, ದಿನಾಂಕ: 01.02.2019ರ ಅನ್ವಯ ಸಾಗುವಳಿ ಭೂಮಿ ಹೊಂದಿರುವ ಅರ್ಹ ರೈತ ಕುಟುಂಬಗಳು (ಗಂಡ, ಹೆಂಡತಿ ಮತ್ತು ಅಪ್ರಾಪ್ತ ಮಕ್ಕಳು) ಇದರ ಪ್ರಯೋಜನ ಪಡೆಯುತ್ತಿದ್ದಾರೆ.

ಪ್ರಧಾನ ಮಂತ್ರಿಗಳ ಈ ನೇರ ನಗದು ವರ್ಗಾವಣೆ ಪ್ರಕ್ರಿಯೆಯಿಂದಾಗಿ ರಾಜ್ಯದ ಲಕ್ಷಾಂತರ ರೈತ ಕುಟುಂಬಗಳ ಕೃಷಿ ವೆಚ್ಚಕ್ಕೆ ಸಕಾಲದಲ್ಲಿ ಆರ್ಥಿಕ ಆಸರೆ ಸಿಕ್ಕಂತಾಗಲಿದೆ.

# ಸೇವೆಯಲ್ಲಿ ವ್ಯತ್ಯಯ, ಗ್ರಾಹಕರ ತೀವ್ರ ಆಕ್ರೋಶ

ವಿಜಯಪುರ

ದೇಶದಲ್ಲಿ ತಂತ್ರಜ್ಞಾನ ವ್ಯವಸ್ಥೆ ಅದ್ವಿತೀಯ ಸಾಧನೆ ಮಾಡುತ್ತಿದೆ ಎಂದು ಹೆಮ್ಮೆಯಿಂದ ಹೇಳಲಾಗುತ್ತಿದೆ. ಆದರೆ, ವಿಜಯಪುರ ಪಟ್ಟಣದಲ್ಲಿ ಮಾತ್ರ ಹಲವು ವರ್ಷಗಳಿಂದ ಪ್ರತಿ ಎರಡು–ಮೂರು ತಿಂಗಳಿಗೊಮ್ಮೆ ಬಿ.ಎಸ್.ಎನ್.ಎಲ್ ದೂರಸಂಪರ್ಕ ಸೇವೆಗಳು ದಿನಗಟ್ಟಲೆ ಸ್ಥಗಿತಗೊಳ್ಳುತ್ತಿವೆ. ಸರಿಪಡಿಸಬೇಕಾದ ಅಧಿಕಾರಿಗಳ ನಿರ್ಲಕ್ಷ್ಯ ಧೋರಣೆ, ಸರಕಾರಿ ಸಂಸ್ಥೆಯ ಅವ್ಯವಸ್ಥೆಗೆ ಕನ್ನಡಿ ಹಿಡಿದಂತಿದೆ ಎಂದು ಸ್ಥಳೀಯ ಗ್ರಾಹಕರು ತೀವ್ರ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಕಳೆದ ಎರಡು–ಮೂರು ದಿನಗಳಿಂದ ಪಟ್ಟಣದಲ್ಲಿ ಬಿ.ಎಸ್.ಎನ್.ಎಲ್ ನೆಟ್‌ವರ್ಕ್ ಸಂಪೂರ್ಣ ಕೈಕೊಟ್ಟಿದ್ದು, ನಾಲ್ಕೈದು ದಿನಗಳ ಕಾಲ ನಿರಂತರವಾಗಿ ಸಂಪರ್ಕ ಕಡಿತಗೊಳ್ಳುವುದು ಇಲ್ಲಿ ಸರ್ವೆ ಸಾಮಾನ್ಯವಾಗಿದೆ. ಇದರಿಂದ ಸಾರ್ವಜನಿಕರು ತೀವ್ರ ತೊಂದರೆ ಅನುಭವಿಸುತ್ತಿದ್ದಾರೆ. ಖಾಸಗಿ ಕಂಪನಿಗಳ ಪರ ಅಧಿಕಾರಿಗಳ ಹುನ್ನಾರ ಆರೋಪ:




ಜಿಯೋ, ಏರ್‌ಟೆಲ್‌ನಂತಹ ಯಾವುದೇ ಖಾಸಗಿ ನೆಟ್‌ವರ್ಕ್‌ಗಳಿಗೆ ಬಾರದ ತಾಂತ್ರಿಕ ತೊಂದರೆ, ಕೇವಲ ಬಿ.ಎಸ್.ಎನ್.ಎಲ್ ಸಂಸ್ಥೆಗೆ ಮಾತ್ರ ಪದೇ ಪದೇ ಏಕೆ ಎದುರಾಗುತ್ತದೆ, ಎಂದು ಗ್ರಾಹಕರು ನೇರವಾಗಿ ಪ್ರಶ್ನಿಸಿದ್ದಾರೆ. ನಿರಂತರವಾಗಿ ಕಾಡುವ ಈ ನೆಟ್‌ವರ್ಕ್ ಸಮಸ್ಯೆಯಿಂದ ಬೇಸತ್ತು, ಗ್ರಾಹಕರು ಬೇರೆ ಖಾಸಗಿ ನೆಟ್‌ವರ್ಕ್‌ಗಳಿಗೆ ಪೋರ್ಟ್ (ಮಾರ್ಪಾಡು) ಮಾಡಿಕೊಳ್ಳುವಂತೆ ಮಾಡುವುದೇ ಬಿ.ಎಸ್.ಎನ್.ಎಲ್ ಅಧಿಕಾರಿ ಹಾಗೂ ಸಿಬ್ಬಂದಿ ವರ್ಗದವರ ವ್ಯವಸ್ಥಿತ ಹುನ್ನಾರವಾಗಿದೆ ಎಂದು ಸಾರ್ವಜನಿಕರು ಗಂಭೀರವಾಗಿ ಆರೋಪಿಸಿದ್ದಾರೆ. ನಿರಂತರವಾಗಿ ಗ್ರಾಹಕರ ತಾಳ್ಮೆ ಪರೀಕ್ಷಿಸುವ ಮತ್ತು ಕಾಟ ಕೊಡುವ ಬದಲು ಬಿ.ಎಸ್.ಎನ್.ಎಲ್ ಕಂಪನಿಯನ್ನೇ ಶಾಶ್ವತವಾಗಿ ಮುಚ್ಚಿ, ಎಲ್ಲಾ ಗ್ರಾಹಕರನ್ನು ಖಾಸಗಿ ನೆಟ್‌ವರ್ಕ್‌ಗಳಿಗೆ ಅಧಿಕೃತವಾಗಿ ವರ್ಗಾವಣೆಗೊಳ್ಳಲು ಇಲಾಖೆಯೇ ಪ್ರಕಟಣೆ ಹೊರಡಿಸುವುದು ಒಳಿತು, ಎಂದು ಗ್ರಾಹಕರು ಮನನೊಂದು ನುಡಿದಿದ್ದಾರೆ.

# ವಿವಿಧ ತೋಟಗಾರಿಕೆ ಯೋಜನೆಯಡಿ ಸಹಾಯಧನ ಸೌಲಭ್ಯ

ತುಮಕೂರು

ತೋಟಗಾರಿಕೆ ಇಲಾಖೆ ವತಿಯಿಂದ 2026–27ನೇ ಸಾಲಿನ ರಾಷ್ಟ್ರೀಯ ತೋಟಗಾರಿಕೆ ಮಿಷನ್, ರಾಷ್ಟ್ರೀಯ ಕೃಷಿ ವಿಕಾಸ ಯೋಜನೆ, ತೋಟಗಾರಿಕೆಯಲ್ಲಿ ಯಾಂತ್ರೀಕರಣ ಯೋಜನೆಯಡಿ ತೋಟಗಾರಿಕೆ ರೈತರಿಗೆ ಹಾಗೂ ಉದ್ದಿಮೆದಾರರಿಗೆ ನೆರವು ನೀಡಲು ಅರ್ಜಿ ಅಹ್ವಾನಿಸಿದೆ ಎಂದು ಕೊರಟಗೆರೆ ತಾಲ್ಲೂಕು ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕ ರಾಮಾಂಜನಪ್ಪ ತಿಳಿಸಿದ್ದಾರೆ.

ಯೋಜನೆಯ ವಿವಿಧ ಕಾರ್ಯಕ್ರಮಗಳಡಿ ಹಣ್ಣಿನ ಬೆಳೆಗಳಾದ ಬಾಳೆ, ಮಾವು, ಪಪ್ಪಾಯ, ಬೆಣ್ಣೆ ಹಣ್ಣು, ಹಲಸು ಹಾಗೂ ದಾಳಿಂಬೆ ಹೊಸ ಪ್ರದೇಶ ವಿಸ್ತರಣೆ, ಅಪ್ರಧಾನ ಹಣ್ಣಿನ ಬೆಳೆಗಳಾದ ಡ್ರ್ಯಾಗನ್ ಹಣ್ಣು, ಬೆಣ್ಣೆ ಹಣ್ಣು, ಹಲಸು, ಹುಣಸೆ, ಹೊಸಪ್ರದೇಶ ವಿಸ್ತರಣೆ. ಹೈಬ್ರಿಡ್ ತರಕಾರಿ ಬೆಳೆಗಳ ಹೊಸಪ್ರದೇಶ ವಿಸ್ತರಣೆ, ಗೋಡಂಬಿ, ಕೋಕೊ, ಕಾಳುಮೆಣಸು ಬೆಳೆಗಳ ಹೊಸಪ್ರದೇಶ ವಿಸ್ತರಣೆ, ಅಣಬೆ ಉತ್ಪಾದನ ಘಟಕಾ, ಹಸಿರುಮನೆ, ನೆರಳುಪರದೆ ಹಾಗೂ ವೈಯಕ್ತಿಕ ನೀರು ಸಂಗ್ರಹಣಾ ಘಟಕಗಳ ನಿರ್ಮಾಣಕ್ಕೆ, ಸಂರಕ್ಷಿತ ಬೇಸಾಯ ಕಾರ್ಯಕ್ರಮದಡಿ ಪ್ಲಾಸ್ಟಿಕ್ ಹೊದಿಕೆ, ಪಕ್ಷಿನಿರೋಧಕ ಬಲೆ ಅಳವಡಿಕೆ, ಸಮಗ್ರಕೀಟ, ರೋಗ ಮತ್ತು ಪೋಷಕಾಂಶಗಳ ನಿರ್ವಹಣೆ, ಕೊಯ್ಲೋತ್ತರ ನಿರ್ವಹಣೆಗಾಗಿ, ಫಾರಂಗೇಟ್ ಪ್ಯಾಕ್‌ಹೌಸ್, ಎರೆಹುಳು ಗೊಬ್ಬರ ಉತ್ಪಾದನಾ ಘಟಕ ಕಡಿಮೆ ವೆಚ್ಚದ ಈರುಳ್ಳಿ ಶೇಖರಣಾ ಘಟಕ, ಮೊಬೈಲ್ ವೆಂಡಿಂಗ್ ಕಾರ್ಟ್ ಖರೀದಿಸಲು, ನೆರವು ನೀಡಲಾಗುವುದು.

ಹಳೆ ತೋಟಗಳ ಪುನಃಶ್ಚೇತನ, ಜೇನುಸಾಕಾಣಿಕೆ, ಮಿನಿಟ್ರಾಕ್ಟರ್‌ಗಳಿಗೆ ಸಹಾಯಧನ ನೀಡಲಾಗುವುದು. ಮಾರ್ಗಸೂಚಿಯನ್ವಯ ವಿವಿಧ ಕಾರ್ಯಕ್ರಮಗಳನ್ನಾಧರಿಸಿ ಶೇ.25 ರಿಂದ 50ರಷ್ಟು ಸಹಾಯಧನ ನೀಡಲಾಗುವುದು.

ಆಸಕ್ತ ರೈತರು ಹಾಗೂ ಉದ್ದಿಮೆದಾರರು ಅರ್ಜಿಯೊಂದಿಗೆ ಪಹಣಿ, ಬೆಳೆ ದೃಡೀಕರಣ, ಚೆಕ್ಕುಬಂದಿ, ಆಧಾರ್ ಪ್ರತಿ, ಬ್ಯಾಂಕ್ ಪಾಸ್ ಪುಸ್ತಕದ ಪ್ರತಿ, ಜಾತಿ ಪ್ರಮಾಣಪತ್ರ (ಪ.ಜಾತಿ ಮತ್ತು ಪ.ಪಂಗಡ ರೈತರಿಗೆ), ಜಂಟಿ ಖಾತೆ ಇದ್ದಲ್ಲಿ ಒಪ್ಪಿಗೆ ಪ್ರಮಾಣಪತ್ರ, ಖಾತೆದಾರರು ಮರಣ ಹೊಂದಿದ್ದಲ್ಲಿ ಮರಣ ಪ್ರಮಾಣ ಪತ್ರ ಮತ್ತು ಇತರೆ ದಾಖಲಾತಿಗಳನ್ನು ಜೂನ್ 25ರೊಳಗಾಗಿ ಆಯಾ ತಾಲ್ಲೂಕು ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರ ಕಚೇರಿಗೆ ಸಲ್ಲಿಸಬಹುದು.

ಹೆಚ್ಚಿನ ಮಾಹಿತಿಗಾಗಿ ಕಸಬಾ ರೈತ ಸಂಪರ್ಕ ಕೇಂದ್ರದ ಸಹಾಯಕ ತೋಟಗಾರಿಕೆ ಅಧಿಕಾರಿ ತ್ರಿವೇಣಿ(ಮೊ.ಸಂ.8453650483), ಶೃತಿ ಸಿ.ಎನ್ ದುರ್ಗ ಹಾಗೂ ಕೋಳಾಲ–9449245960, ಕೆಂಪೇಗೌಡ, ಹೊಳವನಹಳ್ಳಿ–9986456750, ಕೊರಟಗೆರೆ ತಾಲ್ಲೂಕು ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕ ರಾಮಾಂಜನಪ್ಪ (9448001644) ಅವರನ್ನು ಸಂಪರ್ಕಿಸಬೇಕೆಂದು ಅವರು ತಿಳಿಸಿದ್ದಾರೆ.

# ಶ್ರೀ ಜಡೆ ಮುನೇಶ್ವರ ಸ್ವಾಮಿಯ 9ನೇ ವಾರ್ಷಿಕೋತ್ಸವ

ಕೋಲಾರ

ನಗರದ ಆರ್.ಟಿ.ಓ. ಕಛೇರಿ ಪಕ್ಕ ಧರ್ಮರಾಯನಗರದಲ್ಲಿರುವ ಶ್ರೀ ಜಡೆ ಮುನೇಶ್ವರ ಸ್ವಾಮಿಯ 9ನೇ ವಾರ್ಷಿಕೋತ್ಸವ ಸಮಾರಂಭವನ್ನು

ದಿನಾಂಕ : 21–06–2026ನೇ ಭಾನುವಾರ ಈ ಶುಭದಿನ ಬೆಳಿಗ್ಗೆ 11–00 ಗಂಟೆಗೆ ಸ್ವಾಮಿಗೆ ಅಭಿಷೇಕ, ಮಹಾಮಂಗಳಾರತಿ ಮತ್ತು ಪ್ರಸಾದ ವಿನಿಯೋಗವಿರುತ್ತದೆ.

ಆದ್ದರಿಂದ ಭಕ್ತಾಧಿಗಳು ಸಕಾಲಕ್ಕೆ ಆಗಮಿಸಿ ಸ್ವಾಮಿಯ ದಿವ್ಯದರ್ಶನವನ್ನು ಪಡೆದು ತಮ್ಮ ಇಷ್ಟಾರ್ಥಗಳನ್ನು ನೆರವೇರಿಸುವಂತೆ ಪ್ರಾರ್ಥನೆ ಸಲ್ಲಿಸಿ ತನು–ಮನ ಧನವನ್ನು ಅರ್ಪಿಸಿ ತೀರ್ಥ ಪ್ರಸಾದವನ್ನು ಸ್ವೀಕರಿಸಬೇಕಾಗಿ ಪೂಜಾರಿ ವೆಂಕಟಾಚಲಪತಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕೆ.ಜಿ.ಎಫ್: ಗೂಂಡಾ ಕಾಯ್ದೆಯಡಿ ಕುಖ್ಯಾತ ರೌಡಿ ಬಂಧನ

ಕೆಜಿಎಫ್

ಕೆ.ಜಿ.ಎಫ್ ಪೊಲೀಸ್ ಜಿಲ್ಲೆಯ ಆಂಡ್ರಸನ್‌ಪೇಟೆ ಪೊಲೀಸ್ ಠಾಣೆಯ ರೌಡಿ ಆಸಾಮಿ ವೈ.ವಿಕ್ರಮ್ @ ಕಾಣಿಕ್ ರಾಜ್ ಬಿನ್ ಲೇಟ್ ಯಾಕೂಬ್, 39 ವರ್ಷ, ವಾಸ: ಲೂರ್ದನಗರ, ಆಂಡ್ರಸನ್‌ಪೇಟೆ, ಕೆ.ಜಿ.ಎಫ್ ತಾಲ್ಲೂಕು ಎಂಬಾತನು ಕಾನೂನು ಬಾಹಿರ ಚಟುವಟಿಕೆಗಳಲ್ಲಿ ಭಾಗಿಯಾಗುತ್ತಾ ಆಂಡ್ರಸನ್‌ಪೇಟೆ ಪೊಲೀಸ್ ಠಾಣೆ ಸೇರಿದಂತೆ ವಿವಿಧ ಪೊಲೀಸ್ ಠಾಣೆಗಳಲ್ಲಿ ಈತನ ವಿರುದ್ದ 01 ಕೊಲೆ, 03 ಕೊಲೆ ಪ್ರಯತ್ನ, 02 ಹಲ್ಲೆ, 01 ಮನೆ ಕನ್ನ ಕಳುವು, 01 ಪ್ರಿಸನರ್ಸ್ ಆಕ್ಟ್, 01 ಕೆಪಿ.ಆಕ್ಟ್, 03 ಭದ್ರತಾ ಕಾಯ್ದೆ ಪ್ರಕರಣ ಸೇರಿದಂತೆ ಒಟ್ಟು 12 ಪ್ರಕರಣಗಳು ದಾಖಲಾಗಿದ್ದು, ಘನ ನ್ಯಾಯಾಲಯದಿಂದ ಜಾಮೀನು ಪಡೆದು ಪುನಃ ಕಾನೂನು ಬಾಹಿರ ಕೃತ್ಯಗಳಲ್ಲಿ ಭಾಗಿಯಾಗುತ್ತಿದ್ದವನ ವಿರುದ್ದ ಆಂಡ್ರಸನ್‌ಪೇಟೆ ಪೊಲೀಸ್ ಠಾಣೆಯ ಪಿ.ಎಸ್.ಐ ಹೊನ್ನೆಗೌಡ.

ಪಿ.ಎಂ ರವರು ಗೂಂಡಾ ಕಾಯ್ದೆಯಡಿಯಲ್ಲಿ ಕ್ರಮ ಕೈಗೊಳ್ಳಲು ಕೋರಿ ಪ್ರಸ್ತಾವನೆಯನ್ನು ಕೋಲಾರ ಜಿಲ್ಲೆಯ ಜಿಲ್ಲಾಧಿಕಾರಿಗಳಿಗೆ ಸಲ್ಲಿಸಿದ್ದು, ಜಿಲ್ಲಾಧಿಕಾರಿಗಳು ಜೂ. 19 ರಂದು ಗೂಂಡಾ ಕಾಯ್ದೆಯಡಿಯಲ್ಲಿ ಬಂಧನದ ಆಜ್ಞೆಯನ್ನು ಹೊರಡಿಸಿ ಬಳ್ಳಾರಿ ಕೇಂದ್ರ ಕಾರಾಗೃಹದಲ್ಲಿಡಲು ಆದೇಶಿಸಿರುತ್ತಾರೆ. ಅದರಂತೆ ಆಂಡ್ರಸನ್‌ಪೇಟೆ ಪಿ.ಎಸ್.ಐ ಮತ್ತು ಸಿಬ್ಬಂದಿಯವರು ವೈ.ವಿಕ್ರಮ್ @ ಕಾಣಿಕ್ ರಾಜ್ ಈತನನ್ನು ಜೂ. 19 ರಂದು ಗೂಂಡಾ ಕಾಯ್ದೆಯಡಿ ಬಂಧಿಸಿ ಬಳ್ಳಾರಿ ಜಿಲ್ಲೆಯ ಕೇಂದ್ರ ಕಾರಾಗೃಹ ರವರ ವಶಕ್ಕೆ ಒಪ್ಪಿಸಿರುತ್ತಾರೆ.

ಪೊಲೀಸ್ ಉಪಾಧೀಕ್ಷಕರಾದ ವಿ.ಲಕ್ಷ್ಮಯ್ಯ ಮತ್ತು ರಾಬರ್ಟ್‌ಸನ್‌ಪೇಟೆ ವೃತ್ತ ನಿರೀಕ್ಷಕರಾದ ಅನಿಲ್ ಕುಮಾರ್. ಎಂ.ಎಸ್ ರವರ ಮಾರ್ಗದರ್ಶನದಲ್ಲಿ ಗೂಂಡಾ ಕಾಯ್ದೆಯಡಿಯಲ್ಲಿ ರೌಡಿ ಆಸಾಮಿಯನ್ನು ಬಂಧಿಸುವಲ್ಲಿ ಪಿ.ಎಸ್.ಐಗಳಾದ ಹೊನ್ನೆಗೌಡ. ಪಿ.ಎಂ, ಚಂದ್ರಶೇಖರ್. ಎಂ, ಮನ್ಮಥ (ಪ್ರೊ), ಎ.ಎಸ್.ಐ ಚಲಪತಿ, ಸಿಬ್ಬಂದಿಗಳಾದ ಶಶಿಕುಮಾರ್, ಲೋಕೇಶ್, ವೇಣುಗೋಪಾಲ್, ರಾಜೇಶ್, ರವಿಕುಮಾರ್, ವೆಂಕಟೇಶ್, ಮಂಜುನಾಥ, ಚಾಲಕರಾದ ಸತ್ಯಪ್ರಕಾಶ್ ರವರುಗಳನ್ನೊಳಗೊಂಡ ತಂಡವು ಯಶಸ್ವಿಯಾಗಿದ್ದು, ಇವರ ಉತ್ತಮ ಕಾರ್ಯವನ್ನು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಶಿವಾಂಶು ರಜಪೂತ್ ರವರು ಶ್ಲಾಘಿಸಿದ್ದಾರೆ.

# ಸೋಮನಾಯಕನಪಟ್ಟಿ ರೈಲ್ವೆ ವಿಭಾಗದಲ್ಲಿ ಪರಿಶೀಲನೆ



ಬೆಂಗಳೂರು

ನೈಋತ್ಯ ರೈಲ್ವೆಯ ಪ್ರಧಾನ ವ್ಯವಸ್ಥಾಪಕರಾದ ಪಿ. ಅನಂತ್ ಅವರು ಜೂನ್ 18ರಂದು ಕೆಎಸ್‌ಆರ್ ಬೆಂಗಳೂರು–ಸೋಮನಾಯಕನಪಟ್ಟಿ ರೈಲು ವಿಭಾಗದಲ್ಲಿ ಸಮಗ್ರ ಪರಿಶೀಲನೆ ನಡೆಸಿ ಸುರಕ್ಷತೆ, ಪ್ರಯಾಣಿಕರ ಸೌಲಭ್ಯಗಳು ಹಾಗೂ ಅಭಿವೃದ್ಧಿ ಕಾಮಗಾರಿಗಳ ಪ್ರಗತಿಯನ್ನು ಅವಲೋಕಿಸಿದರು.

ಈ ಸಂದರ್ಭದಲ್ಲಿ ಅವರು ವಿಂಡೋ ಟ್ರೇಲಿಂಗ್ ತಪಾಸಣೆ ನಡೆಸಿ ಮಾರ್ಗದ ವಿವಿಧ ಸುರಕ್ಷತಾ ಹಾಗೂ ಕಾರ್ಯಾಚರಣಾ ಅಂಶಗಳನ್ನು ಪರಿಶೀಲಿಸಿದರು.

ಕುಪ್ಪಂ ರೈಲು ನಿಲ್ದಾಣದಲ್ಲಿ ಅಮೃತ ಭಾರತ ನಿಲ್ದಾಣ ಯೋಜನೆಯಡಿ ನಡೆಯುತ್ತಿರುವ ಪುನರಾಭಿವೃದ್ಧಿ ಕಾಮಗಾರಿಗಳನ್ನು ಪರಿಶೀಲಿಸಿದ ಪಿ. ಅನಂತ್, ನಿಲ್ದಾಣದ ಆವರಣ, ಆಧುನೀಕರಣ ಕಾರ್ಯಗಳು, ವಾಹನ ನಿಲುಗಡೆ ವ್ಯವಸ್ಥೆ ಹಾಗೂ ಸಿಬ್ಬಂದಿ ವಸತಿಗೃಹಗಳ ಸ್ಥಿತಿಗತಿಗಳನ್ನು ಅವಲೋಕಿಸಿದರು.

ಭವಿಷ್ಯದ ಪ್ರಯಾಣಿಕರ ಅಗತ್ಯಗಳು ಹಾಗೂ ಹೆಚ್ಚುತ್ತಿರುವ ವಾಹನಗಳ ಸಂಖ್ಯೆಯನ್ನು ಗಮನದಲ್ಲಿಟ್ಟುಕೊಂಡು ವಾಹನ ನಿಲುಗಡೆ ಸಾಮರ್ಥ್ಯವನ್ನು ವಿಸ್ತರಿಸುವಂತೆ ಸಂಬಂಧಿತ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ನಂತರ ಬಂಗಾರಪೇಟೆ ರೈಲು ನಿಲ್ದಾಣಕ್ಕೆ ಭೇಟಿ ನೀಡಿದ ಅವರು, ಹೊಸದಾಗಿ ನಿರ್ಮಿಸಲಾಗಿರುವ ಟಿಕೆಟ್ ಕೌಂಟರ್ ಕಟ್ಟಡವನ್ನು ಪರಿಶೀಲಿಸಿದರು. ಅಮೃತ ಭಾರತ ನಿಲ್ದಾಣ ಯೋಜನೆಯಡಿ ಕೈಗೆತ್ತಿಕೊಳ್ಳಲಾಗಿರುವ ವಿವಿಧ ಪ್ರಯಾಣಿಕರ ಸೌಲಭ್ಯಗಳ ಅಭಿವೃದ್ಧಿ ಕಾಮಗಾರಿಗಳನ್ನು ಅವಲೋಕಿಸಿದರು.

ಪ್ರಯಾಣಿಕರ ಅನುಕೂಲಕ್ಕಾಗಿ ಅಗತ್ಯವಿರುವ ಸ್ಥಳಗಳಲ್ಲಿ ಚಲಿಸುವ ಮೆಟ್ಟಿಲುಗಳ ವ್ಯವಸ್ಥೆ ಕಲ್ಪಿಸುವಂತೆ ಅಧಿಕಾರಿಗಳಿಗೆ ಸಲಹೆ ನೀಡಿದರು. ನಿಲ್ದಾಣದ ಆವರಣ ಹಾಗೂ ನಡೆಯುತ್ತಿರುವ ಅಭಿವೃದ್ಧಿ ಕಾಮಗಾರಿಗಳ ಗುಣಮಟ್ಟ ಮತ್ತು ಪ್ರಗತಿಯನ್ನೂ ಪರಿಶೀಲಿಸಿದರು.

ಬಳಿಕ ವೈಟ್‌ಫೀಲ್ಡ್‌ನಲ್ಲಿರುವ ಉಪಗ್ರಹ ಸರಕು ಸಾಗಣೆ ಕೇಂದ್ರವನ್ನು ಪರಿಶೀಲಿಸಿ, ಸರಕು ಸಾಗಣೆ ಚಟುವಟಿಕೆಗಳು ಹಾಗೂ ಮೂಲಸೌಕರ್ಯಗಳ ಬಗ್ಗೆ ಅಧಿಕಾರಿಗಳೊಂದಿಗೆ ಚರ್ಚಿಸಿದರು.

ಪರಿಶೀಲನಾ ವೇಳೆ ಬೆಂಗಳೂರು ವಿಭಾಗದ ಹೆಚ್ಚುವರಿ ವಿಭಾಗೀಯ ರೈಲ್ವೆ ವ್ಯವಸ್ಥಾಪಕರಾದ ಪರೀಕ್ಷಿತ್ ಮೋಹನ್‌ಪುರಿಯಾ, ಗತಿ ಶಕ್ತಿ ಘಟಕದ ಮುಖ್ಯ ಯೋಜನಾ ವ್ಯವಸ್ಥಾಪಕರಾದ ಗುಲ್ ಅಶ್ಫಾಕ್ ಮೊಹಮ್ಮದ್ ಹಾಗೂ ಇತರ ಹಿರಿಯ ರೈಲ್ವೆ ಅಧಿಕಾರಿಗಳು ಉಪಸ್ಥಿತರಿದ್ದರು.

# ರಸಗೊಬ್ಬರ ಕುಂದು ಕೊರತೆಗೆ ಸಹಾಯವಾಣಿ ಸ್ಥಾಪನೆ

ಕೋಲಾರ

ರಸಗೊಬ್ಬರ ಕುಂದುಕೊರತೆಗೆ ಸಂಭಂದಿಸಿ ತಾಲ್ಲೂಕು ಮಟ್ಟದಲ್ಲಿ ಸ್ಥಾಪಿಸಲಾಗಿರುವ ಸಹಾಯವಾಣಿ ಕೇಂದ್ರಗಳನ್ನು ಸ್ಥಾಪಿಸಲಾಗಿದೆ. ವಿವಿರ ಈ ಕೆಳಕಂಡಂತಿದೆ.

ಕೋಲಾರ ತಾಲ್ಲೂಕಿನ ಸಹಾಯಕ ಕೃಷಿ ನಿರ್ದೇಶಕ ಕೆ.ಸಿ ಮಂಜುನಾಥ ಮೊ.ಸಂ. 8277932028, ಸಹಾಯಕ ಕೃಷಿ ನಿರ್ದೇಶಕರ ಕಛೇರಿಯ ತಾಂತ್ರಿಕ ಅಧಿಕಾರಿ ರಾಘವೇಂದ್ರ ಮೊ.ಸಂ. 9380070145, ಮಾಲೂರು ತಾಲ್ಲೂಕಿನ ಸಹಾಯಕ ಕೃಷಿ ನಿರ್ದೇಶಕರು ಚಂದ್ರಪ್ಪ ಬಿ ಪಿ ಮೊ.ಸಂ. 8277932058, ಸಹಾಯಕ ಕೃಷಿ ನಿರ್ದೇಶಕರ ಕಛೇರಿಯ ತಾಂತ್ರಿಕ ಅಧಿಕಾರಿ ಅನುಷ ಮೊ.ಸಂ. 8277932016, ಬಂಗಾರಪೇಟೆ ತಾಲ್ಲೂಕಿನ ಸಹಾಯಕ ಕೃಷಿ ನಿರ್ದೇಶಕ ಪ್ರಮೋದ್ ಬಾಬು ಮೊ.ಸಂ. 9945830775, ಸಹಾಯಕ ಕೃಷಿ ನಿರ್ದೇಶಕರ ಕಛೇರಿಯ ತಾಂತ್ರಿಕ ಅಧಿಕಾರಿ ಜ್ಯೋತಿ ಮೊ.ಸಂ. 8277932029, ಮುಳಬಾಗಿಲು ತಾಲ್ಲೂಕಿನ ಸಹಾಯಕ ಕೃಷಿ ನಿರ್ದೇಶಕ ಪ್ರಮೋದ್ ಬಾಬು ಮೊ.ಸಂ. 9945830775, ಸಹಾಯಕ ಕೃಷಿ ನಿರ್ದೇಶಕರ ಕಛೇರಿಯ ತಾಂತ್ರಿಕ ಅಧಿಕಾರಿ ಶುಭಾ ಮೊ.ಸಂ. 8277932054, ಶ್ರೀನಿವಾಸಪುರ ತಾಲ್ಲೂಕಿನ ಸಹಾಯಕ ಕೃಷಿ ನಿರ್ದೇಶಕ ಮಹೇಶ್ ಬಾಬು ಮೊ.ಸಂ.8277927007, ಸಹಾಯಕ ಕೃಷಿ ನಿರ್ದೇಶಕರ ಕಛೇರಿಯ ತಾಂತ್ರಿಕ ಅಧಿಕಾರಿ ಈಶ್ವರಪ್ಪ ಮೊ.ಸಂ.–8884003074, ಕೋಲಾರ ಜಿಲ್ಲೆಯ ಜಂಟಿ ಕೃಷಿ ನಿರ್ದೇಶಕರ ಕಛೇರಿಯ ಸಹಾಯಕ ಕೃಷಿ ನಿರ್ದೇಶಕ ಮುರಳೀಧರ ಮೊ.ಸಂ.8277932005, ತಾಂತ್ರಿಕ ಅಧಿಕಾರಿ ಸಂಪತ್‌ಕುಮಾರ್ ಎಂ ಮೊ.ಸಂ.8277932031 ಹಾಗೂ ಹರೀಶ್.ವೈ ಮೊ.ಸಂ. 8277927071 ಯನ್ನು ಸಂಪರ್ಕಿಸಬಹುದೆಂದು ಜಂಟಿ ಕೃಷಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಪಿ.ಎಂ ಫಸಲ್ ಭಿಮಾ ಯೋಜನೆ ನೋಂದಣಿಗೆ ಮನವಿ

ಕೋಲಾರ

ಜಿಲ್ಲೆಯಲ್ಲಿ ಕರ್ನಾಟಕ ರೈತ ಸುರಕ್ಷಾ ಪ್ರಧಾನ ಮಂತ್ರಿ ಫಸಲ್ ಭೀಮಾ ಯೋಜನೆಯನ್ನು 2026ರ ಮುಂಗಾರು ಹಂಗಾಮಿನಲ್ಲಿ ಜಿಲ್ಲೆಯಲ್ಲಿ ವಿವಿಧ ಬೆಳೆಗಳಿಗೆ ಬೆಳೆ ವಿಮೆ ಪ್ರಸ್ತಾವನೆಗಳನ್ನು ಸಲ್ಲಿಸಲು ರೈತರು ಅಂತಿಮ ದಿನಾಂಕದೊಳಗೆ ಪ್ರಸ್ತಾವನೆಗಳನ್ನು ತಮ್ಮ ಸೇವಾ ಕ್ಷೇತ್ರದ ಬ್ಯಾಂಕ್/ಗ್ರಾಮ–ಒನ್/ಸಿ.ಎಸ್.ಸಿ ಕೇಂದ್ರಗಳಲ್ಲಿ ಸಲ್ಲಿಸಿ ನೋಂದಣಿ ಮಾಡಿಕೊಳ್ಳಬಹುದು.

ರೈತರು ನೋಂದಣಿಗಾಗಿ ಕಡ್ಡಾಯವಾಗಿ ಹೊಂದಿರಬೇಕು. ರೈತರು ಪಾವತಿಸಬೇಕಾದ ಪ್ರತಿ ಎಕರೆಗೆ ಪ್ರೀಮಿಯಂ ಮೊತ್ತ 403.89–ರಾಗಿ(ಮಳೆಯಾಶ್ರಿತ), 471.88–ರಾಗಿ(ನೀರಾವರಿ), 879.01 –ಭತ್ತ (ನೀರಾವರಿ) ಬೆಳೆಗಳಿಗೆ ಆಗಸ್ಟ್ 14ರ ವರೆಗೆ ಹಾಗೂ 529.35–ನೆಲಗಡಲೆ, 466.21 ತೊಗರಿ ಬೆಳೆಗಳಿಗೆ ಜುಲೈ 31 ರೊಳಗೆ ನೋಂದಣಿಮಾಡಿಸಿಕೊಳ್ಳಬೇಕು.

ಹೆಚ್ಚಿನ ಮಾಹಿತಿಗಾಗಿ ಹತ್ತಿರದ ರೈತ ಸಂಪರ್ಕ ಕೇಂದ್ರ / ತಾಲ್ಲೂಕು ಸಹಾಯಕ ಕೃಷಿ ನಿರ್ದೇಶಕರು ಕಛೇರಿಯನ್ನು ಸಂಪರ್ಕಿಸುವುದು ಹಾಗೂ ಈ ಸದಾವಕಾಶವನ್ನು ಜಿಲ್ಲೆಯ ರೈತರು ಸದುಪಯೋಗ ಪಡಿಸಿಕೊಂಡು ಹೆಚ್ಚಿನ ಸಂಖ್ಯೆಯಲ್ಲಿ ನೊಂದಾಯಿಸಿಕೊಳ್ಳಬೇಕೆಂದು ಜಂಟಿ ಕೃಷಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸಾಮೂಹಿಕ ವಿವಾಹ, ಜನ ಜಾಗೃತಿ ಧರ್ಮ ಸಮಾರಂಭ

ತುಮಕೂರು

ಕೊರಟಗೆರೆ ತಾಲ್ಲೂಕು ಸಿದ್ಧರಬೆಟ್ಟ ಬಾಳೆಹೊನ್ನುರು ಖಾಸಾ ಶಾಖಾ ಮಠದ 20ನೇ ವಾರ್ಷಿಕೋತ್ಸವದ ಅಂಗವಾಗಿ ಈ ತಿಂಗಳ 21ರಂದು ಸಾಮೂಹಿಕ ವಿವಾಹ, ಜನ ಜಾಗೃತಿ ಧರ್ಮ ಸಮಾರಂಭದ ಜೊತೆಗೆ ವಿವಿಧ ಸಮಾಜಸೇವಾ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ ಎಂದು ಶ್ರೀಮಠದ ವೀರಭದ್ರ ಶಿವಾಚಾರ್ಯ ಸ್ವಾಮೀಜಿ ಹೇಳಿದರು.

ಶುಕ್ರವಾರ ನಗರದ ವೀರಶೈವ ಕಲ್ಯಾಣ ಮಂಟಪ ಸಭಾಂಗಣದಲ್ಲಿ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಸ್ವಾಮೀಜಿ, ವಾರ್ಷಿಕೋತ್ಸವದ ಪ್ರಯುಕ್ತ ಜಗದ್ಗುರು ರೇಣುಕಾಚಾರ್ಯರ, ಜಗಜ್ಯೋತಿ ಬಸವೇಶ್ವರರ ಜಯಂತ್ಯುತ್ಸವ ಆಯೋಜಿಸಲಾಗಿದೆ. ಸಾಮೂಹಿಕ ವಿವಾಹದಲ್ಲಿ ಹಸಮಣೆ ಏರಲು 20 ಜೋಡಿಗಳು ಹೆಸರು ನೋಂದಾಯಿಸಿಕೊಂಡಿದ್ದಾರೆ ಎಂದರು.

20ರಂದು ಬೆಳಿಗ್ಗೆ ಗಂಗಾಪೂಜೆಯೊಂದಿಗೆ ವಿವಿಧ ಧಾರ್ಮಿಕ ಆಚರಣೆ, ವಿಶೇಷ ಪೂಜೆ ನೆರವೇರಲಿದೆ. ನಂತರ ಕ್ಷೇತ್ರನಾಥ ಸಿದ್ಧೇಶ್ವರ ಸ್ವಾಮಿ, ಮಹಾಗಣಪತಿ, ರೇಣುಕಾಚಾರ್ಯರು, ವೀರಭದ್ರಸ್ವಾಮಿಗೆ ಮಹಾರುದ್ರಾಭಿಷೇಕ, ಬಿಲ್ವಾರ್ಚನೆ ಹಮ್ಮಿಕೊಳ್ಳಲಾಗಿದೆ. ಚಿಕ್ಕತೊಟ್ಲುಕೆರೆ ಅಟವಿ ಮಠದ ಅಟವಿ ಶಿವಲಿಂಗ ಸ್ವಾಮೀಜಿ ಪುಸ್ತಕ ದಾಸೋಹ ಉದ್ಘಾಟಿಸುವರು. ನಂತರ ಉಚಿತ ಸಾಮೂಹಿಕ ದೀಕ್ಷಾ ಸಮಾರಂಭ ನಡೆಯಲಿದೆ ಎಂದು ಹೇಳಿದರು.

ಬೆಳಿಗ್ಗೆ 10 ಗಂಟೆಗೆ ರಂಭಾಪುರಿ ಪೀಠದ ಜಗದ್ಗುರು ಪಸನ್ನ ರೇಣುಕ ಡಾ. ಸೋಮೇಶ್ವರ ರಾಜದೇಶಿಕೇಂದ್ರ ಶಿವಾಚಾರ್ಯರ ದಿವ್ಯಸಾನಿಧ್ಯದಲ್ಲಿ ಜನ ಜಾಗೃತಿ ಧರ್ಮ ಸಮಾರಂಭ ನಡೆಯಲಿದೆ. ವೀರಭದ್ರ ಶಿವಾಚಾರ್ಯ ಸ್ವಾಮೀಜಿಗಳ ನೇತೃತ್ವದಲ್ಲಿ ಎಡೆಯೂರು ಮಠದ ರೇಣುಕಾ ಶಿವಾಚಾರ್ಯ ಸ್ವಾಮೀಜಿ, ಎಲೆರಾಂಪುರ ಮಠದ ಡಾ.ಹನುಮಂತನಾಥ ಸ್ವಾಮೀಜಿ ಸೇರಿದಂತೆ ವಿವಿಧ ಮಠಾಧೀಶರು ಭಾಗವಹಿಸುವರು.

ಕೇಂದ್ರ ಸಚಿವ ವಿ. ಸೋಮಣ್ಣ ಕಾರ್ಯಕ್ರಮ ಉದ್ಘಾಟಿಸುವರು. ಈ ವೇಳೆ ಧರ್ಮಸ್ಥಳದ ಧರ್ಮಾಧಿಕಾರಿ ಡಾ.ವೀರೇಂದ್ರ ಹೆಗ್ಗಡೆಯವರಿಗೆ ಉಪ ಮುಖ್ಯಮಂತ್ರಿ ಡಾ.ಜಿ.ಪರಮೇಶ್ವರ್ ಸಿದ್ಧಶ್ರೀ ಪ್ರಶಸ್ತಿ ಪ್ರದಾನ ಮಾಡುವರು. ಮಾಜಿ ಸಚಿವ ಕೆ.ಎನ್. ರಾಜಣ್ಣ ಸಂಸ್ಕೃತ ಪಾಠಶಾಲಾ ಕೊಠಡಿ ಉದ್ಘಾಟಿಸುವರು. ಗೌರಿಬಿದನೂರು ಶಾಸಕ ಪುಟ್ಟಸ್ವಾಮಿಗೌಡರು ಸಾಮೂಹಿಕ ವಿವಾಹದಲ್ಲಿ ಮಾಂಗಲ್ಯ ವಿತರಣೆ ಮಾಡುವರು. ಶಾಸಕ ಟಿ.ಬಿ. ಜಯಚಂದ್ರ ಮೂಗುತಿ ವಿತರಿಸುವರು. ಶಾಸಕ ಜಿ.ಬಿ. ಜ್ಯೋತಿಗಣೇಶ್ ರೈತರಿಗೆ ಸಸಿ ವಿತರಣೆ ಮಾಡುವರು ಎಂದು ವೀರಭದ್ರ ಶಿವಾಚಾರ್ಯ ಸ್ವಾಮೀಜಿ ಹೇಳಿದರು.

ನಗರ ವೀರಶೈವ ಸಮಾಜಸೇವಾ ಸಮಿತಿ ಕಾರ್ಯದರ್ಶಿ ಶಶಿಧರನ್, ಜಗದ್ಗುರು ಪಂಚಾಚಾರ್ಯ ಸೇವಾ ಟ್ರಸ್ಟ್ ಅಧ್ಯಕ್ಷ ಟಿ.ಆರ್. ಸದಾಶಿವಯ್ಯ, ಜಿಲ್ಲಾ ಆರ್ಯ ಈಡಿಗರ ಸಂಘದ ಪ್ರಧಾನ ಕಾರ್ಯದರ್ಶಿ ಮಲ್ಲಸಂದ್ರ ಶಿವಣ್ಣ, ಮುಖಂಡರಾದ ಮೋಹನ್‌ಕುಮಾರ್ ಪಟೇಲ್, ಮಹೇಶ್ ಬಾಬು, ಕುಮಾರಸ್ವಾಮಿ, ರಾಮಲಿಂಗಯ್ಯ, ರುದ್ರೇಶ್, ಸ್ವರೂಪ್, ಮಂಜುಳ ಮೊದಲಾದವರು ಹಾಜರಿದ್ದರು.

21/06/2026

# ಭಾರತ ಸಾರಥಿ

BHARATHA SARATHI KANNADA DAILY NEWS PAPER

ಬೆಂಗಳೂರು | ಬೆಂ.ಗ್ರಾಮಾಂತರ | ತುಮಕೂರು | ಮೈಸೂರು | ಮಂಡ್ಯ | ರಾಮನಗರ | ಕೋಲಾರ | ಚಿಕ್ಕಬಳ್ಳಾಪುರ | ಚಿತ್ರದುರ್ಗ | ದಾವಣಗೆರೆ | ಶಿವಮೊಗ್ಗ | ಮಂಗಳೂರು | ಉಡುಪಿ | ಹುಬ್ಬಳ್ಳಿ | ಮಡಿಕೇರಿ | ಚಿಕ್ಕಮಗಳೂರು | ಹಾಸನ | ಬಳ್ಳಾರಿ

ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

## ಯೋಗ ದಿನಾಚರಣೆ

ಬೆಂ.ಗ್ರಾ ಜಿಲ್ಲೆ

ಜಿಲ್ಲಾಡಳಿತ ಮತ್ತು ಜಿಲ್ಲಾ ಪಂಚಾಯತ್, ಜಿಲ್ಲಾ ಆಯುಷ್ ಕಚೇರಿ, ಬೆಂಗಳೂರು ಗ್ರಾಮಾಂತರ ಇವರ ಸಂಯುಕ್ತ ಆಶ್ರಯದಲ್ಲಿ 12ನೇ ಅಂತಾರಾಷ್ಟ್ರೀಯ ಯೋಗ ದಿನಾಚರಣೆಯನ್ನು ಜೂ. 21 ರಂದು ದೇವನಹಳ್ಳಿ ಟಾನ್ ಕ್ರೀಡಾಂಗಣದಲ್ಲಿ ಬೆಳಗ್ಗೆ 6 ಗಂಟೆಗೆ ಹಮ್ಮಿಕೊಳ್ಳಲಾಗಿದೆ.

ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಸಚಿವರಾದ ಕೆ. ಹೆಚ್ ಮುನಿಯಪ್ಪ ಅವರು ಯೋಗ ದಿನದ ಅಧ್ಯಕ್ಷತೆ ವಹಿಸಲಿದ್ದಾರೆ.

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಸಚಿವ ಯು. ಟಿ ಖಾದರ್, ಹೊಸಕೋಟೆ ವಿಧಾನಸಭಾ ಕ್ಷೇತ್ರದ ಶಾಸಕ ಶರತ್ ಕುಮಾರ್ ಬಚ್ಚೇಗೌಡ, 5ನೇ ಹಣಕಾಸು ಅಯೋಗದ ಅಧ್ಯಕ್ಷ ಸಿ. ನಾರಾಯಣಸ್ವಾಮಿ, ಚಿಕ್ಕಬಳ್ಳಾಪುರ ಲೋಕಸಭಾ ಕ್ಷೇತ್ರದ ಸಂಸದ ಡಾ.ಕೆ. ಸುಧಾಕರ್, ವಿಧಾನ ಪರಿಷತ್ ಸದಸ್ಯರಾದ ಎನ್. ರವಿ, ಪುಟ್ಟಣ್ಣ, ನೆಲಮಂಗಲ ಶಾಸಕ ಶ್ರೀನಿವಾಸ್, ದೊಡ್ಡಬಳ್ಳಾಪುರ ಕ್ಷೇತ್ರದ ಶಾಸಕ ಧೀರಜ್ ಮುನಿರಾಜು, ವಿಧಾನ ಪರಿಷತ್ ಸದಸ್ಯರಾದ ನಾಗರಾಜು ಎಂ.ಟಿ.ಬಿ, ರಾಮೋಜಿ ಗೌಡ, ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಬಿ. ರಾಜಣ್ಣ, ದೇವನಹಳ್ಳಿ ತಾಲೂಕಿನ ಗ್ಯಾರೆಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಜಗನ್ನಾಥ್, ಅಂತಾರಾಷ್ಟ್ರೀಯ ವಿಮಾನ ನಿಲ್ದಾಣ ಪ್ರದೇಶ ಯೋಜನಾ ಪ್ರಾಧಿಕಾರದ ಅಧ್ಯಕ್ಷ ವಿ. ಶಾಂತಕುಮಾರ್, ಆರ್ಥಿಕ ಇಲಾಖೆ (ಆಯವ್ಯಯ & ಸಂಪನ್ಮೂಲ) ಆಡಳಿತಾಧಿಕಾರಿಗಳು, ಜಿಲ್ಲಾ ಪಂಚಾಯತ್ ಮತ್ತು ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಡಾ. ಪಿ.ಸಿ ಜಾಫರ್, ಆಯುಷ್ ಇಲಾಖೆ ಆಯುಕ್ತ ಸುನೀಲ್ ಪಂವಾರ್, ಜಿಲ್ಲಾಧಿಕಾರಿ ಕೆ. ಎನ್. ಅನುರಾಧ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ವಸಂತಿ ಅಮರ್, ಜಿಲ್ಲಾ ಪೊಲೀಸ್ ಅಧೀಕ್ಷಕ ಚಂದ್ರಕಾಂತ ಎಂ. ವಿ, ಜಿಲ್ಲಾ ಆಯುಷ್ ಅಧಿಕಾರಿ ಕೆ.ಟಿ ಅಶ್ವಿನಿ, ಜಿಲ್ಲಾ ವೈದ್ಯಾಧಿಕಾರಿಗಳು ಮತ್ತು ಸಿಬ್ಬಂದಿ ವರ್ಗದವರು, ಜಿಲ್ಲೆಯ ಎಲ್ಲಾ ಚುನಾಯಿತ ಪ್ರತಿನಿಧಿಗಳು ನಾಮ ನಿರ್ದೇಶಿತ ಸದಸ್ಯರು ಪತ್ರಿಕಾ ಮತ್ತು ಮಾಧ್ಯಮ ಪ್ರತಿನಿಧಿಗಳು ಹಾಗೂ ಸಾರ್ವಜನಿಕರು ಉಪಸ್ಥಿತರಿರಲಿದ್ದಾರೆ.

## ವಿದ್ಯಾರ್ಥಿಗಳ ಭವಿಷ್ಯಕ್ಕೆ ಪ್ರಾಥಮಿಕ ಹಂತದ ಗುಣಾತ್ಮಕ ಶಿಕ್ಷಣ ಮಹತ್ವದ್ದು: ಈಶ್ವರಖಂಡ್ರೆ

ನೆಲಮಂಗಲ



ವಿದ್ಯಾರ್ಥಿಗಳ ಭವ್ಯ ಭವಿಷ್ಯಕ್ಕೆ ಪ್ರಾಥಮಿಕ ಮತ್ತು ಪೂರ್ವ ಪ್ರಾಥಮಿಕ ಹಂತದ ಗುಣಾತ್ಮಕ ಶಿಕ್ಷಣ ಅತ್ಯಂತ ಮಹತ್ವದ್ದಾಗುತ್ತದೆ ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಈಶ್ವರ.ಬಿ.ಖಂಡ್ರೆ ಅಭಿಪ್ರಾಯಪಟ್ಟಿದ್ದಾರೆ.

ಗೋರಿನಬೆಲೆಯ ಗೋಲ್ಡನ್ ರೇ ಇಂಟರ್ ನ್ಯಾಷನಲ್ ಪಬ್ಲಿಕ್ ಶಾಲೆಯಲ್ಲಿ ಅಕ್ಷರಾಭ್ಯಾಸ, ಉಚಿತ ಆರೋಗ್ಯ ತಪಾಸಣಾ ಶಿಬಿರ ಹಾಗೂ ಪರಿಸರ ಜಾಗೃತಿ ಅಭಿಯಾನಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ಬುನಾದಿ ಗಟ್ಟಿಯಾಗಿದ್ದರೆ ಭವ್ಯ ಸೌಧ ನಿರ್ಮಿಸಲು ಸಾಧ್ಯ. ಅದೇ ರೀತಿ ಮಕ್ಕಳಿಗೆ ಆರಂಭಿಕ ಹಂತದಲ್ಲೇ ಕಲಿಕೆಯ ಆಸಕ್ತಿ ಮೂಡಿಸಿದರೆ ಅವರು ಸಾಧಕರಾಗುತ್ತಾರೆ ಎಂದರು.

ಮಕ್ಕಳು ಕೇವಲ ವಿದ್ಯಾವಂತರಾದರಷ್ಟೇ ಸಾಲದು, ಬುದ್ಧಿವಂತರಾಗಬೇಕು, ಜ್ಞಾನವಂತರಾಗಬೇಕು. ಜ್ಞಾನಕ್ಕೆ ಮಿಗಿಲಾದ್ದು ಯಾವುದೂ ಇಲ್ಲ, ಇಂದಿನ ಸ್ಪರ್ಧಾತ್ಮಕ ಯುಗದಲ್ಲಿ ಪ್ರತಿಭಾವಂತರು ಮಾತ್ರ ಯಶಸ್ಸು ಸಾಧಿಸುತ್ತಾರೆ. ಹೀಗಾಗಿ ಮಕ್ಕಳು ಬಾಹ್ಯ ಪ್ರಭಾವಕ್ಕೆ ಒಳಗಾಗದೆ ಕಲಿಕೆಗೆ ಒತ್ತು ನೀಡಬೇಕು ಎಂದರು.

ನೈತಿಕ ಶಿಕ್ಷಣವೂ ಅಷ್ಟೇ ಮುಖ್ಯ: ಮಕ್ಕಳಿಗೆ ಲೌಕಿಕ ಶಿಕ್ಷಣದ ಜೊತೆಗೆ ನೈತಿಕ ಶಿಕ್ಷಣವನ್ನೂ ಕಲಿಸಬೇಕು. ರಾಷ್ಟ್ರಕವಿ ಕುವೆಂಪು ಅವರು ಎಲ್ಲ ಮಕ್ಕಳೂ ವಿಶ್ವ ಮಾನವರಾಗಿ ಹುಟ್ಟುತ್ತಾರೆ, ಬೆಳೆಯುವಾಗ ಅಲ್ಪ ಮಾನವರಾಗುತ್ತಾರೆ ಎಂದು ಹೇಳಿದ್ದಾರೆ. ನಾವು ಮೇಲು, ಕೀಳು ಭಾವನೆ ಬಿಟ್ಟು ವಿಶ್ವ ಮಾನವರಾಗಿಯೇ ಉಳಿಯಬೇಕು, ಈ ಜವಾಬ್ದಾರಿ ಶಿಕ್ಷಣ ಸಂಸ್ಥೆಗಳ ಮೇಲಿದೆ ಎಂದರು.

ಸಂಪತ್ತು ಹೋದರೆ ಏನೂ ಹೋಗಲ್ಲ ಮತ್ತೆ ಗಳಿಸಬಹುದು, ಆರೋಗ್ಯ ಹೋದರೆ ಸ್ವಲ್ಪ ನಷ್ಟ ಆಗುತ್ತದೆ. ಆದರೆ ಚಾರಿತ್ರ್ಯ ಹೋದರೆ ಸರ್ವಸ್ವವೂ ಹೋದಂತೆ ಎಂದ ಈಶ್ವರ ಖಂಡ್ರೆ, ಮಕ್ಕಳನ್ನು ಚಾರಿತ್ರ್ಯವಂತರನ್ನಾಗಿ ಬೆಳೆಸುವ ಹೊಣೆ ಪಾಲಕರು ಮತ್ತು ಶಿಕ್ಷಕರ ಮೇಲಿದೆ ಎಂದು ಪ್ರತಿಪಾದಿಸಿದರು.

ಇಂದು ವಿದ್ಯಾರ್ಥಿಗಳು ಮೊಬೈಲ್ ಫೋನ್ ಗಳಲ್ಲಿ ಕಳೆದು ಹೋಗುತ್ತಿದ್ದಾರೆ, ದುಶ್ಚಟ ದುರ್ಗುಣಗಳ ದಾಸರಾಗುತ್ತಿದ್ದಾರೆ. ಮಾನಸಿಕವಾಗಿ ಕುಗ್ಗಿ ಹೋಗುತ್ತಿದ್ದಾರೆ. ಮಕ್ಕಳಲ್ಲಿ ಆತ್ಮಸ್ಥೈರ್ಯ ತುಂಬುವ ಮತ್ತು ಸದ್ಗುಣಿಗಳನ್ನಾಗಿ ಮಾಡುವ ಕಾರ್ಯವನ್ನು ತಂದೆ ತಾಯಿ ಹಾಗೂ ಶಿಕ್ಷಕರು ಮಾಡಬೇಕು ಎಂದರು. ಇಂದು ನಾವು ಜಾಗತಿಕ ತಾಪಮಾನ, ಹವಾಮಾನ ಬದಲಾವಣೆಯ ಪರಿಣಾಮ ಎದುರಿಸುತ್ತಿದ್ದು, ನಮ್ಮ ಸುತ್ತಲ ಪರಿಸರ ಪ್ರಕೃತಿಯನ್ನು ಸಂರಕ್ಷಿಸುವ ಜವಾಬ್ದಾರಿ ಎಲ್ಲರ ಮೇಲಿದೆ. ಅದು ನಮ್ಮ ಹೊಣೆ ಎಂದು ಈಶ್ವರ ಖಂಡ್ರೆ ಹೇಳಿದರು.

ಭಾರತದಲ್ಲಿ ಅದ್ಭುತ ಮಾನವ ಸಂಪನ್ಮೂಲವಿದೆ. ಭಾರತೀಯರ ಬುದ್ಧಿಗೆ ಬಂಗಾರದ ಬೆಲೆ ಇದೆ. ಇಂದು ಮೆಷಿನ್ ಲರ್ನಿಂಗ್, ಕೃತಕ ಬುದ್ಧಿಮತ್ತೆಯಂತಹ ಆಧುನಿಕ ತಂತ್ರಜ್ಞಾನ ಅಭಿವೃದ್ಧಿಯಾಗುತ್ತಿದ್ದು, ಇಂದಿನ ಯುಗಮಾನದ ಅಗತ್ಯಕ್ಕೆ ಅನುಗುಣವಾಗಿ ವಿದ್ಯಾರ್ಥಿಗಳು ಹೊಸ ಕಲಿಕೆಯ ಕಡೆಗೆ ಗಮನ ಕೊಡಬೇಕು. ಮಕ್ಕಳ ಆರೋಗ್ಯದ ಕಡೆಗೂ ಪಾಲಕರು ಗಮನ ಹರಿಸಬೇಕು ಎಂದರು. ಕಾರ್ಯಕ್ರಮದಲ್ಲಿ ಶ್ರೀ ಶಿವಸಿದ್ದೇಶ್ವರ ಮಹಾಸ್ವಾಮೀಜಿ, ಡಾ.ಎಸ್. ಪರಮೇಶ್,ಎಂ.ಎಸ್. ಮೃತ್ಯುಂಜಯ, ನಟರಾಜ್ ಸಗರನಹಳ್ಳಿ, ಸಚ್ಚಿದಾನಂದ ಮೂರ್ತಿ ಮೊದಲಾದವರು ಪಾಲ್ಗೊಂಡಿದ್ದರು.

## ಆಹಾರ ನೀಡುವವರಿಗೆ ತೊಂದರೆ ಕೊಡದಂತೆ ಪಾಲಿಕೆಯ ಮನವಿ



ಬೆಂಗಳೂರು

ದಕ್ಷಿಣ ನಗರ ಪಾಲಿಕೆ ವ್ಯಾಪ್ತಿಯಲ್ಲಿ ಬೀದಿನಾಯಿಗಳ ಕಲ್ಯಾಣ, ಸುರಕ್ಷಿತ ಆಹಾರ ವಿತರಣೆ ವ್ಯವಸ್ಥೆ ಹಾಗೂ ಪ್ರಾಣಿ ಸಂರಕ್ಷಣಾ ಯೋಜನೆಗಳ ಪರಿಣಾಮಕಾರಿ ಅನುಷ್ಠಾನಕ್ಕೆ ಮತ್ತೊಂದು ಮಹತ್ವದ ಹೆಜ್ಜೆ ಇಡಲಾಗಿದೆ. ಮುಖ್ಯ ಪಶುವೈದ್ಯಾಧಿಕಾರಿ ಡಾ. ಶ್ರೀನಾಥ್ ಅವರ ನೇತೃತ್ವದಲ್ಲಿ ನಡೆದ ಪರಿಶೀಲನಾ ಸಭೆಯಲ್ಲಿ ಪ್ರಾಣಿ ಹಿತೈಷಿಗಳು, ಸ್ವಯಂಸೇವಕರು ಮತ್ತು ಬೀದಿನಾಯಿಗಳಿಗೆ ಆಹಾರ ನೀಡುವವರು ಭಾಗವಹಿಸಿ ತಮ್ಮ ಅಭಿಪ್ರಾಯಗಳನ್ನು ಹಂಚಿಕೊಂಡರು.

ಸಭೆಯಲ್ಲಿ ಬೀದಿನಾಯಿಗಳಿಗೆ ಆಹಾರ ನೀಡುವುದು ಕಾನೂನುಬದ್ಧ ಕಾರ್ಯವಾಗಿದ್ದು, ಅಂತಹ ಸೇವೆ ಸಲ್ಲಿಸುವವರಿಗೆ ಸಾರ್ವಜನಿಕರು ಯಾವುದೇ ರೀತಿಯ ಕಿರುಕುಳ ಅಥವಾ ಅನಗತ್ಯ ತೊಂದರೆ ನೀಡಬಾರದು ಎಂಬುದನ್ನು ಪುನರುಚ್ಚರಿಸಲಾಯಿತು. ಪ್ರಾಣಿಗಳ ಆರೈಕೆಯಲ್ಲಿ ತೊಡಗಿರುವವರ ಸಹಕಾರವನ್ನು ಗೌರವಿಸುವಂತೆ ನಾಗರಿಕರಿಗೆ ಮನವಿ ಮಾಡಲಾಯಿತು.

ಅದೇ ವೇಳೆ, ಬೀದಿನಾಯಿಗಳಿಗೆ ಎಲ್ಲೆಂದರಲ್ಲಿ ಆಹಾರ ನೀಡುವ ಬದಲು ಸುರಕ್ಷಿತ ಮತ್ತು ಸೂಕ್ತ ಸ್ಥಳಗಳನ್ನು ಗುರುತಿಸಿ ವ್ಯವಸ್ಥಿತವಾಗಿ ಆಹಾರ ಒದಗಿಸುವ ಕ್ರಮಕ್ಕೆ ಒತ್ತು ನೀಡಲಾಯಿತು. ಈ ಕಾರ್ಯದಲ್ಲಿ ಸ್ಥಳೀಯ ನಿವಾಸಿಗಳು ಹಾಗೂ ನಿವಾಸಿಗಳ ಸಂಘಗಳ ಸಕ್ರಿಯ ಸಹಭಾಗಿತ್ವ ಅಗತ್ಯವೆಂದು ತಿಳಿಸಲಾಯಿತು. ಬೀದಿನಾಯಿಗಳ ಯೋಗಕ್ಷೇಮಕ್ಕೆ ಧಕ್ಕೆಯಾಗದಂತೆ ಹಾಗೂ ಸಾರ್ವಜನಿಕರಿಗೆ ಯಾವುದೇ ಅನಾನುಕೂಲ ಉಂಟಾಗದಂತೆ ಸಮನ್ವಯದೊಂದಿಗೆ ಕಾರ್ಯನಿರ್ವಹಿಸುವಂತೆ ಅಧಿಕಾರಿಗಳು ಮತ್ತು ಸ್ವಯಂಸೇವಕರಿಗೆ ಸೂಚನೆ ನೀಡಲಾಯಿತು. ಸಭೆಯಲ್ಲಿ ಪ್ರಾಣಿ ಆಶ್ರಯ ಕೇಂದ್ರಗಳು, ಲಸಿಕಾ ಕಾರ್ಯಕ್ರಮಗಳು, ರಕ್ಷಣಾ ಕಾರ್ಯಾಚರಣೆಗಳು, ದತ್ತು ಸ್ವೀಕಾರ ಯೋಜನೆಗಳು ಹಾಗೂ ಪ್ರಾಣಿ ಜನನ ನಿಯಂತ್ರಣ ಕಾರ್ಯಕ್ರಮಗಳ ಪ್ರಗತಿಯ ಬಗ್ಗೆಯೂ ಮಾಹಿತಿ ಹಂಚಿಕೊಳ್ಳಲಾಯಿತು.

ಪ್ರಾಣಿ ಕಲ್ಯಾಣ ಮತ್ತು ಸಾರ್ವಜನಿಕ ಹಿತಾಸಕ್ತಿಯನ್ನು ಸಮತೋಲನಗೊಳಿಸುವ ಈ ಕ್ರಮಕ್ಕೆ ಸಭೆಯಲ್ಲಿ ಭಾಗವಹಿಸಿದ್ದ ಪ್ರಾಣಿ ಹಿತೈಷಿಗಳು ಹಾಗೂ ಸ್ವಯಂಸೇವಕರು ಸ್ವಾಗತ ವ್ಯಕ್ತಪಡಿಸಿದರು.

## ಬಿಡದಿ ರೈತರ ಕೃಷಿ ಜಮೀನು ಸ್ವಾಧೀನ ಕೈಬಿಡಲು ಸರ್ಕಾರಕ್ಕೆ ಒತ್ತಾಯ

ತುಮಕೂರು

ಬಿಡದಿ ಬಳಿ ರೈತರ ಕೃಷಿ ಜಮೀನನ್ನು ಬಲವಂತವಾಗಿ ಸ್ವಾಧೀನಪಡಿಸಿಕೊಳ್ಳಲು ಹೊರಟಿರುವ ರಾಜ್ಯ ಸರ್ಕಾರದ ಕ್ರಮ ಖಂಡಿಸಿದ ಜಿಲ್ಲಾ ಜೆಡಿಎಸ್ ಅಧ್ಯಕ್ಷ ಹೆಚ್. ನಿಂಗಪ್ಪ ಕಾನೂನುಬಾಹಿರವಾದ ಭೂಸ್ವಾಧೀನ ಪಕ್ರಿಯೆ ಕೈ ಬಿಡಬೇಕು ಎಂದು ಒತ್ತಾಯಿಸಿದರು.

ಶುಕ್ರವಾರ ನಗರದ ಜೆಡಿಎಸ್ ಕಚೇರಿಯಲ್ಲಿ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಭೂಸ್ವಾಧೀನ ವಿರೋಧಿಸಿ ಈ ತಿಂಗಳ 21ರಂದು ಅಲ್ಲಿನ ರೈತರೊಂದಿಗೆ ಜೆಡಿಎಸ್ ಹಮ್ಮಿಕೊಂಡಿರುವ ಪ್ರತಿಭಟನಾ ಪಾದಯಾತ್ರೆಯಲ್ಲಿ ಜಿಲ್ಲೆಯ ಎಲ್ಲಾ ತಾಲ್ಲೂಕುಗಳಿಂದ ಹೆಚ್ಚಿನ ಸಂಖ್ಯೆಯಲ್ಲಿ ಮುಖಂಡರು, ಕಾರ್ಯಕರ್ತರು ಭಾಗವಹಿಸಬೇಕು ಎಂದು ಮನವಿ ಮಾಡಿದರು.

ಬಿಡದಿ ಮತ್ತು ಹಾರೋಹಳ್ಳಿ ಹೋಬಳಿಯ ಅತ್ಯಂತ ಫಲವತ್ತಾದ ಕೃಷಿ ಭೂಮಿಯನ್ನು ವಶಪಡಿಸಿಕೊಳ್ಳಲು ಹೊರಡಿಸಿರುವ ಈ ಕರಾಳ ಅಂತಿಮ ಅಧಿಸೂಚನೆಯನ್ನು ತಕ್ಷಣವೇ ರದ್ದುಗೊಳಿಸಬೇಕು. ಮುಂದಿನ ತಿಂಗಳು ಜಾರಿಗೆ ತರಲು ಉದ್ದೇಶಿಸಿರುವ 7,500ಕ್ಕೂ ಹೆಚ್ಚು ಎಕರೆ ಭೂಸ್ವಾಧೀನದ ಪ್ರಕ್ರಿಯೆಯನ್ನು ಆರಂಭದಲ್ಲೇ ಕೈಬಿಡಬೇಕು. ಪ್ರತಿ ತಿಂಗಳು 6 ಲಕ್ಷ ಲೀಟರ್ ಹಾಲು ಉತ್ಪಾದಿಸುವ ಹೈನುಗಾರಿಕೆ, ರೇಷ್ಮೆ ಕೃಷಿ, ರೇಷ್ಮೆ ಹುಳು ಸಾಕಾಣಿಕೆ ಮತ್ತು ತೋಟಗಾರಿಕೆಯನ್ನು ನೆಚ್ಚಿಕೊಂಡಿರುವ ಬಡ ರೈತ ಕುಟುಂಬಗಳ ಜೀವನೋಪಾಯವನ್ನು ಯಥಾಸ್ಥಿತಿಯಲ್ಲಿ ಮುಂದುವರಿಸಲು ಅನುಮತಿ ನೀಡಬೇಕು. ಸಾರ್ವಜನಿಕ ಆಸ್ತಿಗಳಾದ ಸಿ.ಎ ನಿವೇಶನಗಳನ್ನು ಬ್ಯಾಂಕುಗಳಲ್ಲಿ ಅಡವಿಟ್ಟು ಸಾಲ ಪಡೆಯುತ್ತಿರುವ ಆರ್ಥಿಕ ದುರ್ನೀತಿಯನ್ನು ಸರ್ಕಾರ ತಕ್ಷಣ ನಿಲ್ಲಿಸಬೇಕು ಎಂದು ಹೆಚ್. ನಿಂಗಪ್ಪ ಒತ್ತಾಯಿಸಿದರು.

ಕೇಂದ್ರದ 2013ರ ಭೂಸ್ವಾಧೀನ ಕಾಯ್ದೆಯ ಕಟ್ಟುನಿಟ್ಟಾದ ನಿಯಮಗಳನ್ನು ತಪ್ಪಿಸಲು, ಸರ್ಕಾರವು ಕರ್ನಾಟಕ ನಗರಾಭಿವೃದ್ಧಿ ಪ್ರಾಧಿಕಾರ ಕಾಯ್ದೆಯನ್ನು ಬಳಸಿಕೊಂಡು ಕಡ್ಡಾಯವಾಗಿ ನಡೆಸಬೇಕಾದ ಸಾಮಾಜಿಕ ಪರಿಣಾಮ ಮೌಲ್ಯಮಾಪನ ಮತ್ತು ಪರಿಸರ ಪರಿಣಾಮ ಮೌಲ್ಯಮಾಪನ ಪ್ರಕ್ರಿಯೆಗಳನ್ನು ಸಂಪೂರ್ಣವಾಗಿ ಬೈಪಾಸ್ ಮಾಡಿದೆ. ಈ ವಿಷಯದ ಗಾಂಭೀರ್ಯತೆಯನ್ನು ಅರಿತು, ಬಡ ಮತ್ತು ಅತಿ ಸಣ್ಣ ರೈತರ ಪರವಾಗಿ ನಿಲ್ಲಬೇಕೆಂದು ಮತ್ತು ಈ ಅನ್ಯಾಯದ ಭೂಸ್ವಾಧೀನದ ವಿರುದ್ಧ ಜೆಡಿಎಸ್ ತೀವ್ರ ಪ್ರತಿರೋಧ ವ್ಯಕ್ತಪಡಿಸಿದೆ ಎಂದರು.

ಇದರ ನಡುವೆ ಮುಂದಿನ ತಿಂಗಳು 7,500ಕ್ಕೂ ಹೆಚ್ಚು ಎಕರೆ ವಶಪಡಿಸಿಕೊಳ್ಳುವ ಕರಾಳ ಸಂಚು ನಡೆದಿದೆ. ಜೂನ್ 12ರಂದು ಹೊರಬಿದ್ದಿರುವ ಅಧಿಸೂಚನೆಯು ಕೇವಲ 500 ಎಕರೆಗೆ ಮಾತ್ರ ಸೀಮಿತವಾಗಿಲ್ಲ. ಮುಂದಿನ ತಿಂಗಳ ಒಳಗೆ ಇಡೀ ಬಿಡದಿ ಭಾಗದ ಬರೋಬ್ಬರಿ 7,481 ರಿಂದ 9,600 ಎಕರೆ ವರೆಗಿನ ಅತ್ಯಂತ ಫಲವತ್ತಾದ ಕೃಷಿ ಭೂಮಿಯನ್ನು ಬಲವಂತವಾಗಿ ಕಸಿದುಕೊಳ್ಳಲು ಸರ್ಕಾರ ಗಡುವು ನಿಗದಿಪಡಿಸಿದೆ. ರೈತರು ತಮ್ಮ ಭೂಮಿಯನ್ನು ಬಿಟ್ಟುಕೊಡಲು ಸಿದ್ಧರಿಲ್ಲದಿದ್ದರೂ, ಅವರ ಹಣವನ್ನು ಕೋರ್ಟ್‌ನಲ್ಲಿ ಜಮೆ ಮಾಡಿ ಜಮೀನು ಕಿತ್ತುಕೊಳ್ಳುವ ಕರಾಳ ಎಚ್ಚರಿಕೆಯನ್ನು ಸರ್ಕಾರ ನೀಡುತ್ತಿದೆ ಎಂದು ಹೆಚ್. ನಿಂಗಪ್ಪ ಸರ್ಕಾರದ ಧೋರಣೆ ಖಂಡಿಸಿದರು.

ಈ ಇಡೀ ವಲಯವು ಹಸಿರು ಭೂಮಿಯಾಗಿದ್ದು, ಹೈನುಗಾರಿಕೆಯೇ ಇಲ್ಲಿನ ಜನರ ಪ್ರಮುಖ ಜೀವನಾಧಾರವಾಗಿದೆ. ಈ ಯೋಜನೆಯಿಂದಾಗಿ ಪ್ರತಿ ತಿಂಗಳು ಉತ್ಪಾದನೆಯಾಗುತ್ತಿದ್ದ ಬರೋಬ್ಬರಿ 6 ಲಕ್ಷ ಲೀಟರ್ ಹಾಲು ಸಂಪೂರ್ಣವಾಗಿ ನಿಂತುಹೋಗಲಿದ್ದು, ರಾಜ್ಯದ ಹಾಲಿನ ಮಾರುಕಟ್ಟೆಗೆ ದೊಡ್ಡ ಹೊಡೆತ ಬೀಳಲಿದೆ. ಈ ಭಾಗದ ಶೇಕಡ 50ಕ್ಕೂ ಹೆಚ್ಚು ಕುಟುಂಬಗಳು ಕೇವಲ ರೇಷ್ಮೆ ಕೃಷಿ, ರೇಷ್ಮೆ ಹುಳು ಸಾಕಾಣಿಕೆ ಮತ್ತು ತೋಟಗಾರಿಕೆಯನ್ನು ನಂಬಿ ಸ್ವಾವಲಂಬಿ ಬದುಕು ನಡೆಸುತ್ತಿವೆ. ಬಡ ರೈತರ ಭೂಮಿಯನ್ನು ಕನಿಷ್ಠ ಬೆಲೆಗೆ ಕಸಿದುಕೊಂಡು, ಬರೋಬ್ಬರಿ ರೂ. 33,562 ಕೋಟಿ ಕೊಳ್ಳೆ ಹೊಡೆಯಲು ಸರ್ಕಾರ ತೀರ್ಮಾನಿಸಿದೆ. ಸ್ವತಃ ಸರ್ಕಾರದ ಹಣಕಾಸು ಇಲಾಖೆಯು ಇದು ಕೇವಲ ಒಂದು ವಾಣಿಜ್ಯರಿಯಲ್ ಎಸ್ಟೇಟ್ ಯೋಜನೆ ಎಂದು ಲಿಖಿತವಾಗಿ ತೀವ್ರ ವಿರೋಧ ವ್ಯಕ್ತಪಡಿಸಿದ್ದರೂ, ಮುಖ್ಯಮಂತ್ರಿಗಳು ಹಠಕ್ಕೆ ಬಿದ್ದು ರೂ.9,011 ಕೋಟಿಗಳ ಸರ್ಕಾರಿ ಗ್ಯಾರಂಟಿ ನೀಡಿದ್ದಾರೆ. ಈ ಯೋಜನೆಗಾಗಿ ಬಿ.ಡಿ.ಎ ಮತ್ತು ಬಿ.ಎಂ.ಆರ್.ಡಿ.ಎ ವ್ಯಾಪ್ತಿಯಲ್ಲಿರುವ ಸಾರ್ವಜನಿಕ ಬಳಕೆಯ ಆಸ್ತಿಗಳನ್ನು ಬರೋಬ್ಬರಿ ರೂ. 3,650 ಕೋಟಿ ಮೌಲ್ಯಕ್ಕೆ ಹುಡ್ಕೊ ಬ್ಯಾಂಕಿನಲ್ಲಿ ಅಡಮಾನ ಇಡಲಾಗಿದೆ ಎಂದು ಹೇಳಿದರು.

## ಪ್ರಶಸ್ತಿಗಾಗಿ ಅರ್ಜಿ ಆಹ್ವಾನ

ಕೋಲಾರ

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖಾ ವತಿಯಿಂದ ಹೊಯ್ಸಳ ಮತ್ತು ಕೆಳದಿ ಚೆನ್ನಮ್ಮ ಪ್ರಶಸ್ತಿ ಯೋಜನೆಯಡಿ ನಾವಿನ್ಯತೆ, ತಾರ್ಕಿಕ ಸಾಧನೆಗಳು, ಕ್ರೀಡೆ, ಕಲೆ, ಸಾಂಸ್ಕೃತಿಕ, ಸಂಗೀತ ಕ್ಷೇತ್ರಗಳಲ್ಲಿ ಅಸಾಧಾರಣ ಸಾಧನೆ ಮಾಡಿರುವಂತಹ 05 ರಿಂದ 18 ವರ್ಷದೊಳಗಿನ ಮಕ್ಕಳಿಗೆ 2026-27ನೇ ಸಾಲಿಗೆ ಜಿಲ್ಲಾ ಮಟ್ಟದ ಪ್ರಶಸ್ತಿಗೆ ಆಯ್ಕೆ ಮಾಡಲಾಗುವುದು. ಈ ಪ್ರಶಸ್ತಿಯು ರೂ.10,000/-ಗಳ ನಗದು ಹಾಗೂ ಪ್ರಶಸ್ತಿ ಪತ್ರ ಒಳಗೊಂಡಿರುತ್ತದೆ.

ಈ ಕ್ಷೇತ್ರಗಳಲ್ಲಿ ಅಸಾಧಾರಣ ಪ್ರತಿಭೆ ಹೊಂದಿರಬೇಕು. ವಯಸ್ಸಿನ ಬಗ್ಗೆ ಜನನ ಪ್ರಮಾಣ ಪತ್ರವನ್ನು ಪತ್ರಾಂಕಿತ ಅಧಿಕಾರಿಗಳಿಂದ ದೃಢೀಕರಣ ಮಾಡಿಸಿದ ಪ್ರತಿ ಲಗತ್ತಿಸಬೇಕು. ಪ್ರತಿಭೆಯನ್ನು ಹೊಂದಿರುವ ಬಗ್ಗೆ, ಪ್ರಮುಖ ದಿನಪತ್ರಿಕೆಯಲ್ಲಿ ಪ್ರಕಟಗೊಂಡಿರುವ ಪತ್ರಿಕೆ ತುಣುಕು/ಪ್ರಮಾಣ ಪತ್ರಗಳನ್ನು ಲಗತ್ತಿಸಬೇಕು. ಕನಿಷ್ಠ 5 ವರ್ಷ ಕರ್ನಾಟಕ ರಾಜ್ಯದಲ್ಲಿ ನೆಲಸಿರತಕ್ಕದ್ದು, ಈ ಬಗ್ಗೆ ಸ್ವಯಂ ದೃಢೀಕರಣ ಸಲ್ಲಿಸುವುದು. ಕ್ರೀಡಾ ಕ್ಷೇತ್ರದಲ್ಲಿ ಹಿಂದಿನ 3 ವರ್ಷಗಳು ಹಾಗೂ ನಾವಿನ್ಯತೆ ಮತ್ತು ತಾರ್ಕಿಕ ಕ್ಷೇತ್ರಗಳಲ್ಲಿ ಹಿಂದಿನ 2 ವರ್ಷಗಳ ಸಾಧನೆಯನ್ನು ಪರಿಗಣಿಸಲಾಗುವುದು. ಅಂತರ ರಾಷ್ಟ್ರೀಯ ಅಥವಾ ರಾಷ್ಟ್ರೀಯ ಅಥವಾ ರಾಜ್ಯ ಮಟ್ಟದಲ್ಲಿ ಭಾಗವಹಿಸಿರುವ ಅಥವಾ ಪ್ರಶಸ್ತಿ ಪಡೆದಿರುವ ಪ್ರಮಾಣ ಪತ್ರಗಳನ್ನು ಲಗತ್ತಿಸಬೇಕು. ಸಾಧಿಸಿರುವ ಪ್ರತಿಭೆಯನ್ನು ಸಮರ್ಥಿಸಲು ಪೂರಕ ದಾಖಲೆಗಳನ್ನು ಸಲ್ಲಿಸತಕ್ಕದ್ದು. ಹಿಂದಿನ ವರ್ಷಗಳಲ್ಲಿ ಜಿಲ್ಲಾ ಮಟ್ಟದಲ್ಲಿ ಪ್ರಶಸ್ತಿ ಪಡೆದ ಮಕ್ಕಳಿಗೆ ಪುನಃ ಪ್ರಶಸ್ತಿ ನೀಡಲು ಅವಕಾಶವಿರುವುದಿಲ್ಲ. ಬ್ಯಾಂಕ್ ಖಾತೆಯ ಪಾಸ್ ಪುಸ್ತಕದೊಂದಿಗೆ ಅರ್ಜಿಯನ್ನು ಸಲ್ಲಿಸತಕ್ಕದ್ದು.

ಅರ್ಜಿ ನಮೂನೆಗಳನ್ನು ಜಿಲ್ಲಾ ನ್ಯಾಯಾಲಯ ಆವರಣದ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕರ ಕಛೇರಿಯಲ್ಲಿ ಪಡೆದು ಜುಲೈ 10 ರೊಳಗೆ ಸಲ್ಲಿಸಬಹುದು. ನಿಗದಿತ ದಿನಾಂಕದ ನಂತರ ಸಲ್ಲಿಸಿದ ಅರ್ಜಿಗಳನ್ನು ಯಾವುದೇ ಕಾರಣಕ್ಕೂ ಪರಿಗಣಿಸಲಾಗುವುದಿಲ್ಲ. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ-08152-222753, 223665, 9663294415 ಯನ್ನು ಕಛೇರಿ ಸಮಯದಲ್ಲಿ ಸಂಪರ್ಕಿಸಬಹುದೆಂದು ಇಲಾಖೆಯ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಪರಿಷತ್‌ಗೆ ರಘು ಕೌಟಿಲ್ಯ ಆಯ್ಕೆ: ಇತಿಹಾಸದಲ್ಲಿ ಹೊಸ ಅಧ್ಯಾಯ

ಚಿಂತಾಮಣಿ



ಕರ್ನಾಟಕದ ರಾಜಕೀಯ ಇತಿಹಾಸದಲ್ಲಿ ಇದೇ ಮೊದಲ ಬಾರಿಗೆ ಅತ್ಯಂತ ಹಿಂದುಳಿದ ವರ್ಗಗಳ ಪಟ್ಟಿಯಲ್ಲಿರುವ ಮಡಿವಾಳ ಸಮುದಾಯದ ಪ್ರತಿನಿಧಿಯಾಗಿ ರಘು ಕೌಟಿಲ್ಯ ಅವರು ವಿಧಾನ ಪರಿಷತ್ ಸದಸ್ಯರಾಗಿ ಆಯ್ಕೆಯಾಗಿರುವುದು ಸಾಮಾಜಿಕ ನ್ಯಾಯದ ದಿಕ್ಕಿನಲ್ಲಿ ಮಹತ್ವದ ಹೆಜ್ಜೆಯಾಗಿದೆ ಎಂದು ಮಡಿವಾಳ ಸಮುದಾಯದ ಯುವ ಮುಖಂಡ ಹಾಗೂ ವಕೀಲ ತಳಗವಾರ ರಾಜಶೇಖರ್ ಹೇಳಿದ್ದಾರೆ.

ಈ ಕುರಿತು ಪ್ರಕಟಣೆ ನೀಡಿರುವ ಅವರು, ಹಿಂದುಳಿದ ಸಮುದಾಯಗಳಿಗೆ ರಾಜಕೀಯ ಪ್ರಾತಿನಿಧ್ಯ ಕಲ್ಪಿಸುವಲ್ಲಿ ಭಾರತೀಯ ಜನತಾ ಪಕ್ಷ ತೋರಿರುವ ಬದ್ಧತೆಯನ್ನು ಶ್ಲಾಘಿಸಿದ್ದಾರೆ.

ಸಮಾಜದ ಅಭಿವೃದ್ಧಿಗಾಗಿ ತೆರೆಮರೆಯಲ್ಲಿ ನಿರಂತರವಾಗಿ ಶ್ರಮಿಸಿದ ಮಡಿವಾಳ ಸಮುದಾಯದ ಹೆಮ್ಮೆಯ ಪುತ್ರ ಹಾಗೂ ರಾಜ್ಯ ಹಿಂದುಳಿದ ವರ್ಗಗಳ ಯುವ ಮೋರ್ಚಾ ರಾಜ್ಯಾಧ್ಯಕ್ಷ ರಘು ಕೌಟಿಲ್ಯ ಅವರನ್ನು ವಿಧಾನ ಪರಿಷತ್‌ಗೆ ಆಯ್ಕೆ ಮಾಡಿರುವುದು ರಾಜಕೀಯವಾಗಿ ಹಿಂದುಳಿದ ಸಮುದಾಯಗಳಿಗೆ ಹೊಸ ಭರವಸೆ ಮೂಡಿಸಿದೆ ಎಂದು ತಿಳಿಸಿದ್ದಾರೆ.

ಶಿಕ್ಷಣ, ಸಾಹಿತ್ಯ, ಮಾಧ್ಯಮ ಹಾಗೂ ಸಂಘಟನಾ ಕ್ಷೇತ್ರಗಳಲ್ಲಿ ಗುರುತಿಸಿಕೊಂಡಿರುವ ರಘು ಕೌಟಿಲ್ಯ ಅವರ ಆಯ್ಕೆಯು ಸಮುದಾಯದ ಆತ್ಮವಿಶ್ವಾಸವನ್ನು ಹೆಚ್ಚಿಸಿದೆ. ಮಡಿವಾಳ ಸಮುದಾಯದ ಸಾಮಾಜಿಕ, ಆರ್ಥಿಕ ಹಾಗೂ ರಾಜಕೀಯ ಅಭಿವೃದ್ಧಿಗೆ ಶಾಸನಬದ್ಧ ವೇದಿಕೆಗಳಲ್ಲಿ ಸಮುದಾಯದ ಪ್ರಬಲ ಧ್ವನಿ ಅಗತ್ಯವಾಗಿದ್ದು, ಈ ಆಯ್ಕೆ ಆ ನಿಟ್ಟಿನಲ್ಲಿ ಮಹತ್ವದ ಬೆಳವಣಿಗೆಯಾಗಿದೆ ಎಂದು ಅವರು ಅಭಿಪ್ರಾಯಪಟ್ಟಿದ್ದಾರೆ.

ರಾಜಕೀಯ ಪಕ್ಷಗಳ ನಾಯಕತ್ವದ ಬೆಂಬಲ ಮತ್ತು ಜನಸಾಮಾನ್ಯರ ವಿಶ್ವಾಸ ಒಟ್ಟುಗೂಡಿದಾಗ ಮಾತ್ರ ಸಮುದಾಯಗಳ ಬಹುಕಾಲದ ಸಮಸ್ಯೆಗಳಿಗೆ ಶಾಶ್ವತ ಪರಿಹಾರ ಕಂಡುಕೊಳ್ಳಲು ಸಾಧ್ಯವಾಗುತ್ತದೆ. ರಘು ಕೌಟಿಲ್ಯ ಅವರ ಆಯ್ಕೆ ಈ ಸತ್ಯವನ್ನು ಮತ್ತೊಮ್ಮೆ ಸಾಬೀತುಪಡಿಸಿದೆ ಎಂದು ರಾಜಶೇಖರ್ ತಿಳಿಸಿದ್ದಾರೆ.

ರಾಜ್ಯದ ವಿವಿಧ ಭಾಗಗಳಲ್ಲಿ ಹರಡಿಕೊಂಡಿರುವ ಮಡಿವಾಳ ಸಮುದಾಯವು ಭವಿಷ್ಯದಲ್ಲಿ ಇನ್ನಷ್ಟು ರಾಜಕೀಯವಾಗಿ ಸಂಘಟಿತಗೊಂಡರೆ ಕನಿಷ್ಠ ಇಬ್ಬರು ಶಾಸಕರನ್ನು ಆಯ್ಕೆ ಮಾಡುವಷ್ಟು ಸಾಮರ್ಥ್ಯ ಹೊಂದಿದೆ. ವಿಧಾನ ಪರಿಷತ್ ಸದಸ್ಯರಾಗಿ ಆಯ್ಕೆಯಾಗಿರುವ ರಘು ಕೌಟಿಲ್ಯ ಅವರು ತಮ್ಮ ಆರು ವರ್ಷಗಳ ಅಧಿಕಾರಾವಧಿಯಲ್ಲಿ ಸಮುದಾಯದ ಸಮಗ್ರ ಅಭಿವೃದ್ಧಿಗೆ ಶ್ರಮಿಸಿ, ಜನರ ನಿರೀಕ್ಷೆಗಳನ್ನು ಈಡೇರಿಸಲಿ ಎಂದು ಅವರು ಆಶಿಸಿದ್ದಾರೆ.

ಸಮುದಾಯಕ್ಕೆ ದೊರೆತಿರುವ ಈ ಅಪರೂಪದ ಅವಕಾಶವನ್ನು ಸದುಪಯೋಗಪಡಿಸಿಕೊಂಡು, ಮಡಿವಾಳ ಸಮುದಾಯದ ಸಮಸ್ಯೆಗಳಿಗೆ ಸರ್ಕಾರದ ಮಟ್ಟದಲ್ಲಿ ಪರಿಣಾಮಕಾರಿ ಪರಿಹಾರ ದೊರಕಿಸುವಲ್ಲಿ ರಘು ಕೌಟಿಲ್ಯ ಅವರು ಮುಂಚೂಣಿಯಲ್ಲಿ ಕಾರ್ಯನಿರ್ವಹಿಸಲಿ ಎಂದು ರಾಜಶೇಖರ್ ಹಾರೈಸಿದ್ದಾರೆ.

## ದೇವನಹಳ್ಳಿಯಲ್ಲಿ ಇಬ್ಬರು ಕಿಶೋರ ಕಾರ್ಮಿಕರ ರಕ್ಷಣೆ

ದೇವನಹಳ್ಳಿ

ಬಾಲಕಾರ್ಮಿಕ ಪದ್ಧತಿ ವಿರೋಧಿ ದಿನದ ಅಂಗವಾಗಿ ಜೂನ್ 1ರಿಂದ 30ರವರೆಗೆ ನಡೆಯುತ್ತಿರುವ "ಬಾಲಕಾರ್ಮಿಕರ ವಿರುದ್ಧ ಕಾರ್ಯಾಚರಣೆ ಮಾಸ" ಕಾರ್ಯಕ್ರಮದಡಿ ದೇವನಹಳ್ಳಿ ತಾಲ್ಲೂಕಿನಲ್ಲಿ ನಡೆಸಿದ ಅನಿರೀಕ್ಷಿತ ತಪಾಸಣೆಯಲ್ಲಿ ಇಬ್ಬರು ಕಿಶೋರ ಕಾರ್ಮಿಕರನ್ನು ರಕ್ಷಿಸಲಾಗಿದೆ.

ಕಾರ್ಮಿಕ ನಿರೀಕ್ಷಕರು, ಜಿಲ್ಲಾ ಬಾಲಕಾರ್ಮಿಕ ಯೋಜನೆಯ ಯೋಜನಾ ನಿರ್ದೇಶಕರು ಹಾಗೂ ಮಕ್ಕಳ ಸಹಾಯವಾಣಿ 1098ರ ಸಿಬ್ಬಂದಿ ಜಂಟಿಯಾಗಿ ದೇವನಹಳ್ಳಿ ತಾಲ್ಲೂಕಿನ ವಿವಿಧ ವಾಣಿಜ್ಯ ಸಂಸ್ಥೆಗಳಲ್ಲಿ ಬಾಲ ಮತ್ತು ಕಿಶೋರ ಕಾರ್ಮಿಕರನ್ನು ದುಡಿಸಿಕೊಳ್ಳುತ್ತಿರುವ ಕುರಿತು ಪರಿಶೀಲನೆ ನಡೆಸಿದರು.



ತಪಾಸಣೆ ವೇಳೆ ಸ್ವರ್ಣಾದ್ರಿ ಪ್ಯಾಲೇಸ್ ಸಂಸ್ಥೆಯಲ್ಲಿ ಕೆಲಸ ನಿರ್ವಹಿಸುತ್ತಿದ್ದ ಇಬ್ಬರು ಕಿಶೋರ ಕಾರ್ಮಿಕರು ಪತ್ತೆಯಾಗಿದ್ದು, ಅಧಿಕಾರಿಗಳು ಅವರನ್ನು ತಕ್ಷಣ ರಕ್ಷಿಸಿದರು.

ರಕ್ಷಿಸಲಾದ ಕಿಶೋರರನ್ನು ಬಳಿಕ ಅಗತ್ಯ ಕ್ರಮಕ್ಕಾಗಿ ಮಕ್ಕಳ ಕಲ್ಯಾಣ ಸಮಿತಿಯ ಮುಂದೆ ಹಾಜರುಪಡಿಸಲಾಯಿತು. ಬಾಲ ಮತ್ತು ಕಿಶೋರ ಕಾರ್ಮಿಕರನ್ನು ದುಡಿಸಿಕೊಳ್ಳುವವರ ವಿರುದ್ಧ ಕಾನೂನುಬದ್ಧ ಕ್ರಮ ಕೈಗೊಳ್ಳಲಾಗುವುದು ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಬಾಲಕಾರ್ಮಿಕ ಪದ್ಧತಿಯನ್ನು ನಿರ್ಮೂಲನೆಗೊಳಿಸುವ ನಿಟ್ಟಿನಲ್ಲಿ ಇಂತಹ ತಪಾಸಣೆಗಳು ಮುಂದುವರಿಯಲಿದ್ದು, ಸಾರ್ವಜನಿಕರು ಸಹ ಬಾಲಕಾರ್ಮಿಕರನ್ನು ಕಂಡುಬಂದಲ್ಲಿ ಮಕ್ಕಳ ಸಹಾಯವಾಣಿ 1098ಕ್ಕೆ ಮಾಹಿತಿ ನೀಡುವಂತೆ ಮನವಿ ಮಾಡಲಾಗಿದೆ.

ಖಾಸಗಿ ಫೋಟೋ ವೈರಲ್ ಮಾಡುವುದಾಗಿ

## ಬೆದರಿಕೆ: ಮಹಿಳೆ ಅಂದರ್..!

ಬೆಂಗಳೂರು

ನಿಜವಾದ ಸ್ನೇಹಿತರನ್ನ ಹೊಂದಿರುವುದು ವರದಾನ, ಆದರೆ ಇತ್ತೀಚಿನ ದಿನಗಳಲ್ಲಿ ನಿಜವಾಗಿಯೂ ಇತರರ ಬಗ್ಗೆ ಕಾಳಜಿ ವಹಿಸುವ ಮತ್ತು ಬೆಂಬಲಿಸುವ ಜನರನ್ನು ಕಂಡು ಹಿಡಿಯುವುದು ಕಷ್ಟ.

ನಮ್ಮೊಂದಿಗಿರುವವರು ಶತ್ರುಗಳಾ ಮಿತ್ರರಾ ಎಂಬುದು ನಮಗೆ ತಿಳಿದಿರುವುದಿಲ್ಲ. ಒಳ್ಳೆಯವರಂತೆ ನಟಿಸುವ ವಿಷಕಾರಿ ಜನರೊಂದಿಗೆ ನಾವು ಇರಬಹುದು. ಇದಕ್ಕೆ ಚಾಮರಾಜಪೇಟೆಯಲ್ಲಿ ನಡೆದಿರುವ ಘಟನೆ ತಾಜಾ ಉದಾಹರಣೆಯಾಗಿದೆ.

ಬಾಯ್‌ಫ್ರೆಂಡ್ ಜೊತೆ ಸಲುಗೆ ಬೆಳೆಸಿದ್ದಕ್ಕೆ ಸೇಡು ತೀರಿಸಿಕೊಳ್ಳಲು ಹೋದ ಮಹಿಳೆ ಈಗ ಜೈಲು ಸೇರಿದ್ದಾಳೆ. ತನ್ನ ಸ್ನೇಹಿತೆಯ ಖಾಸಗಿ ಫೋಟೋಗಳನ್ನ ವೈರಲ್ ಮಾಡುವುದಾಗಿ ಬೆದರಿಕೆ ಹಾಕಿದ ಆರೋಪದ ಮೇಲೆ ಮಹಿಳೆಯೊಬ್ಬರನ್ನ ಪೊಲೀಸರು ಬಂಧಿಸಿದ್ದಾರೆ.

## 27ಕ್ಕೆ ಕೆಂಪೇಗೌಡ ಥೀಮ್ ಪಾರ್ಕ್ ಲೋಕಾರ್ಪಣೆ

ಬೆಂ. ಗ್ರಾ. ಜಿಲ್ಲೆ



ಇದೇ 27ಕ್ಕೆ ನಾಡಪ್ರಭು ಕೆಂಪೇಗೌಡರ ಜಯಂತಿ ದಿನದಂದು ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ನಿರ್ಮಾಣಗೊಂಡಿರುವ ಕೆಂಪೇಗೌಡ ಥೀಮ್ ಪಾರ್ಕ್ ಅನ್ನು ಮುಖ್ಯಮಂತ್ರಿ ಡಿ.ಕೆ ಶಿವಕುಮಾರ್ ಅವರು ಲೋಕಾರ್ಪಣೆ ಮಾಡಲಿದ್ದಾರೆ ಎಂದು ಆಹಾರ ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಸಚಿವರಾದ ಕೆ.ಹೆಚ್ ಮುನಿಯಪ್ಪ ಹೇಳಿದರು.

ಜಿಲ್ಲಾಡಳಿತ ಭವನದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಶುಕ್ರವಾರ ನಡೆದ ಕೆಂಪೇಗೌಡ ಜಯಂತಿ ಪೂರ್ವಭಾವಿ ಸಿದ್ದತಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ದೇವನಹಳ್ಳಿಯ ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ 108 ಅಡಿ ಎತ್ತರದ ಬೆಂಗಳೂರು ನಿರ್ಮಾತೃ ಕೆಂಪೇಗೌಡರ ಭವ್ಯ ಕಂಚಿನ ಪ್ರತಿಮೆ ಬಳಿ ಅಂದಾಜು 20 ಕೋಟಿ ರೂ.ಗಳ ವೆಚ್ಚದಲ್ಲಿ ಕೆಂಪೇಗೌಡ ತೀಮ್ ಪಾರ್ಕ್ ನಿರ್ಮಿಸಲಾಗಿದ್ದು ಜೂನ್ 27 ರಂದು ಮುಖ್ಯಮಂತ್ರಿಗಳು ಬೆಳಿಗ್ಗೆ 8.30 ಕ್ಕೆ ಲೋಕಾರ್ಪಣೆ ಮಾಡಲಿದ್ದಾರೆ ಎಂದರು.

ರಾಜ್ಯ ಮಟ್ಟದ ಕಾರ್ಯಕ್ರಮವು ಬೆಂಗಳೂರು ನಗರದ ಕೆಂಗೇರಿಯ ಕೆಂಪೇಗೌಡ ಬಡಾವಣೆಯಲ್ಲಿ ಆಚರಿಸಲು ತೀರ್ಮಾನಿಸಲಾಗಿದೆ. ಕೆಂಪೇಗೌಡರ ವಂಶಸ್ಥರು ನೆಲೆಸಿದ್ದಂತ ದೇವನಹಳ್ಳಿ ತಾಲ್ಲೂಕಿನ ಆವತಿ ಗ್ರಾಮದಿಂದ ಪ್ರತಿ ವರ್ಷದಂತೆ ಈ ವರ್ಷವೂ ಜ್ಯೋತಿ ಹೊರಡಲಿದೆ ಎಂದು ಹೇಳಿದರು.

ರಾಜ್ಯ ಮಟ್ಟದ ಕಾರ್ಯಕ್ರಮಕ್ಕೆ ಜಿಲ್ಲೆಯಿಂದ ಕನಿಷ್ಠ 5000 ಜನ ಹೊರಡಬೇಕಿದೆ. ಆವತಿಯಿಂದ ಜ್ಯೋತಿ, ಜೊತೆಗೆ ಏರ್ಪೋರ್ಟ್ ಲಿ ಸಿಎಂ ಕಾರ್ಯಕ್ರಮ, ರಾಜ್ಯ ಮಟ್ಟದ ಕಾರ್ಯಕ್ರಮ ಒಂದೇ ದಿನ ಇರುವುದರಿಂದ ಏಕಕಾಲದಲ್ಲಿ ರಾಜ್ಯ ಹಾಗೂ ಜಿಲ್ಲಾ ಮಟ್ಟದ ಕಾರ್ಯಕ್ರಮದಲ್ಲಿ ಜನರು ಭಾಗಿಯಾಗಲು ಸಾಧ್ಯವಾಗುವುದಿಲ್ಲ. ಹಾಗಾಗಿ ಜಿಲ್ಲಾ ಮಟ್ಟದ ಕೆಂಪೇಗೌಡ ಜಯಂತಿ ಕಾರ್ಯಕ್ರಮವನ್ನು ವಿಜೃಂಭಣೆಯಿಂದ ಆಚರಿಸಲು ಬೇರೊಂದು ದಿನ ಆಯೋಜಿಸಲು ತೀರ್ಮಾನಿಸಲಾಗಿದ್ದು ಸಮುದಾಯದ ಮುಖಂಡರ ಜೊತೆ ಚರ್ಚಿಸಿ ದಿನಾಂಕ ನಿಗದಿ ಪಡಿಸಲಾಗುವುದು ಎಂದು ಸಚಿವರು ತಿಳಿಸಿದರು.

ಜೂನ್ 27 ರಂದು ಜಿಲ್ಲೆಯಲ್ಲಿ ಜಿಲ್ಲಾಡಳಿತ ಭವನದ ಆವರಣದಲ್ಲಿರುವ ನಾಡಪ್ರಭು ಕೆಂಪೇಗೌಡರ ಪುತ್ಥಳಿಗೆ ಬೆಳಗ್ಗೆ 7.30 ಕ್ಕೆ ಮಾಲಾರ್ಪಣೆ ಮಾಡಲಾಗುವುದು, ನಂತರ ಬೆಳಗ್ಗೆ 08 ಗಂಟೆಗೆ ಆವತಿಯಲ್ಲಿ ಜ್ಯೋತಿ ಹೊರಡಲು ಚಾಲನೆ ನೀಡಲಾಗುವುದು. ಬೆಳಗ್ಗೆ 8.30ಕ್ಕೆ ಏರ್ಪೋರ್ಟ್ ಲಿ ಕೆಂಪೇಗೌಡ ಥೀಮ್ ಪಾರ್ಕ್ ಲೋಕಾರ್ಪಣೆ ಕಾರ್ಯಕ್ರಮ ಜರುಗಲಿದ್ದು ಅಲ್ಲಿಂದ ರಾಜ್ಯ ಮಟ್ಟದ ಕಾರ್ಯಕ್ರಮಕ್ಕೆ ಹೊರಡಲಿದ್ದೇವೆ ಎಂದರು.

ರಾಜ್ಯ ಮಟ್ಟದ ಕಾರ್ಯಕ್ರಮಕ್ಕೆ ಹೊರಡಲು ಜಿಲ್ಲೆಯ ನಾನಾ ಭಾಗಗಳಿಂದ ಬೆಳಗ್ಗೆ 07 ಗಂಟೆಗೆ ಬಸ್ ವ್ಯವಸ್ಥೆ ಮಾಡಲಾಗುವುದು, ಜೊತೆಗೆ ಉಪಹಾರ ಇರಲಿದೆ. ಜಿಲ್ಲೆಯ ಎಲ್ಲಾ ಸಂಘಟನೆಗಳ ಮುಖಂಡರು, ಸಮುದಾಯ ಮುಖಂಡರು, ಸಾರ್ವಜನಿಕರು ಪಕ್ಷಾತೀತವಾಗಿ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಎಂದು ಸಚಿವರು ಮನವಿ ಮಾಡಿದರು.

ಸಭೆಯಲ್ಲಿ ಜಿಲ್ಲಾಧಿಕಾರಿ ಡಾ. ಕೆ.ಎನ್ ಅನುರಾಧ, ಸಿಇಒ ಡಾ. ವಾಸಂತಿ ಅಮರ್, ಗ್ಯಾರಂಟಿ ಯೋಜನೆ ಅನುಷ್ಠಾನ ಪ್ರಾಧಿಕಾರದ ಜಿಲ್ಲಾಧ್ಯಕ್ಷ ರಾಜಣ್ಣ ಸೇರಿದಂತೆ ಜಿಲ್ಲಾ ಮಟ್ಟದ ಅಧಿಕಾರಿಗಳು, ವಿವಿಧ ಸಂಘ ಸಂಸ್ಥೆಗಳ ಮುಖಂಡರು, ಸದಸ್ಯರು ಉಪಸ್ಥಿತರಿದ್ದರು.

Printed by gandasi sadananda swamy, published by gandasi sadanandaswamy, owned by gandasi sadananda swamy. Printed at LAVANYA MUDRANA No. 79, TR mill, compound, 5th main 9th corss, Chamarajpet Bangalore-560018, published at No.531, prakruthi nilaya, kalikanagar, Andrahalli, Vishwaneedam Post, Bangalore-560091. Editor: Gandasi sadanandaswamy